Volume : 9 | Issue : 173 | September : 26 : 2026 : Saturday
ಸಂಪುಟ : 9 | ಸಂಚಿಕೆ : 173 | ಸೆಪ್ಟಂಬರ್ : 26 : 2026 : ಶನಿವಾರ

www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||
VIKRAMA VAHINI
PRGI NO: KA… 78481





ಸಂಜಯ್ ಲೀಲಾ ಬನ್ಸಾಲಿ ನಿರ್ದೇಶನದ ಚಿತ್ರದ ಮೊದಲ ನೋಟದಲ್ಲಿ ಆಲಿಯಾ ಭಟ್ ಕಬರೆ ಶೈಲಿಯ ಮಿಂಚುವ ಅವತಾರದಲ್ಲಿ ಕಾಣಿಸಿಕೊಂಡಿದ್ದಾರೆ. ರಣಬೀರ್ ಕಪೂರ್ ಹಾಗೂ ವಿಕ್ಕಿ ಕೌಶಲ್ ಪ್ರಮುಖ ಪಾತ್ರಗಳಲ್ಲಿ ನಟಿಸಿರುವ ಚಿತ್ರ 2027ರ ಜ.21ರಂದು ತೆರೆಗೆ ಬರಲಿದೆ.

ಸುರ್ಜೇವಾಲ-ಡಿಕೆಶಿ ಮಾತುಕತೆ: ಸಂಪುಟ, ಚುನಾವಣೆ ಸಿದ್ಧತೆ ಚರ್ಚೆ | ಪುಟ 2

'ರೂ 2,500 ಪರಿಹಾರ ನೀಡಿ ರೈತರನ್ನು ಅವಮಾನಿಸಲಾಗಿದೆ' | ಪುಟ 3

# ಪತ್ನಿ ಹತ್ಯೆ: ಬಾರ್‌ಕೋಡ್‌ನಿಂದ ಆರೋಪಿ ಪತ್ತೆ

● ವಿಕ್ರಮ ವಾಹಿನಿ । ಬೆಂಗಳೂರು



**ಹಣಕಾಸಿನ ವಿಚಾರಕ್ಕೆ ಪತ್ನಿಯನ್ನು ಹತ್ಯೆ ಮಾಡಿ ಸೈಟ್‌ನಲ್ಲಿ ಶವ ಬಿಸಾಕಿದ್ದ ಪತಿಯನ್ನು ಸಂಪಿಗೆಹಳ್ಳಿ ಪೊಲೀಸರು ಬಂಧಿಸಿದ್ದು, ಕೊಳೆತ ಸ್ಥಿತಿಯಲ್ಲಿ ಪತ್ತೆಯಾದ ಶವದ ಬಟ್ಟೆಯ ಬಾರ್‌ಕೋಡ್ ಹಾಗೂ ಇತರ ಸುಳಿವುಗಳ ಆಧಾರದಲ್ಲಿ ಪ್ರಕರಣವನ್ನು ಭೇದಿಸಿದ್ದಾರೆ. ಪತ್ನಿಯ ಸಿಮ್ ಕಾರ್ಡ್ ಬಳಸುತ್ತಿದ್ದ ಆರೋಪಿಯ ಚಲನವಲನದ ಮೇಲೂ ಪೊಲೀಸರು ನಿಗಾ ಇರಿಸಿ, ವಿಚಾರಣೆ ಬಳಿಕ ಹತ್ಯೆಯ ರಹಸ್ಯ ಬಯಲಿಗೆಳೆದಿದ್ದಾರೆ.**

ಹಣಕಾಸಿನ ವಿಚಾರಕ್ಕೆ ಪತ್ನಿಯನ್ನು ಹತ್ಯೆ ಮಾಡಿ, ಶವವನ್ನು ಮನೆಯ ಸಮೀಪದ ನಿವೇಶನವೊಂದರಲ್ಲಿ ಬಿಸಾಕಿ ಪರಾರಿಯಾಗಿದ್ದ ಪತಿಯನ್ನು ಸಂಪಿಗೆಹಳ್ಳಿ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಕೊಳೆತ ಹಾಗೂ ಅಸ್ಥಿಪಂಜರದ ಸ್ಥಿತಿಯಲ್ಲಿ ಪತ್ತೆಯಾಗಿದ್ದ ಶವದ ಮೇಲೆ ದೊರೆತ ಬಟ್ಟೆಯ ಬಾರ್‌ಕೋಡ್ ತನಿಖೆಗೆ ಮಹತ್ವದ ಸುಳಿವು ನೀಡಿದ್ದು, ಅದರ ಆಧಾರದಲ್ಲಿ ಮಹಿಳೆಯ ಗುರುತು ಪತ್ತೆಹಚ್ಚಿ ಆರೋಪಿಯನ್ನು ಬಂಧಿಸಲಾಗಿದೆ.

ಅನುಸೂಯ ಬೇಹೆರಾ (28) ಹತ್ಯೆಯಾದ ಮಹಿಳೆ. ಒಡಿಶಾ ಮೂಲದ ಸಾಗರ್ ಚಂದ್ರ ರಾವತ್ (32) ಬಂಧಿತ ಆರೋಪಿ. ಹಣಕಾಸಿನ ವಿಚಾರಕ್ಕೆ ದಂಪತಿ ನಡುವೆ ಆಗಾಗ ಜಗಳ ನಡೆಯುತ್ತಿತ್ತು. ಆ.11ರಂದು ನಡೆದ ಜಗಳದ ವೇಳೆ ಪತ್ನಿಯ ಕೆನ್ನೆಗೆ ಹೊಡೆದಿದ್ದು, ಆಕೆ ಪ್ರಜ್ಞೆ ತಪ್ಪಿ ಬಿದ್ದ ಬಳಿಕ ಕುತ್ತಿಗೆ ಹಿಸುಕಿ ಹತ್ಯೆ ಮಾಡಿರುವುದಾಗಿ ಆರೋಪಿ ವಿಚಾರಣೆ ವೇಳೆ ಒಪ್ಪಿಕೊಂಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

**ನಾಲ್ಕು ದಿನ ಮನೆಯಲ್ಲೇ ಶವ:** ಅನುಸೂಯ ಹಾಗೂ ಸಾಗರ್ ಎರಡು ವರ್ಷಗಳ ಹಿಂದೆ ಮನೆಯವರಿಗೆ ತಿಳಿಸದೆ ಪ್ರೇಮ ವಿವಾಹವಾಗಿದ್ದರು. ಕಳೆದ ಒಂದೂವರೆ ತಿಂಗಳಿಂದ ಸಂಪಿಗೆಹಳ್ಳಿಯ ಎನ್.ಎಸ್.ಅಗ್ರಹಾರ ಲೇಔಟ್‌ನಲ್ಲಿ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದರು. ಇಬ್ಬರೂ ಪ್ರತ್ಯೇಕ ಹೋಟೆಲ್ ಗಳಲ್ಲಿ ಕೆಲಸ ಮಾಡುತ್ತಿದ್ದರು.

ಹತ್ಯೆ ಬಳಿಕ ಗಾಬರಿಗೊಂಡ ಆರೋಪಿ ನಾಲ್ಕು ದಿನಗಳ ಕಾಲ ಕೆಲಸಕ್ಕೆ ಹೋಗದೆ ಶವವನ್ನು ಮನೆಯಲ್ಲೇ ಇಟ್ಟುಕೊಂಡಿದ್ದ. ಬಳಿಕ ಆ.16ರಂದು ಬೆಳಗಿನ ಜಾವ 3 ಗಂಟೆ ಸುಮಾರಿಗೆ ಬೆಡ್‌ಶೀಟ್‌ನಲ್ಲಿ ಸುತ್ತಿದ ಶವವನ್ನು ಮನೆಯ ಸಮೀಪದ ನಿವೇಶನದಲ್ಲಿ ಬಿಸಾಕಿ ಪರಾರಿಯಾಗಿದ್ದ. ಗಿಡಗಂಟಿ ಹಾಗೂ ಕಸದಿಂದಾಗಿ ಶವ ಕೆಲ ದಿನ ಯಾರ ಗಮನಕ್ಕೂ ಬಂದಿರಲಿಲ್ಲ. ಬಳಿಕ ನಿವೇಶನ ಸ್ವಚ್ಛಗೊಳಿಸುವ ಸಂದರ್ಭದಲ್ಲಿ ಶವ ಪತ್ತೆಯಾಗಿತ್ತು.

**ಸೆ.2ರಂದು ಶವ ಪತ್ತೆ:** ನಿವೇಶನದಲ್ಲಿ ಪತ್ತೆಯಾದ ಮಹಿಳೆಯ ಶವ ಕೊಳೆತು ಅಸ್ಥಿಪಂಜರದಂತಾಗಿದ್ದರಿಂದ ಗುರುತು ಪತ್ತೆಹಚ್ಚುವುದು ಪೊಲೀಸರಿಗೆ ಸವಾಲಾಗಿತ್ತು. ವಾರಸುದಾರರು ಪತ್ತೆಯಾಗದ ಹಿನ್ನೆಲೆಯಲ್ಲಿ ಕಾನೂನು ಪ್ರಕ್ರಿಯೆಯಂತೆ ಅಂತ್ಯಸಂಸ್ಕಾರ ನೆರವೇರಿಸಲಾಗಿತ್ತು. ಆದರೆ ಶವದ ಮೇಲಿದ್ದ ಬಟ್ಟೆಯ ಬಾರ್‌ಕೋಡ್ ಪೊಲೀಸರಿಗೆ ಪ್ರಮುಖ ಸುಳಿವು ನೀಡಿತು.

ಬಾರ್‌ಕೋಡ್ ಸ್ಕ್ಯಾನ್ ಮಾಡಿದಾಗ ಬಟ್ಟೆಯನ್ನು ಒಂದು ತಿಂಗಳ ಹಿಂದೆ ಒಡಿಶಾದ ಭುವನೇಶ್ವರದ ಮಳಿಗೆಯೊಂದರಲ್ಲಿ ಖರೀದಿಸಿರುವುದು ಪತ್ತೆಯಾಯಿತು.

ಖರೀದಿ ವೇಳೆ ಅನುಸೂಯ ನೀಡಿದ್ದ ಮೊಬೈಲ್ ಸಂಖ್ಯೆಯನ್ನು ಮಳಿಗೆ ಸಿಬ್ಬಂದಿ ಒಂದು ಅಂಕೆ ತಪ್ಪಾಗಿ ದಾಖಲಿಸಿದ್ದರಿಂದ ಗುರುತು ಪತ್ತೆಗೆ ಆರಂಭದಲ್ಲಿ ತೊಡಕು ಉಂಟಾಗಿತ್ತು. ಆದರೂ ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ಮುಂದುವರಿಸಿದರು.

**ಹೋಟೆಲ್ ಮ್ಯಾನೇಜರ್‌ನಿಂದ ಮಹತ್ವದ ಮಾಹಿತಿ:** ಮತ್ತೊಂದೆಡೆ, ಪತ್ನಿಯನ್ನು ಹತ್ಯೆ ಮಾಡಿದ ನಾಲ್ಕು ದಿನಗಳ ಬಳಿಕ ಸಾಗರ್ ಕೆಲಸಕ್ಕೆ ಹಾಜರಾಗಿದ್ದ. ಆತನ ವರ್ತನೆ ಸಂಶಯಾಸ್ಪದವಾಗಿ ಕಂಡುಬಂದ ಹಿನ್ನೆಲೆಯಲ್ಲಿ ಹೋಟೆಲ್ ಮ್ಯಾನೇಜರ್ ಪೊಲೀಸರಿಗೆ ಮಾಹಿತಿ ನೀಡಿದ್ದರು. ಹತ್ಯೆಯ ದಿನ ಹೋಟೆಲ್ ಬಳಿ ಅನುಸೂಯ ಪತಿಯೊಂದಿಗೆ ಜಗಳವಾಡಿದ್ದನ್ನೂ ಕೆಲವರು ಗಮನಿಸಿದ್ದರು.

ಪೊಲೀಸರು ಸಾಗರ್‌ನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ, ಆರಂಭದಲ್ಲಿ ಪತ್ನಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಹೇಳಿದ್ದ. ಬಳಿಕ ತೀವ್ರ ವಿಚಾರಣೆಯಲ್ಲಿ ಹತ್ಯೆ ಮಾಡಿರುವುದಾಗಿ ಒಪ್ಪಿಕೊಂಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

**ಪತ್ನಿಯ ಸಿಮ್ ಬಳಸಿ ಹಣ ಪಡೆದಿದ್ದ:** ಹತ್ಯೆಯ ಬಳಿಕ ಅನುಸೂಯ ಬಳಸುತ್ತಿದ್ದ ಸಿಮ್ ಕಾರ್ಡ್‌ನ್ನು ಸಾಗರ್ ತನ್ನ ಮೊಬೈಲ್‌ಗೆ ಹಾಕಿಕೊಂಡಿದ್ದ. ಸಂಬಂಧಿಕರು ಹಾಗೂ ಪರಿಚಯಸ್ಥರು ಕರೆ ಮಾಡಿದರೂ ಸ್ವೀಕರಿಸುತ್ತಿರಲಿಲ್ಲ. ಈ ನಡುವೆ ಅನುಸೂಯ ತಂದೆಗೆ ಸಂದೇಶ ಕಳುಹಿಸಿ ತೊಂದರೆಯಲ್ಲಿರುವುದಾಗಿ ಹಾಗೂ ಹಣದ ಅಗತ್ಯವಿದೆ ಎಂದು ತಿಳಿಸಿದ್ದ. ಇದಕ್ಕೆ ಪ್ರತಿಯಾಗಿ ತಂದೆ 1,000 ಫೋನ್‌ಪೇ ಮಾಡಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಯನ್ನು ಬಂಧಿಸಿರುವ ಪೊಲೀಸರು ಹೆಚ್ಚಿನ ತನಿಖೆ ಮುಂದುವರಿಸಿದ್ದು, ಸಾಗರ್‌ನನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

## ■ ಸುದ್ದಿ ಚುಟುಕು

### ಕೆಪಿಎಸ್‌ಸಿ ಹಗರಣ: ಗ್ಯಾನೇಂದ್ರ ಕುಮಾರ್‌ಗೆ ಜಾಮೀನು ಇಲ್ಲ

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ನಡೆಸಿದ್ದ ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಅಕ್ರಮ ಪ್ರಕರಣದಲ್ಲಿ ಬಂಧಿತರಾಗಿರುವ ಅಮಾನತುಗೊಂಡ ಐಎಎಸ್ ಅಧಿಕಾರಿ ಗ್ಯಾನೇಂದ್ರ ಕುಮಾರ್ ಅವರ ಜಾಮೀನು ಅರ್ಜಿಯನ್ನು ನಗರದ 52ನೇ ಸಿಸಿಹೆಚ್ ನ್ಯಾಯಾಲಯ ಶುಕ್ರವಾರ ವಜಾಗೊಳಿಸಿದೆ.

ಜಾಮೀನು ಕೋರಿ ಗ್ಯಾನೇಂದ್ರ ಕುಮಾರ್ ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ ನ್ಯಾಯಾಲಯ, ಅದನ್ನು ತಿರಸ್ಕರಿಸಿ ಆದೇಶ ಹೊರಡಿಸಿದೆ. ಪ್ರಕರಣದಲ್ಲಿ ಗ್ಯಾನೇಂದ್ರ ಕುಮಾರ್ ಹಾಗೂ ಬಿಜೆಪಿ ಮುಖಂಡ ಮತ್ತು ತುಮಕೂರು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಬಸವರಾಜ್ ಕನ್ನಾಳೆ ಬಂಧಿತರಾಗಿ ನ್ಯಾಯಾಂಗ ಬಂಧನದಲ್ಲಿದ್ದಾರೆ.

ಪ್ರಕರಣದ ಹಿನ್ನೆಲೆ: ಪಶುವೈದ್ಯಾಧಿಕಾರಿ ನೇಮಕಾತಿ ಪರೀಕ್ಷೆಯ ಫಲಿತಾಂಶ ಪ್ರಕಟವಾದ ಬಳಿಕ 50ಕ್ಕೂ ಹೆಚ್ಚು ಅಭ್ಯರ್ಥಿಗಳು ವಿಧಾನಸೌಧ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

ಪ್ರತಿ ಹುದ್ದೆಗೆ 70ರಿಂದ 80 ಲಕ್ಷದವರೆಗೆ ಹಣಕ್ಕೆ ಬೇಡಿಕೆ ಇಡಲಾಗಿದೆ ಎನ್ನಲಾದ ಆಡಿಯೊ ಸಂಭಾಷಣೆಗಳು ಬಹಿರಂಗಗೊಂಡ ಹಿನ್ನೆಲೆಯಲ್ಲಿ ಪ್ರಕರಣದ ತನಿಖೆಯನ್ನು ರಾಜ್ಯ ಸರ್ಕಾರ ಸಿಐಡಿಗೆ ವಹಿಸಿತ್ತು.

ನೇಮಕಾತಿ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಗಳ ಕುರಿತು ಸಿಐಡಿ ತನಿಖೆ ಮುಂದುವರಿದಿದ್ದು, ಪ್ರಕರಣದಲ್ಲಿ ಬಂಧಿತರಾಗಿರುವ ಆರೋಪಿಗಳ ವಿರುದ್ಧ ತನಿಖಾ ಪ್ರಕ್ರಿಯೆ ನಡೆಯುತ್ತಿದೆ.

### ಬೆಳೆ ಉಳಿಸಿಕೊಳ್ಳಲು ಅಧಿಕಾರಿಗಳ ಕಾಲಿಗೆ ಬಿದ್ದ ರೈತ

● ವಿಕ್ರಮ ವಾಹಿನಿ । ರಾಯಚೂರು

ತೀವ್ರ ಬರಗಾಲದ ನಡುವೆಯೇ ಸಮರ್ಪಕ ವಿದ್ಯುತ್ ಪೂರೈಕೆಯಿಲ್ಲದೆ ಬೆಳೆಗಳನ್ನು ಉಳಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಆಕ್ರೋಶಗೊಂಡ ರೈತರೊಬ್ಬರು ಜೆಸ್ಕಾಂ ಅಧಿಕಾರಿಗಳ ಕಾಲಿಗೆ ಬಿದ್ದು ಮನವಿ ಮಾಡಿದ ಘಟನೆ ಜಿಲ್ಲೆಯ ಯಾಪಲದಿನ್ನಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ರೈತ ಜಯನ ನಾಯಕ್ ಅವರು, ಹಿಂದೆ ಕೃಷಿ ಚಟುವಟಿಕೆಗಳಿಗೆ 12 ಗಂಟೆಗಳ ಕಾಲ ವಿದ್ಯುತ್ ಪೂರೈಕೆಯಾಗುತ್ತಿತ್ತು. ಆದರೆ ಇತ್ತೀಚೆಗೆ 6–7 ಗಂಟೆಗಳಷ್ಟೇ ವಿದ್ಯುತ್ ನೀಡಲಾಗುತ್ತಿದ್ದು, ಇದರಿಂದ ಜಮೀನಿನಲ್ಲಿರುವ ಬೆಳೆಗಳಿಗೆ ನೀರು ಹಾಯಿಸಲು ಸಾಧ್ಯವಾಗುತ್ತಿಲ್ಲ ಎಂದು ಅಳಲು ತೋಡಿಕೊಂಡಿದ್ದಾರೆ.

ಅಧಿಕಾರಿಗಳ ಬಳಿ ಕಣ್ಣೀರಿಟ್ಟು ಮನವಿ ವಿದ್ಯುತ್ ಪೂರೈಕೆಯ ಅವಧಿಯನ್ನು ಕಡಿತಗೊಳಿಸಿರುವುದರಿಂದ ಬೆಳೆಗಳು ಒಣಗುವ ಆತಂಕ ಎದುರಾಗಿದೆ. 'ಮೊದಲಿನಂತೆ 12 ಗಂಟೆ ವಿದ್ಯುತ್ ನೀಡಿ. ಇಲ್ಲವಾದರೆ ಬೆಳೆಗಳು ಹಾಳಾಗಿ ನಮ್ಮ ಬದುಕು ಬೀದಿಗೆ ಬರುತ್ತದೆ' ಎಂದು ಜಯನ ನಾಯಕ್ ಅವರು ಅಧಿಕಾರಿಗಳಲ್ಲಿ ಮನವಿ ಮಾಡಿದ್ದಾರೆ. ಈ ವೇಳೆ ಅವರು ಅಧಿಕಾರಿಯೊಬ್ಬರ ಕಾಲಿಗೆ ಬಿದ್ದು ತಮ್ಮ ಅಸಹಾಯಕತೆಯನ್ನು ತೋಡಿಕೊಂಡಿದ್ದಾರೆ. ಘಟನೆಯ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ರೈತರ ಪರಿಸ್ಥಿತಿ ಕುರಿತು ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ. ಬರ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಕೃಷಿ ಬೆಳೆಗಳನ್ನು ಉಳಿಸಿಕೊಳ್ಳಲು ಸಮರ್ಪಕ ವಿದ್ಯುತ್ ಪೂರೈಕೆ ಕಲ್ಪಿಸಬೇಕು ಎಂದು ರೈತರು ಆಗ್ರಹಿಸಿದ್ದಾರೆ.

ಮಳೆ ಕೊರತೆಯಿಂದಾಗಿ ಜಮೀನುಗಳಲ್ಲಿ ನೀರಿನ ಲಭ್ಯತೆ ಕಡಿಮೆಯಾಗಿದ್ದು, ಇರುವ ನೀರನ್ನು ಬಳಸಿಕೊಂಡು ಬೆಳೆಗಳನ್ನು ಉಳಿಸಿಕೊಳ್ಳಲು ರೈತರು ವಿದ್ಯುತ್ ಪೂರೈಕೆಯನ್ನೇ ಅವಲಂಬಿಸಿದ್ದಾರೆ.

ಕೃಷಿ ಚಟುವಟಿಕೆಗಳ ನಿರ್ಣಾಯಕ ಹಂತದಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾದರೆ ರೈತರಿಗೆ ಆರ್ಥಿಕ ನಷ್ಟ ಉಂಟಾಗುವ ಸಾಧ್ಯತೆ ಇದೆ. ಹೀಗಾಗಿ ಬರ ಪರಿಸ್ಥಿತಿಯನ್ನು ಪರಿಗಣಿಸಿ ಕೃಷಿ ಪಂಪ್‌ಸೆಟ್‌ಗಳಿಗೆ ನಿಗದಿತ ಅವಧಿಯಲ್ಲಿ ನಿರಂತರ ವಿದ್ಯುತ್ ಪೂರೈಕೆ ಮಾಡಬೇಕು ಹಾಗೂ ರೈತರ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಸ್ಥಳೀಯ ರೈತರು ಒತ್ತಾಯಿಸಿದ್ದಾರೆ.

# ಪೌರಕಾರ್ಮಿಕರ ಭತ್ಯೆ ಹೆಚ್ಚಳ

● ವಿಕ್ರಮ ವಾಹಿನಿ । ಬೆಂಗಳೂರು



ಪೌರಕಾರ್ಮಿಕರ ಉಪಹಾರ ಭತ್ಯೆಯನ್ನು 35ರಿಂದ 70ಕ್ಕೆ ಹೆಚ್ಚಿಸಿ ಶೀಘ್ರದಲ್ಲೇ ಆದೇಶ ಹೊರಡಿಸಲಾಗುವುದು. ಪೌರಕಾರ್ಮಿಕರ ವಿವಿಧ ಬೇಡಿಕೆಗಳ ಪರಿಶೀಲನೆಗೆ ಸಚಿವ ಸಂಪುಟ ಉಪಸಮಿತಿ ರಚಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಘೋಷಿಸಿದರು.

ಅರಮನೆ ಮೈದಾನದಲ್ಲಿ ಶುಕ್ರವಾರ ನಡೆದ ಪೌರಕಾರ್ಮಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪೌರಕಾರ್ಮಿಕರು ನಿತ್ಯ ಸ್ವಚ್ಛತಾ ಕಾರ್ಯದ ಮೂಲಕ ಸಮಾಜದ ಆರೋಗ್ಯ ಕಾಪಾಡುವ ಕಾಯಕಜೀವಿಗಳು. ಅವರ ಸೇವೆಗೆ ಗೌರವ ಹಾಗೂ ಭದ್ರತೆ ಒದಗಿಸುವುದು ಸರ್ಕಾರದ ಬದ್ಧತೆ ಎಂದರು.

**ಉಳಿದ ಪೌರಕಾರ್ಮಿಕರಿಗೂ ಖಾಯಂ:** ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಸಾವಿರಾರು ಪೌರಕಾರ್ಮಿಕರನ್ನು ಖಾಯಂ ಮಾಡಲಾಗಿದೆ. 2023ರಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ 12,609 ಪೌರಕಾರ್ಮಿಕರನ್ನು ಖಾಯಂ ಮಾಡಿದ್ದು, ಸ್ಥಳೀಯ ಸಂಸ್ಥೆಗಳಲ್ಲೂ 6 ಸಾವಿರ ಮಂದಿಯನ್ನು ನೇಮಕ ಮಾಡಲಾಗಿದೆ. ಉಳಿದ ಅರ್ಹ ಪೌರಕಾರ್ಮಿಕರನ್ನೂ ಖಾಯಂ ಮಾಡುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಬಿಡಬ್ಲ್ಯೂಎಸ್‌ಎಸ್‌ಬಿ ಹಾಗೂ ನೀರು ಸರಬರಾಜು ಇಲಾಖೆಯಲ್ಲಿ ಖಾಯಂ ಉದ್ಯೋಗದ ಮೂಲಕ ಪೌರಕಾರ್ಮಿಕರಿಗೆ ಸ್ವಾಭಿಮಾನದ ಬದುಕು ಕಲ್ಪಿಸಲು ಸರ್ಕಾರ ಬದ್ಧವಾಗಿದೆ ಎಂದರು.

**ಬೇಡಿಕೆಗಳ ಪರಿಶೀಲನೆಗೆ ಸಚಿವ ಸಂಪುಟ ಉಪಸಮಿತಿ**

ಪೌರಕಾರ್ಮಿಕರ ಮಂಡಳಿ, ಯೋಗಕ್ಷೇಮ ಹಾಗೂ ಕಲ್ಯಾಣ ನಿಧಿ ಸೇರಿದಂತೆ ವಿವಿಧ ಬೇಡಿಕೆಗಳನ್ನು ಪರಿಶೀಲಿಸಲು ಸಮಾಜ ಕಲ್ಯಾಣ, ನಗರಾಭಿವೃದ್ಧಿ ಇಲಾಖೆ ಹಾಗೂ ಸಂಬಂಧಿಸಿದ ಸಚಿವರನ್ನು ಒಳಗೊಂಡ ಸಚಿವ ಸಂಪುಟ ಉಪಸಮಿತಿ ರಚಿಸಲಾಗುವುದು. ಆರ್ಥಿಕ ಇಲಾಖೆಯೊಂದಿಗೆ ಚರ್ಚಿಸಿ ಅಗತ್ಯ ತೀರ್ಮಾನ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಪೌರಕಾರ್ಮಿಕರ ಸಮಸ್ಯೆಗಳನ್ನು ನೇರವಾಗಿ ಆಲಿಸಲು ಸರ್ಕಾರ ಬದ್ಧವಾಗಿದ್ದು, ಮಧ್ಯವರ್ತಿಗಳ ಅವಶ್ಯಕತೆ ಇಲ್ಲ ಎಂದರು.

**ಎರಡು ತಿಂಗಳಲ್ಲಿ ಪೌರಭವನ:** ಪೌರಕಾರ್ಮಿಕರಿಗಾಗಿ ಪ್ರತ್ಯೇಕ ಪೌರಭವನ ನಿರ್ಮಾಣಕ್ಕೆ ಮುಂದಿನ ಎರಡು ತಿಂಗಳಲ್ಲಿ ಶಂಕುಸ್ಥಾಪನೆ ನೆರವೇರಿಸಲಾಗುವುದು. ಪ್ರತಿ ವರ್ಷ ಸರ್ಕಾರದ ವತಿಯಿಂದ ಪೌರಕಾರ್ಮಿಕರ ದಿನಾಚರಣೆ ನಡೆಸಲಾಗುವುದು ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಪೌರಕಾರ್ಮಿಕರ ಮನೆ ನಿರ್ಮಾಣಕ್ಕೆ 7.50 ಲಕ್ಷ ನೀಡಲು ಸರ್ಕಾರ ತೀರ್ಮಾನಿಸಿದೆ. ಅವರ ಆರೋಗ್ಯ, ಕಲ್ಯಾಣ ಹಾಗೂ ಸಾಮಾಜಿಕ ಭದ್ರತೆಗೆ ಆದ್ಯತೆ ನೀಡಲಾಗುವುದು ಎಂದರು.

**ಮಕ್ಕಳಿಗಾಗಿ ಕೆಪಿಎಸ್ ಮಾದರಿ ವಸತಿ ಶಾಲೆ**

ಪೌರಕಾರ್ಮಿಕರ ಮಕ್ಕಳ ಶಿಕ್ಷಣಕ್ಕೆ ನಗರ ಪ್ರದೇಶಗಳಲ್ಲಿ ಕೆಪಿಎಸ್ ಮಾದರಿಯ ವಸತಿ ಶಾಲೆಗಳನ್ನು ನಿರ್ಮಿಸುವ ಗುರಿ ಹೊಂದಲಾಗಿದೆ.

ಮಕ್ಕಳು ಉತ್ತಮ ಶಿಕ್ಷಣ ಪಡೆದು ಐಎಎಸ್, ಕೆಎಎಸ್ ಸೇರಿದಂತೆ ಉನ್ನತ ಹುದ್ದೆಗಳಿಗೆ ಏರಬೇಕು. ಈ ಕುರಿತು ಸಂಬಂಧಿಸಿದ ಸಚಿವರೊಂದಿಗೆ ಚರ್ಚಿಸಲಾಗುವುದು ಎಂದು ತಿಳಿಸಿದರು.

# ಬಾಲಕಿ ಅತ್ಯಾಚಾರ, ಕೊಲೆ: ಎಸ್‌ಐಟಿ ರಚನೆಗೆ ತಾಯಿಯ ಆಕ್ಷೇಪ

● ವಿಕ್ರಮ ವಾಹಿನಿ । ಮಂಗಳೂರು

ತೀವ್ರ ಸಂಚಲನ ಮೂಡಿಸಿದ್ದ ಬೆಳ್ತಂಗಡಿ ಬಾಲಕಿ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಮರುತನಿಖೆಗಾಗಿ ರಾಜ್ಯ ಸರ್ಕಾರ ರಚಿಸಿರುವ ವಿಶೇಷ ತನಿಖಾ ದಳದ (ಎಸ್‌ಐಟಿ) ಸ್ವರೂಪದ ಬಗ್ಗೆ ಸಂತ್ರಸ್ತೆಯ ತಾಯಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸುಪ್ರೀಂಕೋರ್ಟ್ ನಿರ್ದೇಶನದಂತೆ ತನಿಖಾ ತಂಡದ ಮುಖ್ಯಸ್ಥರನ್ನು ನೇಮಕ ಮಾಡಿಲ್ಲ ಎಂದು ಅವರು ಪತ್ರಿಕಾ ಪ್ರಕಟಣೆಯಲ್ಲಿ ಆಕ್ಷೇಪಿಸಿದ್ದಾರೆ.

ಮರುತನಿಖೆಗೆ ಎಸ್‌ಐಟಿ ರಚನೆ: ಸುಪ್ರೀಂಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಸೆ.24ರಂದು ಪ್ರಕರಣದ ಮರುತನಿಖೆಗಾಗಿ ಅಧಿಕೃತವಾಗಿ ಎಸ್‌ಐಟಿ ರಚಿಸಿ ಆದೇಶ ಹೊರಡಿಸಿದೆ. ಹಿರಿಯ ಐಪಿಎಸ್ ಅಧಿಕಾರಿ, ಐಜಿಪಿ ಎನ್.ಶಶಿಕುಮಾರ್ ನೇತೃತ್ವದಲ್ಲಿ ತಂಡ ರಚಿಸಲಾಗಿದ್ದು, ಮಂಗಳೂರು ಪೊಲೀಸ್ ಆಯುಕ್ತ ಡಿಐಜಿ ಸಿ.ಹೆಚ್.ಸುಧೀರ್ ಕುಮಾರ್ ರೆಡ್ಡಿ, ರಾಜ್ಯ ಗುಪ್ತವಾರ್ತೆ ಎಸ್‌ಪಿ ನಿಶಾ ಜೇಮ್ಸ್, ಸಿಐಡಿ ಎಸ್‌ಪಿ ಲೋಕೇಶ್ ಜಗಲಸಾರ್ ಹಾಗೂ ಬೆಂಗಳೂರು ಗ್ರಾಮಾಂತರ ಹೆಚ್ಚುವರಿ ಎಸ್‌ಪಿ ವೆಂಕಟೇಶ್ ಪ್ರಸನ್ನ ಸದಸ್ಯರಾಗಿದ್ದಾರೆ.

ಡಿಎನ್‌ಎ ಪರಿಣಿತರ ನೇಮಕಕ್ಕೆ ಆಗ್ರಹ: ಪ್ರಕರಣದ ಸಮಗ್ರ ಹಾಗೂ ವೈಜ್ಞಾನಿಕ ತನಿಖೆಗೆ ಮೇಲ್ದರ್ಜೆಯ ಅಧಿಕಾರಿಯೊಂದಿಗೆ ಡಿಎನ್‌ಎ ತಂತ್ರಜ್ಞಾನದಲ್ಲಿ ಪರಿಣತಿ ಹೊಂದಿರುವ ತನಿಖಾಧಿಕಾರಿ ಅಗತ್ಯವಿದೆ ಎಂದು ಸಂತ್ರಸ್ತೆಯ ತಾಯಿ ಹೇಳಿದ್ದಾರೆ. ಸುಪ್ರೀಂಕೋರ್ಟ್ ತನ್ನ ಆದೇಶದಲ್ಲಿ ಈ ಕುರಿತು ಸ್ಪಷ್ಟ ನಿರ್ದೇಶನ ನೀಡಿದ್ದರೂ, ಅದರಂತೆ ಎಸ್‌ಐಟಿ ಮುಖ್ಯಸ್ಥರ ನೇಮಕವಾಗಿಲ್ಲ ಎಂಬುದು ಕುಟುಂಬದ ಆಕ್ಷೇಪವಾಗಿದೆ.

ಸುಪ್ರೀಂಕೋರ್ಟ್‌ಗೆ ಕೃತಜ್ಞತೆ: ಪ್ರಕರಣದ ಮರುತನಿಖೆಗೆ ಆದೇಶ ನೀಡಿರುವ ಸುಪ್ರೀಂಕೋರ್ಟ್‌ಗೆ ಕುಟುಂಬ ಕೃತಜ್ಞತೆ ಸಲ್ಲಿಸಿದೆ. ಆದರೆ, ರಾಜ್ಯ ಸರ್ಕಾರ ರಚಿಸಿರುವ ಎಸ್‌ಐಟಿಯ ಪ್ರಸ್ತುತ ಸ್ವರೂಪದ ಬಗ್ಗೆ ತೃಪ್ತಿ ಇಲ್ಲ ಎಂದು ಸಂತ್ರಸ್ತೆಯ ತಾಯಿ ತಿಳಿಸಿದ್ದಾರೆ.

# ಕೌಟುಂಬಿಕ ಪೋಕ್ಸೊ ಆರೋಪ: ತಕ್ಷಣ ಬಂಧನ ಬೇಡ– ಸುಪ್ರೀಂ

● ವಿಕ್ರಮ ವಾಹಿನಿ । ನವದೆಹಲಿ

ಕೌಟುಂಬಿಕ ಹಾಗೂ ಮಕ್ಕಳ ಪಾಲನೆ ವಿವಾದಗಳಲ್ಲಿ ಪೋಷಕರ ವಿರುದ್ಧ ಪೋಕ್ಸೊ ಆರೋಪ ಕೇಳಿಬಂದ ತಕ್ಷಣ ಅವರನ್ನು ಬಂಧಿಸಬಾರದು ಎಂದು ಸುಪ್ರೀಂ ಕೋರ್ಟ್ ಮಹತ್ವದ ನಿರ್ದೇಶನ ನೀಡಿದೆ. ಬಂಧನದ ಅಗತ್ಯವಿದೆಯೇ ಎಂಬುದನ್ನು ಕಾನೂನುಬದ್ಧ ಮಾನದಂಡಗಳ ಆಧಾರದಲ್ಲಿ ಪರಿಶೀಲಿಸಬೇಕು ಎಂದು ನ್ಯಾಯಮೂರ್ತಿಗಳಾದ ಜೆ.ಬಿ. ಪಾರ್ದಿವಾಲಾ ಹಾಗೂ ಕೆ.ವಿ. ವಿಶ್ವನಾಥನ್ ಅವರ ಪೀಠ ತಿಳಿಸಿದೆ.

ಕೇವಲ ಎಫ್‌ಐಆರ್ ದಾಖಲಾಗಿದೆ ಎಂಬ ಕಾರಣಕ್ಕೆ ಸ್ವಯಂಚಾಲಿತವಾಗಿ ಬಂಧನ ಮಾಡಬಾರದು. ಬಂಧನ ಅಥವಾ ಕಠಿಣ ಕ್ರಮಕ್ಕೂ ಮುನ್ನ ಮಗುವಿನ ಮನೋವೈಜ್ಞಾನಿಕ ಅಥವಾ ಮನೋವೈದ್ಯಕೀಯ ಮೌಲ್ಯಮಾಪನಕ್ಕೆ ತಜ್ಞರ ನೆರವು ಪಡೆಯಬೇಕು ಎಂದು ನ್ಯಾಯಾಲಯ ಸೂಚಿಸಿದೆ. ವಿಚ್ಛೇದನ ಹಾಗೂ ಮಕ್ಕಳ ಪಾಲನೆ ವಿವಾದಗಳಲ್ಲಿ ಪೋಕ್ಸೊ ಕಾಯ್ದೆಯ ದುರ್ಬಳಕೆ ತಡೆಯಲು ಅಗತ್ಯ ರಕ್ಷಣಾತ್ಮಕ ಕ್ರಮಗಳನ್ನು ಪಾಲಿಸಬೇಕು ಎಂದಿದೆ.



ಬೆಂಗಳೂರಿನ ಪ್ರಕರಣದ ಹಿನ್ನೆಲೆ: ವಿಚ್ಛೇದಿತ ದಂಪತಿಯ ಮಗಳ ಪಾಲನೆಗೆ ಸಂಬಂಧಿಸಿದ ಪ್ರಕರಣದ ವಿಚಾರಣೆ ವೇಳೆ ಈ ನಿರ್ದೇಶನ ಹೊರಬಂದಿದೆ. ತಂದೆಯ ವಿರುದ್ಧ ಲೈಂಗಿಕ ದೌರ್ಜನ್ಯ ಆರೋಪ ಮಾಡಲಾಗಿದ್ದು, ಸಿಬಿಐ ತನಿಖೆಯಲ್ಲಿ ಆರೋಪಗಳು ನಂಬಲರ್ಹವಾಗಿಲ್ಲ ಎಂದು ಕಂಡುಬಂದ ಹಿನ್ನೆಲೆಯಲ್ಲಿ 2024ರ ಎಫ್‌ಐಆರ್ ರದ್ದುಗೊಂಡಿತ್ತು. ಮಗುವಿನ ಪಾಲನೆಯನ್ನು ತಂದೆಗೆ ನೀಡಿದ್ದ ಕುಟುಂಬ ನ್ಯಾಯಾಲಯದ 2022ರ ಆದೇಶವನ್ನು ಕರ್ನಾಟಕ ಹೈಕೋರ್ಟ್ 2023ರಲ್ಲಿ ಎತ್ತಿಹಿಡಿದಿತ್ತು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಪೋಕ್ಸೊ ನಿಯಮಗಳಡಿ ತಜ್ಞರ ಪಟ್ಟಿಯನ್ನು ನವೀಕರಿಸಬೇಕು ಹಾಗೂ ತೀರ್ಪಿನ ಪ್ರತಿಗಳನ್ನು ಎಲ್ಲ ಹೈಕೋರ್ಟ್‌ಗಳು ಮತ್ತು ರಾಜ್ಯ, ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಕಾರ್ಯದರ್ಶಿಗಳಿಗೆ ಕಳುಹಿಸಬೇಕು ಎಂದು ಸುಪ್ರೀಂ ಕೋರ್ಟ್ ನಿರ್ದೇಶಿಸಿದೆ. 2ನೇ ಪುಟಕ್ಕೆ...

# 'ಭಯೋತ್ಪಾದಕ ದೇಶವೊಂದು ನನಗೆ ಈ ಪ್ರಶ್ನೆ ಕೇಳುತ್ತಿದೆಯೇ?'

**ವಿಶ್ವಸಂಸ್ಥೆ ಸಾಮಾನ್ಯ ಸಭೆಯ ವೇಳೆ ಪಾಕಿಸ್ತಾನದ ಪತ್ರಕರ್ತನೊಬ್ಬ ಭಾರತದ ವಿರುದ್ಧ ಭಯೋತ್ಪಾದನೆ ಪ್ರಾಯೋಜಕತ್ವದ ಆರೋಪದ ಕುರಿತು ಪ್ರಶ್ನಿಸಿದಾಗ ವಿದೇಶಾಂಗ ಸಚಿವ ಎಸ್. ಜೈಶಂಕರ್ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದರು. ಪಾಕಿಸ್ತಾನದಿಂದಲೇ ಇಂತಹ ಪ್ರಶ್ನೆ ಬರುತ್ತಿರುವುದು ಕುರಿತು ಜೈಶಂಕರ್ ಆಕ್ಷೇಪ ವ್ಯಕ್ತಪಡಿಸಿದರೆ, ಭಾರತದ ಖಾಯಂ ಪ್ರತಿನಿಧಿ ಹರೀಶ್ ಪರ್ವತನೇನಿ, ಪ್ರಶ್ನೆಗೆ ಉತ್ತರ ದೊರೆತಿದೆ ಎಂದು ಹೇಳಿದರು. ಇದಕ್ಕೂ ಮುನ್ನ ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ಅವರಿಗೂ ಭಾರತೀಯ ಪತ್ರಕರ್ತರೊಬ್ಬರು ಭಯೋತ್ಪಾದಕರಿಗೆ ಆಶ್ರಯ ನೀಡುವ ಕುರಿತು ಪ್ರಶ್ನಿಸಿದ್ದರು.**

● ವಿಕ್ರಮ ವಾಹಿನಿ । ನ್ಯೂಯಾರ್ಕ್

ವಿಶ್ವಸಂಸ್ಥೆ ಸಾಮಾನ್ಯ ಸಭೆಯ ಸಭೆಗಳ ನಡುವೆ ಭಯೋತ್ಪಾದನೆ ಕುರಿತ ಪ್ರಶ್ನೆ ಕೇಳಿದ ಪಾಕಿಸ್ತಾನದ ಪತ್ರಕರ್ತನಿಗೆ ವಿದೇಶಾಂಗ ಸಚಿವ ಎಸ್. ಜೈಶಂಕರ್ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ ಘಟನೆ ನಡೆದಿದೆ.

ವಿಶ್ವಸಂಸ್ಥೆಯ ಕೇಂದ್ರ ಕಚೇರಿಯಲ್ಲಿ 'ಹಡಗುಗಳು ಮತ್ತು ಸಮುದ್ರಯಾನಿಕರ ಸುರಕ್ಷತೆ ಹಾಗೂ ಭದ್ರತೆ ಕುರಿತ ಸ್ನೇಹಿತರ ಗುಂಪು' ಕುರಿತು ಜೈಶಂಕರ್ ಮತ್ತು ಲೈಬೀರಿಯಾದ ವಿದೇಶಾಂಗ ಸಚಿವೆ ಸಾರಾ ಬೇಸೊಲೊ ನ್ಯಾಂತಿ ಅವರು ಮಾಧ್ಯಮಗಳಿಗೆ ಮಾಹಿತಿ ನೀಡುತ್ತಿದ್ದರು. ಈ ವೇಳೆ ಪಾಕಿಸ್ತಾನದ ಪತ್ರಕರ್ತನೊಬ್ಬ, "ಪಾಕಿಸ್ತಾನದಲ್ಲಿ ಭಯೋತ್ಪಾದನೆಗೆ ಪ್ರಾಯೋಜಕತ್ವ ನೀಡುವುದನ್ನು ನಿಮ್ಮ ಸರ್ಕಾರ ಯಾವಾಗ ನಿಲ್ಲಿಸುತ್ತದೆ?" ಎಂದು ಜೈಶಂಕರ್ ಅವರನ್ನು ಪ್ರಶ್ನಿಸಿದರು.

ಪ್ರಶ್ನೆಗೆ ಪ್ರತಿಕ್ರಿಯಿಸಿದ ಜೈಶಂಕರ್, "ಭಯೋತ್ಪಾದಕ ದೇಶವೊಂದು ನನಗೆ ಈ ಪ್ರಶ್ನೆ ಕೇಳುತ್ತಿದೆಯೇ? ಕಮ್ ಆನ್" ಎಂದು ಹೇಳಿದರು.

ಜೈಶಂಕರ್ ಅವರ ಪ್ರತಿಕ್ರಿಯೆಯ ಬಳಿಕ ವಿಶ್ವಸಂಸ್ಥೆಯಲ್ಲಿನ ಭಾರತದ ಖಾಯಂ ಪ್ರತಿನಿಧಿ ಹರೀಶ್ ಪರ್ವತನೇನಿ ಅವರು ಪತ್ರಕರ್ತನತ್ತ ತಿರುಗಿ, "ನಿಮ್ಮ ಪ್ರಶ್ನೆಗೆ ಉತ್ತರ ಸಿಕ್ಕಿದೆ. ನಿಮ್ಮ ಉತ್ತರವನ್ನು ಸ್ಪಷ್ಟವಾಗಿ ಕೇಳಿದ್ದೀರಿ" ಎಂದು ಹೇಳಿದರು.



ಈ ಘಟನೆಯ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ಕಾರ್ಯಕ್ರಮದಲ್ಲಿ ಸಮುದ್ರಯಾನಿಕರು ಹಾಗೂ ಹಡಗುಗಳ ಸುರಕ್ಷತೆ ಮತ್ತು ಭದ್ರತೆ ಸೇರಿದಂತೆ ವಿವಿಧ ವಿಚಾರಗಳ ಕುರಿತು ಚರ್ಚೆ ನಡೆಯುತ್ತಿತ್ತು.

ಇದಕ್ಕೂ ಒಂದು ದಿನ ಮುನ್ನ ವಿಶ್ವಸಂಸ್ಥೆ ಆವರಣ ಪ್ರವೇಶಿಸುತ್ತಿದ್ದ ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಅವರಿಗೆ ಭಾರತೀಯ ಪತ್ರಕರ್ತರೊಬ್ಬರು ಭಯೋತ್ಪಾದಕರಿಗೆ ಆಶ್ರಯ ನೀಡುವುದನ್ನು ಯಾವಾಗ ನಿಲ್ಲಿಸುತ್ತೀರಿ ಎಂದು ಪ್ರಶ್ನಿಸಿದ್ದರು. ಈ ಹಿನ್ನೆಲೆಯಲ್ಲಿ ಜೈಶಂಕರ್ ಅವರೊಂದಿಗಿನ ಪಾಕಿಸ್ತಾನಿ ಪತ್ರಕರ್ತನ ಪ್ರಶ್ನೆಯೂ ಗಮನ ಸೆಳೆದಿದೆ.

ಕಾರ್ಯಕ್ರಮದ ಮುಖ್ಯ ಚರ್ಚೆ ಸಮುದ್ರಯಾನ ಮತ್ತು ಹಡಗುಗಳ ಸುರಕ್ಷತೆ ಕುರಿತಾಗಿದ್ದರೂ, ಪತ್ರಕರ್ತನ ಪ್ರಶ್ನೆ ಹಾಗೂ ಜೈಶಂಕರ್ ಅವರ ಪ್ರತಿಕ್ರಿಯೆಯಿಂದಾಗಿ ಘಟನೆ ಮಾಧ್ಯಮಗಳ ಗಮನ ಸೆಳೆದಿದೆ.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸವಿ ವಾಹಿನಿ

ದೇಹವನ್ನು ಹಾಳು ಮಾಡುವ ಆಹಾರ, ಮನಸ್ಸನ್ನು ಹಾಳು ಮಾಡುವ ಆಲೋಚನೆಗಳು ಮತ್ತು ಮನಸ್ಥಿತಿಯನ್ನು ಹಾಳುಮಾಡುವ ಜನರಿಂದ ಯಾವಾಗಲೂ ದೂರವಿರಬೇಕು.

### ದಿನ ಪಂಚಾಂಗ

ಸೆಪ್ಟಂಬರ್, 26–2026, ಶನಿವಾರ ವರ್ಷ ಋತು,
ಭಾದ್ರಪದ ಮಾಸ, ಶುದ್ಧ ಪಕ್ಷ
ಪೂರ್ಣಿಮಾ ತಿಥಿ ರಾ.10:00
ಪೂರ್ವಾಭಾದ್ರ ನಕ್ಷತ್ರ ಮ.12:04
ರಾಹುಕಾಲ ಬೆ 9:11–10:41
4ನೇ ಶನಿವಾರ, ಅನಂತನ ಹುಣ್ಣಿಮೆ, ಚಾತುರ್ಮಾಸ್ಯ ವ್ರತ ಸಮಾಪ್ತಿ, ಉಮಾಮಹೇಶ್ವರ ವ್ರತ, ಶ್ರವಣ ಮಾಂಧ್ಯರ ದಿನ, ಯತಿ ಸೀಮೋಲ್ಲಂಘನ, ಕುದೇರು ಸ್ವರ್ಣಗೌರೀ/ಮಲ್ಲಿಕಾರ್ಜುನ ಉತ್ಸವ, ಬಿಂಡಿಗನವಿಲೆ ಪವಿತ್ರೋತ್ಸವ, ಯಕ್ಕುಂಡಿ ಯಾದವಾರ್ಯ ಪುಣ್ಯತಿಥಿ, ಬಾಗೇಪಲ್ಲಿ ಶೇಷದಾಸ ಆರಾಧನೆ, ಮಹಾಲಿಂಗಪುರ ಮಹಾಲಿಂಗೇಶ್ವರ ರಥ, ರಾಮದುರ್ಗ । ಕೊಳ್ಳೂರು ರೇವಪ್ಪಸ್ವಾಮಿ ಪುಣ್ಯತಿಥಿ, ಹೂವಿನ ಹಡಗಲಿ ಮಲ್ಲಿಕಾರ್ಜುನ ಅಡ್ಡಪಲ್ಲಕ್ಕಿ ಉತ್ಸವ, ಗಂಗಾವತಿ । ಆರಹಾಳ ಶಿವಮೂರ್ತೇಶ್ವರ ರಥ

### ಆಧ್ಯಾತ್ಮ

## ದೀರ್ಘಾಯಸ್ಸು ಮತ್ತು ಆರೋಗ್ಯಕರ ಶರೀರವೇ ಆಧ್ಯಾತ್ಮಿಕ ಸಾಧನೆಗೆ ಮೂಲ: ರಾಘವೇಶ್ವರ ಶ್ರೀ



● ವಿಕ್ರಮ ವಾಹಿನಿ । ಗೋಕರ್ಣ

ವೇದವು ತುಪ್ಪವನ್ನು ದೇವರ ನಾಲಿಗೆ ಎಂಬುದಾಗಿ ಹೇಳಿದ್ದು, ದೇವರು ಹೋಮದ ಮೂಲಕ ಏನನ್ನೇ ಸ್ವೀಕರಿಸಿದರೂ ಅದನ್ನು ತುಪ್ಪದ ಮೂಲಕವೇ ಸ್ವೀಕರಿಸುತ್ತಾನೆ. ಹೋಮ – ಹವನಗಳಲ್ಲಿ ದೇವರಿಗೆ ಯಾವ ದ್ರವ್ಯವನ್ನ ಸಮರ್ಪಿಸಿದರೂ, ಅದನ್ನು ತುಪ್ಪದಲ್ಲಿ ಶುದ್ಧವಾಗಿಸಿಯೇ ಸಮರ್ಪಿಸುವುದಾಗಿದೆ. ತುಪ್ಪದ ಮೂಲಕವೇ ದೇವರು ದ್ರವ್ಯಗಳನ್ನು ಸ್ವೀಕರಿಸುವುದರಿಂದ ತುಪ್ಪವನ್ನು ದೇವರ ನಾಲಿಗೆ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 25.09.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಸಾಧಕನಿಗೆ ತುಪ್ಪವು ಹೇಗೆ ಬೆನ್ನೆಲುಬಾಗಿ ನಿಲ್ಲುತ್ತದೆ ಎಂಬುದನ್ನು ವಿವರಿಸುತ್ತಾ, ಸಾಧನೆ ಎಂದರೆ ದೇವಪ್ರೀತಿ ಸಂಪಾದನೆ. ಜೀವ ಮತ್ತು ದೇವರ ನಡುವೆ ಗೋಡೆಯಾಗಿ ನಿಲ್ಲುವ ಕರ್ಮಫಲವೇ ಪಾಪ. ಆ ಪಾಪವನ್ನು ಕರಗಿಸಿ, ತಡೆಯನ್ನು ನಿವಾರಿಸಿ ಸಾಧಕನನ್ನು ಭಗವಂತನೊಂದಿಗೆ ಬೆಸೆಯುವ ಸಾಮರ್ಥ್ಯ ತುಪ್ಪಕ್ಕಿದೆ. ತುಪ್ಪವು ಮಂಗಲ ದ್ರವ್ಯವಾಗಿದ್ದು, ಅದರ ದರ್ಶನ, ಸ್ಪರ್ಶನ ಹಾಗೂ ಸೇವನೆಯಿಂದ ಪಾಪಕ್ಷಯವಾಗುತ್ತದೆ. ಅಲ್ಲದೆ ರಾಕ್ಷಸ ಬಾಧೆ ಹಾಗೂ ದುಷ್ಟ ಶಕ್ತಿಗಳಿಂದ ಸಾಧಕನನ್ನು ರಕ್ಷಿಸುವ ರಕ್ಷಾಕವಚವಾಗಿ ತುಪ್ಪ ಕೆಲಸ ಮಾಡುತ್ತದೆ ಎಂದು ತಿಳಿಸಿದರು.

ಯಾವುದು ಮೃತ್ಯು, ಮುಪ್ಪು ಹಾಗೂ ರೋಗಗಳ ವಿರುದ್ಧ ಕೆಲಸ ಮಾಡುತ್ತದೆಯೋ, ಯಾವುದು ಮನಸ್ಸಿಗೆ ಶಕ್ತಿಯನ್ನು ತುಂಬುತ್ತದೆಯೋ ಅದನ್ನು ಆಯುರ್ವೇದದಲ್ಲಿ ರಸಾಯನ ಎಂದು ಕರೆಯಲಾಗಿದ್ದು, ತುಪ್ಪ ಉತ್ತಮ ರಸಾಯನವಾಗಿ, ನಮಗೆ ಅಗಣಿತವಾದ ಪ್ರಯೋಜನಗಳನ್ನು ನೀಡುತ್ತದೆ ಎಂದರು.

ಇಂದು ಅರವತ್ತು ವರ್ಷವಾದ ನಂತರ ಭಗವದ್ಗೀತೆಯ ಪುಸ್ತಕವನ್ನು ಹಿಡಿಯುವ ಜನರನ್ನು ಕಾಣುತ್ತೇವೆ. ಶರೀರ ದುರ್ಬಲವಾಗಿರುವುದರಿಂದ ಮುಪ್ಪಿನಲ್ಲಿ ಸಾಧನೆ ಆರಂಭಿಸುವುದಲ್ಲ.ಆದರೆ ಭಾರತೀಯ ಪರಂಪರೆಯಲ್ಲಿ ಬ್ರಹ್ಮಚರ್ಯದಲ್ಲೇ ಸಾಧನೆಯು ಆರಂಭವಾಗುತ್ತದೆ. ಸಾಧನೆಗೆ ಸ್ವಸ್ಥ ಶರೀರ ಬೇಕಾಗಿದ್ದು, ದೇಹ ಗಟ್ಟಿಯಿದ್ದಾಗಲೇ ಸಾಧನೆಯನ್ನು ಮಾಡಬೇಕು. ತುಪ್ಪ ಸಾಧನೆಗೆ ಬೇಕಾದ ಬಲವನ್ನು, ವಯಸ್ಥಾಪನ ಶಕ್ತಿಯನ್ನು ನೀಡುತ್ತದೆ ಎಂದರು.

ಭಾರತ ಮಂಡಲದ ಮುಂಬಯಿ, ಡೊಂಬಿವಿಲಿ ಹಾಗೂ ಹೈದರಾಬದ್ ಹವ್ಯಕ ವಲಯಗಳ ಪರವಾಗಿ ಮುಂಬೈನ ಯು.ಟಿ. ಕೃಷ್ಣಮೂರ್ತಿ ಕುಟುಂಬದವರು ಗುರುಭಿಕ್ಷಾ ಸೇವೆ ಸಮರ್ಪಿಸಿದರು. ಉದ್ಯಮಿಗಳಾದ ಗೋಪಾಲಕೃಷ್ಣ ಭಟ್, ಪ್ರಭಾಕರ ಎಂ.ಎನ್, ಡಾ. ರವಿರಾಜ್ ಕಡ್ಲೆ, ದಿನಪ್ರಧಾನರಾಗಿ ತೆಕ್ಕೆಕೆರೆ ಸುಬ್ರಹ್ಮಣ್ಯ ಭಟ್ ದಂಪತಿಗಳು ಉಪಸ್ಥಿತರಿದ್ದರು.

ದೀರ್ಘಾಯಸ್ಸು ಏಕೆ ಬೇಕು? : ತುಪ್ಪ ವಯಸ್ಥಾಪಕ, ದೀರ್ಘಾಯಸ್ಸನ್ನು ನೀಡುತ್ತದೆ ಎನ್ನಲಾಗಿದೆ. ಶಕ್ತಿಯುತ ಶರೀರ ಹಾಗೂ ದೀರ್ಘಾಯಸ್ಸು ಸಾಧನೆ ಮಾಡಲು ಬೇಕಾಗಿದ್ದು, ನಾವೆಲ್ಲ ಸಾಧನೆಗೆ ಯುಕ್ತವಾದ ಶರೀರವನ್ನು ಪಡೆದಿದ್ದು, ಇದೇ ಜನ್ಮದಲ್ಲಿ ಸಾಧನೆಯ ಮೂಲಕ ಮೋಕ್ಷವನ್ನು ಸಾಧಿಸಿಕೊಳ್ಳಬೇಕು. ಆ ಸಾಧನೆಯನ್ನು ಮಾಡಲು ಹಾಗೂ ಸಾಧನೆಯ ನಂತರ ಒಳಿತನ್ನು ಜಗತ್ತಿಗೆ ಹಂಚಲು ದೀರ್ಘಾಯಸ್ಸು ಬೇಕು. – ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು.

## ಪೌರಕಾರ್ಮಿಕರ ಭತ್ಯೆ ಹೆಚ್ಚಳ

1ನೇ ಪುಟದಿಂದ

**'ನೀವು ಸ್ವಚ್ಛತೆಯ ರಾಯಭಾರಿಗಳು':** ಪೌರಕಾರ್ಮಿಕರಿಲ್ಲದೆ ನಗರಗಳು ಸ್ವಚ್ಛವಾಗಿರಲು ಸಾಧ್ಯವಿಲ್ಲ. ಅವರು ನಗರದ ಸ್ವಚ್ಛತೆಯ ರಾಯಭಾರಿಗಳಾಗಿದ್ದು, ಅವರ ಆರೋಗ್ಯ ಮತ್ತು ಸುರಕ್ಷತೆಗೆ ಸರ್ಕಾರ ಆದ್ಯತೆ ನೀಡಲಿದೆ. ಪೌರಕಾರ್ಮಿಕರ ಸೇವೆಯನ್ನು ದೇವರ ಸೇವೆಗೆ ಸಮಾನವಾಗಿ ಸಮಾಜ ಗುರುತಿಸುವಂತಾಗಬೇಕು ಎಂದು ಹೇಳಿದರು. ಪೌರಕಾರ್ಮಿಕರು ಕೇವಲ ಕಸ ತೆಗೆಯುವ ಕೈಗಳಲ್ಲ; ರಾಜ್ಯವನ್ನು ಸ್ವಚ್ಛವಾಗಿ ಕಾಪಾಡುವ ಕೈಗಳು. ಸರ್ಕಾರ ಅವರೊಂದಿಗೆ ಸದಾ ನಿಲ್ಲಲಿದೆ ಎಂದು ಡಿ.ಕೆ. ಶಿವಕುಮಾರ್ ಭರವಸೆ ನೀಡಿದರು.

# ಪ್ರಧಾನಿ ದೇಶದ, ಮುಖ್ಯಮಂತ್ರಿ ರಾಜ್ಯದ, ರೈತ ಇಡೀ ಜಗತ್ತಿನ ಪ್ರತಿನಿಧಿ: ಡಿಕೆಶಿ

● ವಿಕ್ರಮ ವಾಹಿನಿ । ಬೆಂಗಳೂರು

ಪ್ರಧಾನಿ ದೇಶದ ಪ್ರತಿನಿಧಿ, ಮುಖ್ಯಮಂತ್ರಿ ರಾಜ್ಯದ ಪ್ರತಿನಿಧಿ, ಶಾಸಕ ಕ್ಷೇತ್ರದ ಪ್ರತಿನಿಧಿಯಾದರೆ ರೈತ ಇಡೀ ಜಗತ್ತಿನ ಪ್ರತಿನಿಧಿ. ಹೀಗಾಗಿ ವೈದ್ಯರು, ಶಿಕ್ಷಕರು, ಎಂಜಿನಿಯರ್‌ಗಳಿಗೆ ಇರುವಂತೆ ರೈತರ ಹೆಸರಿನ ಮುಂದೆಯೂ ವೃತ್ತಿ ಪದನಾಮ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆದ ವಿಜಯ ಕರ್ನಾಟಕ ಸೂಪರ್ ಸ್ಟಾರ್ ರೈತ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ರೈತರು ಆತ್ಮವಿಶ್ವಾಸ ಕಳೆದುಕೊಳ್ಳಬಾರದು.

ಕಷ್ಟಗಳ ನಡುವೆಯೂ ಕೃಷಿಯಲ್ಲಿ ಸಾಧನೆ ಮಾಡುತ್ತಿರುವ ರೈತರ ಆತ್ಮಸ್ಥೈರ್ಯ ಅನುಕರಣೀಯ ಎಂದರು.

**ಕರ್ಮವೇ ರೈತನ ಧರ್ಮ:** ಕರ್ಮವೇ ರೈತನ ಧರ್ಮ, ಶ್ರಮವೇ ರೈತನ ಶಕ್ತಿ. ಅನ್ನವೇ ರೈತನ ಅರ್ಪಣೆ. ಹಸಿವು ನೀಗಿಸುವ ಯಜ್ಞವನ್ನು ರೈತ ನಿರಂತರವಾಗಿ ಮಾಡುತ್ತಿದ್ದಾನೆ. ರೈತನ ಬದುಕನ್ನು ಸಮಾಜ ಒಟ್ಟಾಗಿ ಗಟ್ಟಿಗೊಳಿಸಬೇಕು. ಕಾರ್ಮಿಕರು, ಶಿಕ್ಷಕರು, ಕೃಷಿಕರು ಸೇರಿದಂತೆ ನಾಲ್ಕು ಪ್ರಮುಖ ಆಧಾರಸ್ತಂಭಗಳ ಮೇಲೆ ಸಮಾಜದ ಬದುಕು ನಿಂತಿದೆ ಎಂದು ಶಿವಕುಮಾರ್ ಹೇಳಿದರು.

ದೇಶದ ಗಡಿಯನ್ನು ಸೈನಿಕ ಕಾಯುತ್ತಿದ್ದರೆ, ಜನರ ಬದುಕನ್ನು ರೈತ ಕಾಯುತ್ತಿದ್ದಾನೆ. ಹೊಲ ಉಳಿಸಿ, ಬಿತ್ತನೆ ಮಾಡಿ, ಬೆಳೆ ಬೆಳೆಸಿ, ಕಟಾವು ಮಾಡುವವನೇ ನಿಜವಾದ ರೈತ. ಹಸಿರು ಶಾಲು ಹಾಕಿಕೊಂಡವರೆಲ್ಲ ರೈತರಲ್ಲ ಎಂದು ಅವರು ಹೇಳಿದರು.

**ರೈತರಿಗಾಗಿ ಹಲವು ಯೋಜನೆ:** ಆಧುನಿಕ ಕೃಷಿಯಲ್ಲಿ ಡ್ರೋನ್ ಹಾಗೂ ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನ ಬಳಕೆ, ವೈಜ್ಞಾನಿಕ ಸಲಹೆ ಮತ್ತು ಬೆಳೆ ವೈವಿಧ್ಯೀಕರಣಕ್ಕೆ ಒತ್ತು ನೀಡಲು ರೈತರಿಗಾಗಿ ಐದಾರು ಯೋಜನೆಗಳನ್ನು ರೂಪಿಸಲಾಗುತ್ತಿದೆ. ಎಲ್ಲರೂ ಒಂದೇ ಬೆಳೆ ಬೆಳೆಯುವುದನ್ನು ತಪ್ಪಿಸಿ ಮಾರುಕಟ್ಟೆಗೆ ಅನುಗುಣವಾಗಿ ಕೃಷಿ ಮಾಡುವ ಬಗ್ಗೆ ರೈತರಿಗೆ ತಾಂತ್ರಿಕ ನೆರವು ನೀಡಲಾಗುವುದು ಎಂದರು.

ಬೆಂಗಳೂರಿನಿಂದ ಹಣ್ಣು, ಹೂವು ಸೇರಿದಂತೆ ವಿವಿಧ ಕೃಷಿ ಉತ್ಪನ್ನಗಳು ವಿದೇಶಕ್ಕೆ ರಫ್ತಾಗುತ್ತಿವೆ. ಇಂತಹ ರೈತರಿಗೆ ವಿದ್ಯುತ್ ರಿಯಾಯಿತಿ ಹಾಗೂ ದಾಸ್ತಾನು ಸೌಲಭ್ಯ ಹೆಚ್ಚಿಸುವ ಬಗ್ಗೆಯೂ ಸರ್ಕಾರ ಚಿಂತನೆ ನಡೆಸುತ್ತಿದೆ ಎಂದು ತಿಳಿಸಿದರು.





ಸಿಎಂ ಡಿ ಕೆ ಶಿವಕುಮಾರ್ ಅವರು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಶುಕ್ರವಾರ ನಡೆದ ವಿಜಯ ಕರ್ನಾಟಕ ಸೂಪರ್ ಸ್ಟಾರ್ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಇದೇ ವೇಳೆ ರಾಗಿ ಕಣದ ರಾಶಿಗೆ ಪೂಜೆ ಸಲ್ಲಿಸಿದರು. ಸಚಿವರಾದ ಯತೀಂದ್ರ ಸಿದ್ದರಾಮಯ್ಯ, ಹೆಚ್ ಸಿ ಬಾಲಕೃಷ್ಣ, ಪಿ ಎಂ ನರೇಂದ್ರಸ್ವಾಮಿ, ಕೃಷಿ ಇಲಾಖೆ ಕಾರ್ಯದರ್ಶಿ ತ್ರಿಲೋಕ್ ಚಂದ್ರ, ವಿಜಯಕರ್ನಾಟಕ ಸಿಇಓ ದೀಪಕ್ ಸಲುಜ ವಿಜಯಕರ್ನಾಟಕ ಪತ್ರಿಕೆ ಸಂಪಾದಕ ಸುದರ್ಶನ ಚನ್ನಂಗಿಹಳ್ಳಿ ಉಪಸ್ಥಿತರಿದ್ದರು.

**'ತೇಗ ಸಿರಿ' ಮೂಲಕ ರೈತರಿಗೆ ಆದಾಯ:** ರಸ್ತೆಗಳ ಇಕ್ಕೆಲದ ಜಮೀನಿನಲ್ಲಿ ರೈತನೇ ತೇಗದ ಗಿಡಗಳನ್ನು ಬೆಳೆಸಿ ಮರವಾಗಿಸಿದರೆ, ಅದರ ಆದಾಯದಲ್ಲಿ ಶೇ.70ರಷ್ಟು ರೈತನಿಗೆ ಹಾಗೂ ಶೇ.30ರಷ್ಟು ಸರ್ಕಾರಕ್ಕೆ ದೊರೆಯುವ 'ತೇಗ ಸಿರಿ' ಯೋಜನೆ ರೂಪಿಸಲಾಗುತ್ತಿದೆ. ಈ ಮೂಲಕ ರಾಜ್ಯಕ್ಕೆ ಆಸ್ತಿ ಹಾಗೂ ರೈತನಿಗೆ ಸಂಪತ್ತು ಸೃಷ್ಟಿಸುವ ಉದ್ದೇಶವಿದೆ ಎಂದರು.

ಸಣ್ಣ ರೈತರ ಜಮೀನುಗಳನ್ನು ಸರ್ಕಾರವೇ ಉಳುಮೆ ಮಾಡಿಕೊಡುವ 'ನೇಗಿಲಯೋಗಿ' ಯೋಜನೆಯನ್ನೂ ರೂಪಿಸಲಾಗುತ್ತಿದೆ ಎಂದು ಹೇಳಿದರು.

**ಬರದ ನಡುವೆಯೂ ರೈತರ ಆತ್ಮಸ್ಥೈರ್ಯ:** ರಾಜ್ಯದಲ್ಲಿ ಬರ ಪರಿಸ್ಥಿತಿ ಇದ್ದರೂ ರೈತರು ತಾಳ್ಮೆ ಕಳೆದುಕೊಂಡಿಲ್ಲ. ಕೋಲಾರ, ಚಿಕ್ಕಬಳ್ಳಾಪುರ ಭಾಗದಲ್ಲಿ ನೀರಿನ ಸಮಸ್ಯೆ ಇದ್ದರೂ ರೈತರು ವಿವಿಧ ಬೆಳೆಗಳ ಮೂಲಕ ಬದುಕು ಕಟ್ಟಿಕೊಂಡಿದ್ದಾರೆ. ಹೊಸಕೋಟೆ ಭಾಗದಲ್ಲಿ ಹೂವು, ತರಕಾರಿ, ವಿಜಯಪುರ–ಬಾಗಲಕೋಟೆಯಲ್ಲಿ ದ್ರಾಕ್ಷಿ ಹಾಗೂ ಹಲವು ಪ್ರದೇಶಗಳಲ್ಲಿ ರೇಷ್ಮೆ ಬೆಳೆಯಲಾಗುತ್ತಿದೆ ಎಂದು ವಿವರಿಸಿದರು.

**ಪರಿಸರ–ರೈತರ ಹಕ್ಕು ರಕ್ಷಣೆ:** ಕಸ್ತೂರಿರಂಗನ್ ವರದಿ ಕುರಿತು ಕರಾವಳಿ ಮತ್ತು ಮಲೆನಾಡು ಪ್ರದೇಶಗಳಿಗೆ ಭೇಟಿ ನೀಡಿ ಜನರ ಅಭಿಪ್ರಾಯ ಆಲಿಸಿದ್ದೇನೆ. ಪರಿಸರ ಸಂರಕ್ಷಣೆಯ ಜತೆಗೆ ರೈತರ ಆಸ್ತಿ ಹಕ್ಕು ಉಳಿಯಬೇಕು ಎಂಬುದು ಸರ್ಕಾರದ ನಿಲುವು. ಅರಣ್ಯ ಅಂಚಿನ ರೈತರಿಗೆ ಅನಗತ್ಯ ನೋಟಿಸ್ ನೀಡದಂತೆ ಸೂಚಿಸಿದ್ದೇನೆ ಎಂದರು.

**ರೈತರ ಆದಾಯ ದ್ವಿಗುಣವಾಗಲಿಲ್ಲ:** ರೈತರ ಆದಾಯ ದ್ವಿಗುಣಗೊಳಿಸುವುದಾಗಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದರೂ ಅದು ಸಾಧ್ಯವಾಗಲಿಲ್ಲ ಎಂದು ಶಿವಕುಮಾರ್ ಟೀಕಿಸಿದರು. ರೈತ ವಿರೋಧಿ ಕಾಯ್ದೆಗಳ ವಿರುದ್ಧ ರೈತರು ಹೋರಾಟ ನಡೆಸಿ ಅವುಗಳನ್ನು ಹಿಂಪಡೆಯುವಂತೆ ಮಾಡಿದರು. ರಾಜ್ಯ ಸರ್ಕಾರ ರೈತರಿಗಾಗಿ 1,200 ಕೋಟಿ ನೀಡುತ್ತಿದೆ ಎಂದು ಹೇಳಿದರು.

**ಯುದ್ಧ, ಚುನಾವಣೆ, ಕೊರೋನಾದಲ್ಲೂ ರೈತನಿಗೆ ವಿರಾಮವಿಲ್ಲ:** ಯುದ್ಧ ನಡೆಯಲಿ, ಸರ್ಕಾರಗಳು ಬದಲಾಗಲಿ ಅಥವಾ ಚುನಾವಣೆಗಳು ನಡೆಯಲಿ ರೈತ ತನ್ನ ಕೃಷಿ ಚಟುವಟಿಕೆಯಿಂದ ಹಿಂದೆ ಸರಿಯುವುದಿಲ್ಲ. ಕೊರೋನಾ ಅವಧಿಯಲ್ಲೂ ರೈತರು ಬೆಳೆದ ಬೆಳೆ ಹಾಳಾಗದಂತೆ ಖರೀದಿಸಿ ಜನರಿಗೆ ತಲುಪಿಸುವ ಕೆಲಸ ಮಾಡಲಾಗಿತ್ತು ಎಂದು ನೆನಪಿಸಿಕೊಂಡರು.

ಕರ್ನಾಟಕ ರಾಗಿ, ಕಾಫಿ, ಸೂರ್ಯಕಾಂತಿ, ಅಡಕೆ, ಟೊಮ್ಯಾಟೊ, ಮೆಣಸಿನಕಾಯಿ, ತೆಂಗು, ದಾಳಿಂಬೆ, ಅನಾನಸ್ ಸೇರಿದಂತೆ ವಿವಿಧ ಕೃಷಿ ಉತ್ಪನ್ನಗಳ ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿದೆ. ಸಿರಿಧಾನ್ಯಗಳಿಗೆ ಉತ್ತಮ ಮಾರುಕಟ್ಟೆ ಸೃಷ್ಟಿಯಾಗುತ್ತಿದೆ ಎಂದು ಹೇಳಿದರು.

**ಕೃಷಿ ಶಿಕ್ಷಣಕ್ಕೂ ಆದ್ಯತೆ:** 25–30 ಸಾವಿರ ಎಂಜಿನಿಯರಿಂಗ್ ಸೀಟುಗಳು ಖಾಲಿ ಉಳಿಯುತ್ತಿವೆ. ಕೃಷಿ ಹಾಗೂ ಪಶುವೈದ್ಯಕೀಯ ಕ್ಷೇತ್ರದಲ್ಲಿ ಅವಕಾಶಗಳನ್ನು ಹೆಚ್ಚಿಸುವ ಉದ್ದೇಶದಿಂದ ಮಂಡ್ಯ ಸೇರಿದಂತೆ ವಿವಿಧೆಡೆ ನಾಲ್ಕೈದು ಕೃಷಿ ಕಾಲೇಜುಗಳು ಹಾಗೂ ಪಶುವೈದ್ಯಕೀಯ ಕಾಲೇಜುಗಳನ್ನು ಆರಂಭಿಸಲು ಅನುಮತಿ ನೀಡಲಾಗಿದೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

## ಗ್ಯಾನೇಶ್ ಕುಮಾರ್ ವಜಾಕ್ಕಾಗಿ ಎಡಪಕ್ಷಗಳ ಪ್ರತಿಭಟನೆ

● ವಿಕ್ರಮ ವಾಹಿನಿ । ಬೆಂಗಳೂರು

ಚುನಾವಣಾ ಆಯೋಗದ ಮತದಾರರ ಪಟ್ಟಿ ವಿಶೇಷ ತ್ರೀವ್ರ ಪರಿಷ್ಕರಣೆ – ಎಸ್ಐಆರ್ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿ, ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಗ್ಯಾನೇಶ್ ಕುಮಾರ್ ಅವರನ್ನು ವಜಾಗೊಳಿಸಿ ಎಸ್.ಐ.ಆರ್ ಪ್ರಕ್ರಿಯೆಯನ್ನು ತಕ್ಷಣವೇ ರದ್ದುಗೊಳಿಸಬೇಕೆಂದು ಒತ್ತಾಯಿಸಿ ಸಿಪಿಐ(ಎಂ), ಸಿಪಿಐ, ಸಿಪಿಐ(ಎಂಎಲ್) ಸೇರಿದಂತೆ ಪ್ರಮುಖ ಎಡಪಕ್ಷಗಳು ಮತ್ತು 'ಎಸ್.ಐ.ಆರ್" ವಿರೋಧಿ ಒಕ್ಕೂಟ' ಜಂಟಿಯಾಗಿ ಸೆ. 26ರಿಂದ ದೇಶಾದ್ಯಂತ ಪ್ರತಿಭಟನೆಗೆ ಕರೆ ನೀಡಿವೆ.

ಸೆಪ್ಟೆಂಬರ್ 26ರಿಂದ ಆರಂಭವಾಗಲಿರುವ ಈ ದೇಶವ್ಯಾಪಿ ಸಪ್ತಾಹ ಪ್ರತಿಭಟನಾ ಆಂದೋಲನವು ಅಕ್ಟೋಬರ್ 2ರವರೆಗೆ ನಡೆಯಲಿದ್ದು, ಇದಕ್ಕೆ ಬಿಜೆಪಿ ಹೊರತಾದ ಎಲ್ಲಾ ಜಾತ್ಯತೀತ ಹಾಗೂ ಪ್ರಜಾಸತ್ತಾತ್ಮಕ ವಿರೋಧ ಪಕ್ಷಗಳು, ನಾಗರಿಕ ಸಮಾಜ ಸಂಘಟನೆಗಳು ಮತ್ತು ಸಾರ್ವಜನಿಕರು ಬೆಂಬಲ ನೀಡಬೇಕೆಂದು ನಾಯಕರು ಮನವಿ ಮಾಡಿದ್ದಾರೆ.

ಮತದಾರರ ಪಟ್ಟಿಯ ಕೇಂದ್ರೀಕರಣ, ಮತದಾರರ ಹೆಸರುಗಳನ್ನು ಅನಗತ್ಯವಾಗಿ ಕೈಬಿಟ್ಟಿರುವುದು ಹಾಗೂ ಆಯೋಗದ ಆಂತರಿಕ ನಿರ್ಧಾರಗಳಲ್ಲಿ ಪಾರದರ್ಶಕತೆಯ ಕೊರತೆ ಎದುರಾಗಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿವೆ. ಈ ಹಿನ್ನೆಲೆಯಲ್ಲಿ ರಾಜಧಾನಿ ಬೆಂಗಳೂರಿನ ಫ್ರೀಡಂ ಪಾರ್ಕ್ ಸೇರಿದಂತೆ ದೇಶದ ಹಲವು ಭಾಗಗಳಲ್ಲಿ ಪ್ರತಿಭಟನಾ ಸಭೆಗಳನ್ನು ಹಮ್ಮಿಕೊಳ್ಳಲಾಗಿದೆ.

"ಮುಖ್ಯ ಚುನಾವಣಾ ಆಯುಕ್ತ ಗ್ಯಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸಬೇಕು. ಪ್ರಸ್ತುತ ನಡೆಯುತ್ತಿರುವ ಎಸ್ಐಆರ್ ಪ್ರಕ್ರಿಯೆಯನ್ನು ತಕ್ಷಣವೇ ತಡೆಹಿಡಿಯಬೇಕು ಹಾಗೂ ರದ್ದುಗೊಳಿಸಬೇಕು. ಪಟ್ಟಿಯಿಂದ ಅಕ್ರಮವಾಗಿ ಹೆಸರು ಬಿಟ್ಟುಹೋಗಿರುವ ಎಲ್ಲ ಅರ್ಹ ನಾಗರಿಕರ ಮತದಾನದ ಹಕ್ಕನ್ನು ಮರುಸ್ಥಾಪಿಸಬೇಕು. ಚುನಾವಣಾ ಆಯುಕ್ತರ ನೇಮಕಾತಿಯಲ್ಲಿ ನ್ಯಾಯಸಮ್ಮತ ಮತ್ತು ಸ್ವಾಯತ್ತ ವ್ಯವಸ್ಥೆಯನ್ನು ತರಲು ಕ್ರಮ ಕೈಗೊಳ್ಳಬೇಕು" ಎಂದು ಎಡಪಕ್ಷಗಳು ಆಗ್ರಹಿಸಿವೆ.

### ಕೌಟುಂಬಿಕ ಪೋಕ್ಸೊ ಆರೋಪ: ತಕ್ಷಣ
## ಬಂಧನ ಬೇಡ– ಸುಪ್ರೀಂ

1ನೇ ಪುಟದಿಂದ

ತಜ್ಞರ ಮೌಲ್ಯಮಾಪನ ವರದಿಯನ್ನು ಆರೋಪಪಟ್ಟಿ ಸಲ್ಲಿಕೆ ಅಥವಾ ಪ್ರಕರಣ ಮುಚ್ಚುವ ನಿರ್ಧಾರಕ್ಕೆ ಏಕೈಕ ಆಧಾರವನ್ನಾಗಿ ಮಾಡಬಾರದು. ತನಿಖಾ ಸಂಸ್ಥೆಯ ನಿರ್ಧಾರಕ್ಕೆ ನೆರವಾಗುವ ಪ್ರಮುಖ ಅಂಶವಾಗಿ ಮಾತ್ರ ಪರಿಗಣಿಸಬೇಕು ಎಂದು ಪೀಠ ಸ್ಪಷ್ಟಪಡಿಸಿದೆ. ರಿಮಾಂಡ್ ಮತ್ತು ಜಾಮೀನು ವಿಚಾರಣೆ ವೇಳೆ ಈ ರಕ್ಷಣಾತ್ಮಕ ಕ್ರಮಗಳನ್ನು ಪಾಲಿಸಲಾಗಿದೆಯೇ ಎಂಬುದನ್ನು ನ್ಯಾಯಾಲಯಗಳು ಪರಿಶೀಲಿಸಬೇಕು ಎಂದಿದೆ.

ವಿಚ್ಛೇದನ ಹಾಗೂ ಮಕ್ಕಳ ಪಾಲನೆಗೆ ಸಂಬಂಧಿಸಿದ ವಿವಾದಗಳಲ್ಲಿ ಪೋಕ್ಸೊ ಕಾಯ್ದೆಯ ದುರ್ಬಳಕೆ ನಡೆಯದಂತೆ ವಿಶೇಷ ನ್ಯಾಯಾಲಯಗಳು ದೂರುಗಳ ಹಿನ್ನೆಲೆ ಮತ್ತು ಲಭ್ಯವಿರುವ ಮಾಹಿತಿಯನ್ನು ಸೂಕ್ತವಾಗಿ ಪರಿಶೀಲಿಸಬೇಕು ಎಂದು ನ್ಯಾಯಾಲಯ ಸೂಚಿಸಿದೆ. ತೀರ್ಪಿನ ಪ್ರತಿಗಳನ್ನು ಎಲ್ಲ ಹೈಕೋರ್ಟ್‌ಗಳು, ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಕಾರ್ಯದರ್ಶಿಗಳಿಗೆ ಕಳುಹಿಸುವಂತೆಯೂ ನಿರ್ದೇಶಿಸಿದೆ.

## ಸುರ್ಜೇವಾಲ–ಡಿಕೆಶಿ ಮಾತುಕತೆ: ಸಂಪುಟ, ಚುನಾವಣೆ ಸಿದ್ಧತೆ ಚರ್ಚೆ

● ವಿಕ್ರಮ ವಾಹಿನಿ । ಬೆಂಗಳೂರು

ಸಂಪುಟದಲ್ಲಿ ಖಾಲಿಯಿರುವ ಎರಡು ಸ್ಥಾನಗಳಿಗೆ ನೇಮಕಾತಿ, ವಿಧಾನ ಪರಿಷತ್ತಿನ ಐದು ಸ್ಥಾನಗಳಿಗೆ ನಾಮನಿರ್ದೇಶನ, ಸ್ಥಳೀಯ ಸಂಸ್ಥೆ ಹಾಗೂ ಮುಂದಿನ ವಿಧಾನಸಭೆ ಚುನಾವಣೆ ತಯಾರಿ ಸೇರಿದಂತೆ ಹಲವಾರು ವಿಚಾರಗಳ ಬಗ್ಗೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಚರ್ಚೆ ನಡೆಸಿದ್ದಾರೆ.

ನಗರದ ಖಾಸಗಿ ಹೋಟೆಲ್‌ನಲ್ಲಿ ನಿನ್ನೆ ನಡೆದ ಪ್ರಮುಖ ಸಭೆಯಲ್ಲಿ ರಣದೀಪ್ ಸಿಂಗ್ ಸುರ್ಜೇವಾಲ ಮತ್ತು ಡಿ.ಕೆ. ಶಿವಕುಮಾರ್ ಪ್ರತ್ಯೇಕ ಮಾತುಕತೆ ನಡೆಸಿರುವುದು ರಾಜ್ಯ ರಾಜಕಾರಣದಲ್ಲಿ ಕುತೂಹಲ ಕೆರಳಿಸಿದೆ. ನಿನ್ನೆ ಬೆಂಗಳೂರಿಗೆ ಆಗಮಿಸುತ್ತಿದ್ದಂತೆ ವಿಮಾನ ನಿಲ್ದಾಣದಲ್ಲೇ ಮಾತನಾಡಿದ ಅವರು, ಎಸ್ಐಆರ್ ಪ್ರಕ್ರಿಯೆ ಬಗ್ಗೆ ಕಿಡಿಕಾರಿದ್ದರು. ಸಂಜೆ ಡಿ.ಕೆ. ಶಿವಕುಮಾರ್ ಅವರೊಂದಿಗೆ ನಡೆದ ಚರ್ಚೆಯ



ಸಂದರ್ಭದಲ್ಲಿ ಚುನಾವಣಾ ಆಯೋಗದ ಅಕ್ರಮಗಳ ವಿರುದ್ಧ ತೀವ್ರ ಹೋರಾಟ ನಡೆಸುವ ಕುರಿತು ಸಲಹೆ ನೀಡಿದ್ದಾರೆ ಎನ್ನಲಾಗಿದೆ.

ರಾಜ್ಯದಲ್ಲಿ ಎಸ್ಐಆರ್ ಪ್ರಕ್ರಿಯೆ ಮೂಲಕವೇ ಚುನಾವಣೆ ಗೆಲ್ಲಲು ಬಿಜೆಪಿ ಸಂಚು ನಡೆಸಿದೆ. ಮತದಾರರ ಪಟ್ಟಿಯಲ್ಲಿನ ಅಕ್ರಮಗಳ ಬಗ್ಗೆ ತೀವ್ರ ನಿಗಾವಹಿಸಿ, ಬಿಜೆಪಿ ನಾಯಕರೇ ಆಯೋಗಕ್ಕೆ ಪತ್ರ ಬರೆದು ಮತದಾರರನ್ನು ಡಿಲೀಟ್ ಮಾಡುವಂತೆ ಸಲಹೆ ನೀಡುತ್ತಿದ್ದಾರೆ. ಈ ಬಗ್ಗೆ ಗಮನಹರಿಸುವಂತೆ ಒತ್ತಾಯಿಸಿರುವುದಾಗಿ ತಿಳಿದುಬಂದಿದೆ.

ಸಂಪುಟದಲ್ಲಿ ಖಾಲಿಯಿರುವ ಎರಡು ಸ್ಥಾನಗಳಿಗೆ ನೇಮಕಾತಿ ಮಾಡುವ ಸಂಬಂಧ ಗಂಭೀರ ಚರ್ಚೆ ನಡೆದಿದೆ. ಆದರೆ ಸದ್ಯಕ್ಕೆ ಸಂಪುಟ ವಿಸ್ತರಣೆಯ ಬದಲಾಗಿ ಸ್ಥಳೀಯ ಸಂಸ್ಥೆಗಳ ಚುನಾವಣೆಯತ್ತ ಗಮನ ಹರಿಸಲು ಹೈಕಮಾಂಡ್ ಸಂದೇಶ ನೀಡಿರುವುದಾಗಿ ಮೂಲಗಳು ತಿಳಿಸಿವೆ.

ಕಾಂಗ್ರೆಸ್ ಪಕ್ಷದಲ್ಲಿ ಕೆಲವು ನಾಯಕರು ಶಿಸ್ತನ್ನು ಮೀರಿ ಬಹಿರಂಗ ಹೇಳಿಕೆ ನೀಡುತ್ತಿದ್ದಾರೆ. ಇದನ್ನು ಸಹಿಸಲು ಸಾಧ್ಯವಿಲ್ಲ. ಅಂತಹ ನಾಯಕರಿಗೆ ಕಠಿಣ ಎಚ್ಚರಿಕೆ ನೀಡಬೇಕು ಎಂದು ಸುರ್ಜೇವಾಲ ಸಲಹೆ ನೀಡಿದ್ದಾರೆ ಎನ್ನಲಾಗಿದೆ.

ಪ್ರಸ್ತುತ ಸಂದರ್ಭದಲ್ಲಿ ಚುನಾವಣೆ ನಡೆದರೆ ಸುಮಾರು 50ಕ್ಕೂ ಹೆಚ್ಚಿನ ಶಾಸಕರು ಹಾಗೂ 20 ಮಂದಿ ಹಾಲಿ ಸಚಿವರು ಸೋಲು ಕಾಣುವ ಸಾಧ್ಯತೆ ಇದೆ ಎಂದು ರಾಜಕೀಯಕ್ಕೆ ಸಂಬಂಧಿಸಿದ ಖಾಸಗಿ ಸಂಸ್ಥೆಯೊಂದು ರಹಸ್ಯ ವರದಿ ನೀಡಿದೆ ಎನ್ನಲಾಗಿದೆ. ಇದನ್ನು ಆಧರಿಸಿ ಇಬ್ಬರೂ ನಾಯಕರು ಗಂಭೀರ ಚರ್ಚೆ ನಡೆಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಕೆಲವು ಶಾಸಕರ ಇಮೇಜ್ ನಷ್ಟವಾಗಿದೆ. ಅವರನ್ನು ಮತ್ತೆ ಚುನಾವಣಾ ಕಣಕ್ಕಿಳಿಸುವುದು ಕಷ್ಟಸಾಧ್ಯ. ಹೀಗಾಗಿ ಅಂತಹ ಕ್ಷೇತ್ರಗಳಲ್ಲಿ ಪರ್ಯಾಯ ನಾಯಕತ್ವದ ಬಗ್ಗೆ ಕಾಳಜಿ ವಹಿಸುವಂತೆ ಹೈಕಮಾಂಡ್ ಸಂದೇಶ ರವಾನಿಸಿದೆ ಎನ್ನಲಾಗಿದೆ.

ಸಂಪುಟದಲ್ಲಿ ಅವಕಾಶ ಸಿಗದ ಮತ್ತು ಕಾಂಗ್ರೆಸ್‌ನಲ್ಲಿ ಪ್ರಾತಿನಿಧ್ಯ ಇಲ್ಲ ಎಂಬ ಅಸಮಾಧಾನದಿಂದ ಕೆಲವು ಶಾಸಕರು ಅನ್ಯ ಪಕ್ಷಗಳತ್ತ ಮುಖ ಮಾಡಿದ್ದಾರೆ.

ಇನ್ನೂ ಕೆಲವರು ಪಕ್ಷದ ಸಿದ್ಧಾಂತಕ್ಕೆ ಬದ್ಧರಾಗಿಲ್ಲ. ಅವಕಾಶಗಳಿಗಾಗಿ ಕಾಂಗ್ರೆಸ್‌ನಲ್ಲಿದ್ದಾರೆ ಎನ್ನಲಾಗಿದ್ದು, ಅಂತಹವರನ್ನು ಮುಲಾಜಿಲ್ಲದೆ ಮುಂದಿನ ಚುನಾವಣೆಯಲ್ಲಿ ದೂರ ಇಡುವಂತೆ ಹೈಕಮಾಂಡ್ ಸೂಚನೆ ನೀಡಿದೆ ಎಂದು ಮೂಲಗಳು ತಿಳಿಸಿವೆ.

## ಗವಿಸಿದ್ಧೇಶ್ವರ ಶ್ರೀಗಳಿಂದ ದಸರಾ ಉದ್ಘಾಟನೆ ಕಲ್ಯಾಣ ಕರ್ನಾಟಕಕ್ಕೆ ಹೆಮ್ಮೆ

● ವಿಕ್ರಮ ವಾಹಿನಿ । ಬೆಂಗಳೂರು

ನಾಡಿನ ಸಾಂಸ್ಕೃತಿಕ ವೈಭವದ ಪ್ರತೀಕವಾಗಿರುವ ಮೈಸೂರು ದಸರಾ ಮಹೋತ್ಸವವನ್ನು ಕೊಪ್ಪಳದ ಗವಿಮಠದ ಅಭಿನವ ಗವಿಸಿದ್ಧೇಶ್ವರ ಸ್ವಾಮೀಜಿಯವರು ಉದ್ಘಾಟಿಸಲಿರುವುದು ಇಡೀ ಕಲ್ಯಾಣ ಕರ್ನಾಟಕದ ಜನತೆಗೆ ಹೆಮ್ಮೆಯ ಹಾಗೂ ಸಂತಸದ ಸಂಗತಿ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿ ಕುಮಾರ್ ಹೇಳಿದ್ದಾರೆ. ಮೈಸೂರು ದಸರಾ ಕೇವಲ ರಾಜವೈಭವದ ಉತ್ಸವವಲ್ಲ. ಅದು ಕರ್ನಾಟಕದ ಕಲೆ, ಸಾಹಿತ್ಯ, ಸಂಸ್ಕೃತಿ, ಪರಂಪರೆ ಹಾಗೂ ಜನಜೀವನದ ಪ್ರತಿಬಿಂಬವಾಗಿದೆ. ಇಂತಹ ನಾಡಹಬ್ಬಕ್ಕೆ ಸಮಾಜಸೇವೆ ಹಾಗೂ ಮಾನವೀಯ ಸೇವೆಯ ಮೂಲಕ ಜನಮನ ಗೆದ್ದಿರುವ ಗವಿಸಿದ್ಧೇಶ್ವರ ಶ್ರೀಗಳು ಚಾಲನೆ ನೀಡುತ್ತಿರುವುದು ಅತ್ಯಂತ ಅರ್ಥಪೂರ್ಣವಾಗಿದೆ ಎಂದು ಅವರು ತಿಳಿಸಿದ್ದಾರೆ.

ಕೊಪ್ಪಳದ ಗವಿಮಠದ ಸೇವಾ ಪರಂಪರೆ ರಾಜ್ಯದ ಗಡಿಗಳನ್ನು ಮೀರಿ ಜನಮಾನಸದಲ್ಲಿ ವಿಶಿಷ್ಟ ಸ್ಥಾನ ಪಡೆದಿದೆ.

ಧಾರ್ಮಿಕ ಕ್ಷೇತ್ರದ ಜೊತೆಗೆ ಶಿಕ್ಷಣ, ದಾಸೋಹ, ಆರೋಗ್ಯ, ಸಾಮಾಜಿಕ ಸೇವೆ ಹಾಗೂ ಮಾನವೀಯ ಮೌಲ್ಯಗಳ ಮೂಲಕ ಸಮಾಜದಲ್ಲಿ ಜಾಗೃತಿ ಮೂಡಿಸುತ್ತಿರುವ ಗವಿಸಿದ್ಧೇಶ್ವರ ಶ್ರೀಗಳು ಅಪರೂಪದ ಸಂತರು. ವಿಶೇಷವಾಗಿ ಬಡ ಹಾಗೂ ಗ್ರಾಮೀಣ ಮಕ್ಕಳಿಗೆ ಶಿಕ್ಷಣದ ಅವಕಾಶ ಕಲ್ಪಿಸುವಲ್ಲಿ ಗವಿಮಠದ ಕೊಡುಗೆ ಮಹತ್ವದ್ದಾಗಿದೆ ಎಂದು ಅವರು ತಿಳಿಸಿದ್ದಾರೆ.



ಗವಿಸಿದ್ಧೇಶ್ವರ ಶ್ರೀಗಳ ಅಮೃತಹಸ್ತದಿಂದ ಮೈಸೂರು ದಸರಾ ಮಹೋತ್ಸವಕ್ಕೆ ಚಾಲನೆ ದೊರೆಯುತ್ತಿರುವುದು ನಾಡಿನ ಸಾಂಸ್ಕೃತಿಕ ಪರಂಪರೆಗೆ ಮತ್ತಷ್ಟು ಮೆರುಗು ನೀಡಲಿದೆ. ಶ್ರೀಗಳ ಆಯ್ಕೆ ಕರ್ನಾಟಕದ ಸಂಸ್ಕೃತಿ, ಪರಂಪರೆ ಹಾಗೂ ಆಧ್ಯಾತ್ಮಿಕ ಮೌಲ್ಯಗಳಿಗೆ ಸಲ್ಲಿಸಿರುವ ಗೌರವದ ಪ್ರತೀಕವಾಗಿದೆ ಎಂದು ಎನ್. ರವಿ ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚಾಯ್ಸ್-4 ಅಭ್ಯರ್ಥಿಗಳಿಗೂ 3ನೇ ಸುತ್ತಿನ ಅವಕಾಶ

● ವಿಕ್ರಮ ವಾಹಿನಿ । ಬೆಂಗಳೂರು

ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕೆ ಮೊದಲ ಮತ್ತು ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗೆ ಪ್ರವೇಶ ಪಡೆಯದೆ ಚಾಯ್ಸ್– 4 ಹಾಕಿರುವ ಅಭ್ಯರ್ಥಿಗಳಿಗೂ ಮೂರನೇ ಸುತ್ತಿನ ಸೀಟು ಹಂಚಿಕೆಯಲ್ಲಿ ಭಾಗವಹಿಸಲು ಅವಕಾಶ ನೀಡಲಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ. ಮೊದಲ ಹಾಗೂ ಎರಡನೇ ಸುತ್ತಿನ ತಾತ್ಕಾಲಿಕ ಫಲಿತಾಂಶದ ನಂತರ ಚಾಯ್ಸ್– 4 ಆಯ್ಕೆ ಮಾಡಿರುವ ಹಾಗೂ ಸೀಟು ಬೇಡವೆಂದು ಬಿಟ್ಟು ಹೋದವರಿಗೂ ಈ ಸುತ್ತಿನಲ್ಲಿ ಕಾಷನ್ ಡೆಪಾಸಿಟ್ ಕಟ್ಟಿ ಭಾಗವಹಿಸಲು ಅವಕಾಶ ನೀಡಲಾಗಿದೆ ಎಂದು ಅವರು ವಿವರಿಸಿದ್ದಾರೆ.

ಎರಡನೇ ಸುತ್ತಿನ ಅಂತಿಮ ಫಲಿತಾಂಶದ ನಂತರ ದಂಡ ಪಾವತಿಸಿ ಸೀಟು ರದ್ದುಪಡಿಸಿಕೊಂಡವರು ಕೂಡ ಭಾಗವಹಿಸಬಹುದು. ಆದರೆ ದಂಡ ಪಾವತಿಸದೆ ಎಂಸಿಸಿ ಸೇರಿ ಇತರ ರಾಜ್ಯಗಳಲ್ಲಿ ಸೀಟು ಸಿಕ್ಕಿದೆ ಎಂದು ಹೇಳಿ ಚಾಯ್ಸ್– 4 ಆಯ್ಕೆ ಮಾಡಿಕೊಂಡು ಹೊರಹೋದವರು ಭಾಗವಹಿಸಲು ನಿರ್ಬಂಧ ಇದ್ದು, ಅಂತಹವರು ಹತ್ತು ಸಾವಿರ ರೂಪಾಯಿ ದಂಡ ಕಟ್ಟಿ, ಭಾಗವಹಿಸಬಹುದು ಎಂದು ಅವರು ವಿವರಿಸಿದ್ದಾರೆ.

ವೈದ್ಯಕೀಯ ಕೋರ್ಸ್ ಸೀಟು ಹಂಚಿಕೆ ನಂತರ ಕಾಲೇಜಿಗೆ ಪ್ರವೇಶ ಪಡೆಯದ ಹಾಗೂ ಶುಲ್ಕ ಪಾವತಿಸದ ಅಭ್ಯರ್ಥಿಗಳನ್ನು ಈ ಸುತ್ತಿನಲ್ಲಿ ಭಾಗವಹಿಸಲು ಬಿಡುವುದಿಲ್ಲ. ಹಾಗೆಯೇ ಎಂಜಿನಿಯರಿಂಗ್ ಸೇರಿದಂತೆ ಇತರ ಕೋರ್ಸ್ ಗಳಿಗೆ ಪ್ರವೇಶ ಪಡೆಯದವರನ್ನು ಕೂಡ ಆಪ್ಷನ್ಸ್ ದಾಖಲಿಸಲು ಅವಕಾಶ ನೀಡುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

ಎಂಜಿನಿಯರಿಂಗ್ ಸೇರಿದಂತೆ ಇತರ ಕೋರ್ಸ್ ಗಳಿಗೆ ಪ್ರವೇಶ ಪಡೆದು ಇನ್ನೂ ಉತ್ತಮ ಕಾಲೇಜಿಗೆ ಹೋಗಲು ಇಚ್ಛಿಸುವ ಅಭ್ಯರ್ಥಿಗಳು ಎಚ್ಚರಿಕೆಯಿಂದಲೇ ಈ ಸುತ್ತಿನಲ್ಲಿ ಭಾಗವಹಿಸಬೇಕು. 3ನೇ ಸುತ್ತಿನಲ್ಲಿ ಸಿಗುವ ಕಾಲೇಜಿಗೆ ಹೋಗುವುದಕ್ಕೂ ಮುನ್ನ ಹಾಲಿ ಕಾಲೇಜಿನಲ್ಲಿ ದಾಖಲೆ ಪಡೆಯುವ ಬಗ್ಗೆ ಮೊದಲೇ ಖಾತರಿ ಮಾಡಿಕೊಂಡು ಆಪ್ಷನ್ಸ್ ದಾಖಲಿಸಿ ಎಂದೂ ಅವರು ಸಲಹೆ ನೀಡಿದರು.

ಎಂಸಿಸಿ 3ನೇ ಸುತ್ತಿನಲ್ಲಿ ಸೀಟು ಹಂಚಿಕೆಯಾದವರಿಗೆ ಕೆಇಎ ಕಡೆಯಿಂದ ತ್ವರಿತವಾಗಿ ಕಾಷನ್ ಡೆಪಾಸಿಟ್ ಹಿಂದಿರುಗಿಸುವ ಕೆಲಸ ಮಾಡಲಾಗುವುದು ಎಂದರು.

ಸೀಟ್ ಮ್ಯಾಟ್ರಿಕ್ಸ್ ತಡವಾದ ಕಾರಣ ಆಯುಷ್ ಕೌನ್ಸೆಲಿಂಗ್ ತಡವಾಗಿದೆ. 70 ಕಾಲೇಜುಗಳ ಸೀಟ್ ಮ್ಯಾಟ್ರಿಕ್ಸ್ ಬಂದಿದ್ದು, ಆದಷ್ಟು ಬೇಗ ಕೌನ್ಸೆಲಿಂಗ್ ಆರಂಭಿಸಲಾಗುವುದು ಎಂದು ಹೇಳಿದರು.

ವೈದ್ಯಕೀಯ ಸೀಟು ಕೊಡಿಸುವುದಾಗಿ ಆಮಿಷವೊಡ್ಡುವ ಮಧ್ಯವರ್ತಿ ಗಳ ಬಗ್ಗೆ ಎಚ್ಚರ ವಹಿಸಿ ಎಂದಿರುವ ಪ್ರಸನ್ನ ಅವರು ಇಂತಹವರ ಬಗ್ಗೆ ಸಮೀಪದ ಪೊಲೀಸ್ ಠಾಣೆಯಲ್ಲಿ ದೂರು ನೀಡಿ ಎಂದು ಸಲಹೆ ನೀಡಿದ್ದಾರೆ.

ವಿಕ್ರಮ ವಾಹಿನಿ

ಸೆಪ್ಟಂಬರ್, 26- 2026
ಶನಿವಾರ



www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481



# 28ರಿಂದ ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್‌ಗಳ ದೈಹಿಕ ಪರೀಕ್ಷೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯ ಪೊಲೀಸ್ ನೇಮಕಾತಿ ವಿಭಾಗದ ವತಿಯಿಂದ ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ (ಆರ್‌ಪಿಸಿ ಮತ್ತು ಕೆಕೆ) ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದ ದೇಹದಾರ್ಢ್ಯ ಪರೀಕ್ಷೆ (PST) ಹಾಗೂ ಸಹಿಷ್ಣುತಾ ಪರೀಕ್ಷೆ (ET) ಸೆಪ್ಟೆಂಬರ್ 28ರಿಂದ ಆರಂಭವಾಗಲಿದೆ.

ಒಟ್ಟು 3,991 ಹುದ್ದೆಗಳ ನೇಮಕಾತಿಗೆ 19,396 ಅಭ್ಯರ್ಥಿಗಳು ದೈಹಿಕ ಪರೀಕ್ಷೆಗೆ ಅರ್ಹತೆ ಪಡೆದಿದ್ದಾರೆ. ಈ ಪೈಕಿ ಉಳಿಕೆ ಮೂಲ ವೃಂದದ (RPC) 3,395 ಹುದ್ದೆಗಳಿಗೆ 16,454 ಹಾಗೂ ಕಲ್ಯಾಣ ಕರ್ನಾಟಕ (KK) ವೃಂದದ 596 ಹುದ್ದೆಗಳಿಗೆ 2,942 ಅಭ್ಯರ್ಥಿಗಳು ಅರ್ಹರಾಗಿದ್ದಾರೆ.

RPC ವೃಂದದಲ್ಲಿ ಬೆಂಗಳೂರು ನಗರ ಘಟಕದ 2,015 ಹುದ್ದೆಗಳಿಗೆ 9,887 ಅಭ್ಯರ್ಥಿಗಳಿಗೆ ಸೆ.28ರಿಂದ ಅ.5ರವರೆಗೆ ಬೆಂಗಳೂರಿನ ಸಿರ್ಸಿ ಸರ್ಕಲ್, ಆಡುಗೋಡಿ ಹಾಗೂ ತನಿಷಂದ್ರದ ಪರೇಡ್ ಮೈದಾನಗಳಲ್ಲಿ ಪರೀಕ್ಷೆ ನಡೆಯಲಿದೆ. ಕೇಂದ್ರ ವಲಯದ 200 ಹುದ್ದೆಗಳಿಗೆ 946 ಅಭ್ಯರ್ಥಿಗಳಿಗೆ ಸೆ.28ರಿಂದ ಅ.3ರವರೆಗೆ ಕೋರಮಂಗಲದ 3ನೇ ಬೆಟಾಲಿಯನ್ ಕೆಎಸ್‌ಆರ್‌ಪಿ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

ದಕ್ಷಿಣ ವಲಯದ 395 ಹುದ್ದೆಗಳಿಗೆ 1,891 ಅಭ್ಯರ್ಥಿಗಳಿಗೆ ಸೆ.28ರಿಂದ ಅ.5ರವರೆಗೆ ಮೈಸೂರು ಸಿಎಆರ್ ಪರೇಡ್ ಮೈದಾನದಲ್ಲಿ ಹಾಗೂ ಪಶ್ಚಿಮ ವಲಯದ 395 ಹುದ್ದೆಗಳಿಗೆ 1,803 ಅಭ್ಯರ್ಥಿಗಳಿಗೆ ಸೆ.28ರಿಂದ ಅ.3ರವರೆಗೆ ಮಂಗಳೂರಿನ ಮಂಗಳ ಕ್ರೀಡಾಂಗಣದಲ್ಲಿ ಪರೀಕ್ಷೆ ನಡೆಯಲಿದೆ. ಪೂರ್ವ ವಲಯದ 250 ಹುದ್ದೆಗಳಿಗೆ 1,234 ಅಭ್ಯರ್ಥಿಗಳಿಗೆ ಸೆ.29ರಿಂದ ಅ.6ರವರೆಗೆ ಶಿವಮೊಗ್ಗದ ನವಿಲೆ ಕೃಷಿ ವಿಶ್ವವಿದ್ಯಾಲಯದ ಮೈದಾನದಲ್ಲಿ ಪರೀಕ್ಷೆ ನಿಗದಿಯಾಗಿದೆ.

ಉತ್ತರ ವಲಯದ 110 ಹುದ್ದೆಗಳಿಗೆ 549 ಅಭ್ಯರ್ಥಿಗಳಿಗೆ ಸೆ.29 ಮತ್ತು 30ರಂದು ಬೆಳಗಾವಿ ಸಮೀಪದ ಮಚ್ಚೆಯ 2ನೇ ಬೆಟಾಲಿಯನ್ ಕೆಎಸ್‌ಆರ್‌ಪಿ ಮೈದಾನದಲ್ಲಿ ಹಾಗೂ ಬಳ್ಳಾರಿ ವಲಯದ 30 ಹುದ್ದೆಗಳಿಗೆ 144 ಅಭ್ಯರ್ಥಿಗಳಿಗೆ ಅ.5 ಮತ್ತು 6ರಂದು ಕೊಪ್ಪಳದ ಮುನಿರಾಬಾದ್ ಕೆಎಸ್‌ಆರ್‌ಪಿ ಪಿಟಿಎಸ್ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

ಕೆಕೆ ವೃಂದದಲ್ಲಿ ಬೆಂಗಳೂರು ನಗರ ಘಟಕದ 171 ಹುದ್ದೆಗಳಿಗೆ 833 ಅಭ್ಯರ್ಥಿಗಳಿಗೆ ಅ.8ರಂದು ಚಾಮರಾಜಪೇಟೆ ಮತ್ತು ಆಡುಗೋಡಿಯ ಸಿಎಆರ್ ಪರೇಡ್ ಮೈದಾನಗಳಲ್ಲಿ ಪರೀಕ್ಷೆ ನಡೆಯಲಿದೆ. ಬಳ್ಳಾರಿ ವಲಯದ 174 ಹುದ್ದೆಗಳಿಗೆ 869 ಅಭ್ಯರ್ಥಿಗಳಿಗೆ ಅ.12ರಿಂದ 15ರವರೆಗೆ ಮುನಿರಾಬಾದ್ ಕೆಎಸ್‌ಆರ್‌ಪಿ ಪಿಟಿಎಸ್ ಮೈದಾನದಲ್ಲಿ ಹಾಗೂ ಈಶಾನ್ಯ ವಲಯದ 251 ಹುದ್ದೆಗಳಿಗೆ 1,240 ಅಭ್ಯರ್ಥಿಗಳಿಗೆ ಅ.12ರಿಂದ 14ರವರೆಗೆ ಕಲಬುರಗಿಯ ತಾಜ್ ಸುಲ್ತಾನ್‌ಪುರದ 6ನೇ ಬೆಟಾಲಿಯನ್ ಕೆಎಸ್‌ಆರ್‌ಪಿ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

ಕರೆಪತ್ರ ಡೌನ್‌ಲೋಡ್: ದೈಹಿಕ ಪರೀಕ್ಷೆಗೆ ಅರ್ಹತೆ ಪಡೆದ ಅಭ್ಯರ್ಥಿಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (KEA) ಅಧಿಕೃತ ವೆಬ್‌ಸೈಟ್‌ನಿಂದ ಕರೆಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಬೇಕು. ನಿಗದಿತ ದಿನಾಂಕದಂದು ಸೂಚಿಸಿರುವ ಪರೀಕ್ಷಾ ಕೇಂದ್ರಕ್ಕೆ ಕಡ್ಡಾಯವಾಗಿ ಹಾಜರಾಗುವಂತೆ ಪೊಲೀಸ್ ನೇಮಕಾತಿ ವಿಭಾಗ ಸೂಚಿಸಿದೆ.

# ಅಟ್ಟಿಕಾ ಗೋಲ್ಡ್ ಕಂಪೆನಿ ಮೇಲೆ ಇ.ಡಿ ದಾಳಿ: ರೂ 7.52 ಲಕ್ಷ ನಗದು, ಚಿನ್ನ-ಬೆಳ್ಳಿ ವಶ

● ವಿಕ್ರಮ ವಾಹಿನಿ । ಬೆಂಗಳೂರು

ಕದ್ದ ಚಿನ್ನಾಭರಣಗಳನ್ನು ಖರೀದಿಸಿ ಅಕ್ರಮವಾಗಿ ಹಣ ಸಂಪಾದಿಸಿದ ಆರೋಪಕ್ಕೆ ಸಂಬಂಧಿಸಿದಂತೆ ಅಟ್ಟಿಕಾ ಗೋಲ್ಡ್ ಪ್ರೈವೇಟ್ ಕಂಪನಿ ಹಾಗೂ ಅದರೊಂದಿಗೆ ಸಂಪರ್ಕ ಹೊಂದಿರುವವರ ಮೇಲೆ ಜಾರಿ ನಿರ್ದೇಶನಾಲಯ (ಇ.ಡಿ.) ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಶೋಧ ಕಾರ್ಯಾಚರಣೆ ವೇಳೆ 7.52 ಲಕ್ಷ ನಗದು, ಚಿನ್ನ-ಬೆಳ್ಳಿ ಹಾಗೂ ವಿದೇಶಿ ಕರೆನ್ಸಿಯನ್ನು ವಶಕ್ಕೆ ಪಡೆದಿರುವುದಾಗಿ ಇ.ಡಿ. ತಿಳಿಸಿದೆ.

16 ಕಡೆ ಏಕಕಾಲಕ್ಕೆ ಶೋಧ: ಬೆಂಗಳೂರಿನ ಪ್ರಧಾನ ಕಚೇರಿ ಸೇರಿದಂತೆ ಹೈದರಾಬಾದ್, ವಿಶಾಖಪಟ್ಟಣ ಮತ್ತು ಚೆನ್ನೈ ಸೇರಿದಂತೆ 16 ಸ್ಥಳಗಳಲ್ಲಿ ಸೆ.23 ಮತ್ತು 24ರಂದು ಶೋಧ ನಡೆಸಲಾಗಿದೆ. ಕಂಪೆನಿಯ ಷೇರುದಾರರು, ನಿರ್ದೇಶಕರು ಹಾಗೂ ಮಾಜಿ ನಿರ್ದೇಶಕರ ಮನೆ ಮತ್ತು ಕಚೇರಿಗಳಲ್ಲೂ ಪರಿಶೀಲನೆ ನಡೆಸಲಾಗಿದೆ ಎಂದು ಇ.ಡಿ. ಪ್ರಕಟಣೆಯಲ್ಲಿ ತಿಳಿಸಿದೆ.

ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧ ಪೊಲೀಸ್ ಠಾಣೆಗಳಲ್ಲಿ ಕದ್ದ ಚಿನ್ನಾಭರಣ ಖರೀದಿ ಹಾಗೂ ಅಕ್ರಮ ಹಣ ವರ್ಗಾವಣೆಗೆ ಸಂಬಂಧಿಸಿದಂತೆ ಈ ಹಿಂದೆ ಎಫ್‌ಐಆರ್‌ಗಳು ದಾಖಲಾಗಿದ್ದವು.

ಪೊಲೀಸ್ ತನಿಖೆ ಬಳಿಕ ನ್ಯಾಯಾಲಯಕ್ಕೆ ಆರೋಪಪಟ್ಟಿಯನ್ನೂ ಸಲ್ಲಿಸಲಾಗಿತ್ತು. ಆ ತನಿಖೆಯಲ್ಲಿ ಲಭ್ಯವಾದ ಮಾಹಿತಿಯ ಆಧಾರದಲ್ಲಿ ಇ.ಡಿ. ಶೋಧ ನಡೆಸಿದೆ ಎಂದು ತಿಳಿಸಿದೆ.

ಬೊಮ್ಮನಹಳ್ಳಿ ಬಾಬು ಕುಟುಂಬದ ವಿರುದ್ಧ ಆರೋಪ: ಕಂಪೆನಿಯೊಂದಿಗೆ ನಿಕಟ ಸಂಪರ್ಕ ಹೊಂದಿರುವ ಪಿ.ಎಸ್. ಆಯುಬ್ (ಬೊಮ್ಮನಹಳ್ಳಿ ಬಾಬು) ಹಾಗೂ ಅವರ ಕುಟುಂಬ ಸದಸ್ಯರಾದ ಒಬೆದುಲ್ಲಾ ಎ. ಮೊಹಮ್ಮದ್ ಸಲ್ಮಾನ್, ಅರ್ಬಿನ್ ತಾಜ್ ಮತ್ತಿತರರು ಅಕ್ರಮ ಹಣ ವರ್ಗಾವಣೆಯಲ್ಲಿ ಭಾಗಿಯಾಗಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ ಎಂದು ಇ.ಡಿ. ಆರೋಪಿಸಿದೆ. ಶೋಧದ ವೇಳೆ ಬೊಮ್ಮನಹಳ್ಳಿ ಬಾಬು ಹಾಗೂ ಕುಟುಂಬದವರು ತನಿಖೆಗೆ ಸಹಕರಿಸದೆ ತಲೆಮರೆಸಿಕೊಂಡಿದ್ದರು ಎಂದೂ ಸಂಸ್ಥೆ ತಿಳಿಸಿದೆ.

'ನಾನು ತಲೆಮರೆಸಿಕೊಂಡಿಲ್ಲ': ಬೊಮ್ಮನಹಳ್ಳಿ ಬಾಬು: ಇ.ಡಿ. ಆರೋಪಕ್ಕೆ ಪ್ರತಿಕ್ರಿಯಿಸಿರುವ ಬೊಮ್ಮನಹಳ್ಳಿ ಬಾಬು, ತಾವು ಎಲ್ಲಿಯೂ ತಲೆಮರೆಸಿಕೊಂಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಮುಖ್ಯಮಂತ್ರಿ ಆಗಮನದ ಹಿನ್ನೆಲೆಯಲ್ಲಿ ಹಿರಿಯೂರಿನ ಮಾದರ ಚೆನ್ನಯ್ಯ ಮಠದಲ್ಲಿರುವುದಾಗಿ ತಿಳಿಸಿದ್ದಾರೆ. ತಾನು ಹಾಗೂ ಕುಟುಂಬಸ್ಥರು ಕಂಪೆನಿಯ ಷೇರುದಾರರಾಗಿದ್ದು, ಕಂಪೆನಿಗೆ ನಿರ್ದೇಶಕರಿದ್ದಾರೆ. ದಾಳಿಗೆ ಸಂಬಂಧಿಸಿದಂತೆ ಅವರೇ ಪ್ರತಿಕ್ರಿಯಿಸಲಿದ್ದಾರೆ ಎಂದು ಹೇಳಿದ್ದಾರೆ.

# 'ದೀನದಯಾಳ್ ಉಪಾಧ್ಯಾಯರ ಆಶಯ ಸಾಕಾರಗೊಳಿಸಿದ ನರೇಂದ್ರ ಮೋದಿಜೀ'

● ವಿಕ್ರಮ ವಾಹಿನಿ । ಬೆಂಗಳೂರು



ಇಂದು ತಮ್ಮ ಕಾರ್ಯವೈಖರಿ ಮೂಲಕ ಎಲ್ಲದಕ್ಕೂ ಮೇಲ್ಪಂಕ್ತಿ ಹಾಕುವಂಥ ಪಂಡಿತ್ ದೀನದಯಾಳ ಉಪಾಧ್ಯಾಯರ ಜನ್ಮದಿನ. ಅವರ ವಿಚಾರವನ್ನು ಓದಿದರೆ ನಾವು ನಡೆಯುವ ದಾರಿಯನ್ನು ಸರಿ ಮಾಡಿಕೊಳ್ಳಲು ಸಾಧ್ಯವಿದೆ ಎಂದು ವಿಧಾನಪರಿಷತ್ ಸದಸ್ಯ ಕೇಶವ ಪ್ರಸಾದ್ ಅವರು ಅಭಿಪ್ರಾಯಪಟ್ಟರು.

ಪಂಡಿತ್ ದೀನದಯಾಳ್ ಉಪಾಧ್ಯಾಯ ಅವರ ಜನ್ಮದಿನದ ಪ್ರಯುಕ್ತ ಶುಕ್ರವಾರ ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಪುಷ್ಪಾರ್ಚನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಉಪಾಧ್ಯಾಯರ ಕಟ್ಟಕಡೆಯ ವ್ಯಕ್ತಿಗೆ ಸೌಕರ್ಯ ಕೊಡಬೇಕೆಂಬ ಆಶಯವನ್ನು ಇಂದು ನರೇಂದ್ರ ಮೋದಿಜೀ ಅವರು ಈಡೇರಿಸಿದ್ದಾರೆ. ಕಟ್ಟಕಡೆಯ ವ್ಯಕ್ತಿಯನ್ನು ನಾವು ಮರೆಯಬಾರದೆಂಬ ಅವರ ನಿರೀಕ್ಷೆಯನ್ನು ಬಡವರಿಗೆ ಗ್ಯಾಸ್ ಸಿಲಿಂಡರ್ ಸಂಪರ್ಕ, ಬಡವರ ಮನೆಗೂ ಶೌಚಾಲಯ, 58 ಕೋಟಿ ಜನ್‌ಧನ್ ಖಾತೆ ತೆರೆಯುವ ಕಾರ್ಯದ ಮೂಲಕ ಮೋದಿಜೀ ಅವರು ಸಾಕಾರಗೊಳಿಸಿದ್ದಾರೆ ಎಂದು ವಿವರಿಸಿದರು. ದೇಶದ 81 ಕೋಟಿ ಜನರಿಗೆ ಪಡಿತರ ಕೊಡಲಾಗುತ್ತಿದೆ. ಕಟ್ಟಕಡೆಯ ವ್ಯಕ್ತಿಗೆ ಕೇಂದ್ರ ಸರಕಾರ ನೆರವಾದ ಪರಿಣಾಮವಾಗಿ 25 ಕೋಟಿ ಜನರು ಬಡತನ ರೇಖೆಯಿಂದ ಮೇಲೆ ಬಂದಿದ್ದಾರೆ ಎಂದು ವಿಶ್ಲೇಷಿಸಿದರು. ಉಪಾಧ್ಯಾಯರು ಹೇಳಿದ್ದನ್ನು ಅಳವಡಿಸಿಕೊಂಡು ಮೋದಿಜೀ ಅವರ ಬಿಜೆಪಿ ಸರಕಾರ ಮುನ್ನಡೆಯುತ್ತಿದೆ ಎಂದು ತಿಳಿಸಿದರು.

1916ನೇ ಇಸವಿಯಲ್ಲಿ ಉತ್ತರ ಪ್ರದೇಶದಲ್ಲಿ ಹುಟ್ಟಿದ ಪಂಡಿತ್ ದೀನದಯಾಳ ಉಪಾಧ್ಯಾಯರು ತಮ್ಮ ಬಾಲ್ಯದಲ್ಲಿಯೇ ತುಂಬಾ ಕಷ್ಟ ಕಾರ್ಪಣ್ಯಗಳಿಂದ ಬೆಳೆದರು. ಎಳೆಯ ವಯಸ್ಸಿನಲ್ಲಿ ತಮ್ಮ ತಂದೆ ತಾಯಿ ಇಬ್ಬರನ್ನು ಕಳೆದುಕೊಂಡರು. ಈ ಸಾವುಗಳು ಅವರ ಮನಸ್ಸಿನ ಮೇಲೆ ಗಂಭೀರವಾದ ಪರಿಣಾಮ ಬೀರಿದ್ದವು ಎಂದು ಹೇಳಿದರು.

ವಿದ್ಯಾಭ್ಯಾಸದಲ್ಲಿ ಗೋಲ್ಡ್ ಮೆಡಲ್ ಪಡೆದಿದ್ದ ಅವರು, ಮುಂದೆ ಸಂಘದ ಸಂಪರ್ಕಕ್ಕೆ ಬಂದರು. ಬಳಿಕ ಡಾಕ್ಟರ್ ಹೆಗಡೆವಾರ್, ಪ್ರಮುಖರ ಸಂಪರ್ಕ ಉಂಟಾಯಿತು. ಡಾಕ್ಟರ್ ಜೀ ಅವರನ್ನ ನೋಡಿದಮೇಲೆ ತಮ್ಮ ಜೀವನವನ್ನೇ ರಾಷ್ಟ್ರ ಕಾರ್ಯಕ್ಕೆ ಮುಡಿಪಾಗಿಡಲು ಮುಂದಾದರು ಎಂದು ತಿಳಿಸಿದರು.

ಬಿಜೆಪಿ ರಾಜ್ಯ ಉಪಾಧ್ಯಕ್ಷ ಹರತಾಳು ಹಾಲಪ್ಪ, ಮಾಜಿ ಶಾಸಕ ಎಂ.ಡಿ.ಲಕ್ಷ್ಮೀನಾರಾಯಣ್, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್.ಹರೀಶ್, ರಾಜ್ಯ ಕಾರ್ಯಾಲಯ ಕಾರ್ಯದರ್ಶಿ ಲೋಕೇಶ್ ಅಂಬೆಕಲ್ಲು, ಸಹ ಕಾರ್ಯದರ್ಶಿ ವಿಶ್ವನಾಥ್ ಅಣಜಿ, ಪಕ್ಷದ ಮುಖಂಡರು ಮತ್ತು ಕಾರ್ಯಾಲಯದ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# 'ಅಸ್ಸಾಂ, ಗುಜರಾತ್, ಬಿಹಾರಕ್ಕಿಲ್ಲದ ನಿಯಮ ಕರ್ನಾಟಕಕ್ಕೆ ಏಕೆ'

● ವಿಕ್ರಮ ವಾಹಿನಿ । ಬೆಂಗಳೂರು

ಹದಿನೈದನೇ ಹಣಕಾಸು ಆಯೋಗದ ಶಿಫಾರಸಿನಂತೆ ಅನುದಾನ ಬಿಡುಗಡೆ ಮಾಡುವಾಗ ಅಸ್ಸಾಂ, ಬಿಹಾರ, ಗುಜರಾತ್ ಉತ್ತರಖಂಡ್ ರಾಜ್ಯಗಳಿಗೆ ಇಲ್ಲದ ನಿಯಮವನ್ನು ಕರ್ನಾಟಕಕ್ಕೆ ಮಾತ್ರ ಕೇಂದ್ರ ಅನ್ವಯಿಸುವುದೇಕೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಪ್ರಶ್ನಿಸಿದ್ದಾರೆ.



ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ಹಣದ ಕೊರತೆ ಇದೆಯೇ ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಅವರು, ಕೇಂದ್ರ ಸರ್ಕಾರದ ತಾರತಮ್ಯ ನೀತಿಯೇ ಇದಕ್ಕೆ ಕಾರಣ. ರಾಜ್ಯಕ್ಕೆ ನ್ಯಾಯಯುತವಾಗಿ 2025-26ನೇ ಸಾಲಿಗೆ ಬಿಡುಗಡೆ ಮಾಡಬೇಕಾದ 2186.20 ಕೋಟಿ ರೂ. ನೀಡದೆ ಅನ್ಯಾಯ ಎಸಗಿದೆ ಎಂದರು.

ಹಣಕಾಸು ಆಯೋಗದ ಶಿಫಾರಸಿನಂತೆ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡಲಾಗುವ ಅನುದಾನವನ್ನು ಕೇಂದ್ರ ಸರ್ಕಾರ ರಾಜ್ಯಕ್ಕೆ ಕಳಿಸುತ್ತದೆ. ರಾಜ್ಯ ಸರ್ಕಾರ 10 ದಿನಗಳ ಒಳಗಾಗಿ ಗ್ರಾ.ಪಂ.ಗೆ ಬಿಡುಗಡೆ ಮಾಡಬೇಕು. ಇಲ್ಲವೆ ಬಡ್ಡಿ ಸಹಿತ ಪಾವತಿಸಬೇಕು. ಈ ಸ್ವೀಕೃತಿ ವಿವರಗಳನ್ನು ಇ-ಗ್ರಾಮ ಸ್ವರಾಜ್ ಪೋರ್ಟಲ್ ನಲ್ಲಿ ಅಪ್ ಲೋಡ್ ಮಾಡಬೇಕಾಗುತ್ತದೆ.

2024-25ನೇ ಸಾಲಿನಲ್ಲಿ ಗ್ರಾ.ಪಂ.ಗಳಿಗೆ 2133.25 ಕೋಟಿ ಅನುದಾನ ಬಿಡುಗಡೆ ಮಾಡಲಾಗಿತ್ತು. ಇ-ಗ್ರಾಮ್ ಸ್ವರಾಜ್ ಪೋರ್ಟಲ್ ನಲ್ಲಿ 1907 ಕೋಟಿ ಸ್ವೀಕೃತಿ ದಾಖಲಾಗಿದೆ. ವ್ಯತ್ಯಾಸ ಇರುವುದು 225 ಕೋಟಿ ರೂ. ಮಾತ್ರ. ಇದು ಭೌತಿಕವಾಗಿ ಗ್ರಾ.ಪಂ. ತಲುಪಿದೆ. ಕ್ರಿಯಾ ಯೋಜನೆ ತಯಾರಿಸಿ. ಕಾಮಗಾರಿಯೂ ಆಗಿದೆ. ಆದರೆ ತಾಂತ್ರಿಕ ತೊಡಕಿನಿಂದ ಪೋರ್ಟಲ್ ನಲ್ಲಿ ಪ್ರತಿಬಿಂಬಿತವಾಗಿಲ್ಲ.

ಇಷ್ಟು ಸಣ್ಣ ಕಾರಣ ಇಟ್ಟುಕೊಂಡು 2186 ಕೋಟಿ ಬಿಡುಗಡೆ ಮಾಡದಿರುವುದು ರಾಜ್ಯಕ್ಕೆ ಮಾಡಿದ ಘೋರ ಅನ್ಯಾಯ ಎಂದರು.

ಆದರೆ, ಉತ್ತರ ಖಂಡಕ್ಕೆ 470 ಕೋಟಿ ರೂ. ಬಿಡುಗಡೆ ಮಾಡಿದ್ದಾರೆ. ಪೋರ್ಟಲ್ ನಲ್ಲಿ ಸ್ವೀಕೃತಿ ಶೂನ್ಯ. ಆದರೂ ಅವರಿಗೆ 2025-26ನೇ ಸಾಲಿನಲ್ಲಿ ಪೂರ್ತಿ ಅನುದಾನ ಬಿಡುಗಡೆ ಮಾಡಿದ್ದಾರೆ. ಕೇಂದ್ರ ಸರ್ಕಾರ ಒಂದು ಕಣ್ಣಿಗೆ ಸುಣ್ಣ ಮತ್ತೊಂದು ಕಣ್ಣಿಗೆ ಬೆಣ್ಣೆ ಹಚ್ಚುವ ಕೆಲಸ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಗುಜರಾತ್ ಗೆ ಇದೇ ಸಾಲಿನಲ್ಲಿ 2619 ಕೋಟಿ ಬಿಡುಗಡೆ ಮಾಡಿದ್ದಾರೆ. ಪೋರ್ಟಲ್ ನಲ್ಲಿ 2104 ಕೋಟಿ ಸ್ವೀಕೃತಿ ಆಗಿದೆ. ವ್ಯತ್ಯಾಸ 515 ಕೋಟಿ ಇದ್ದರೂ ಅವರಿಗೆ ಪೂರ್ತಿ ಹಣ ಕೊಟ್ಟಿದ್ದಾರೆ. ಅಸ್ಸಾಂ ರಾಜ್ಯಕ್ಕೆ 1315ಕೋಟಿ ರೂ. ಬಿಡುಗಡೆ ಆಗಿದೆ. ಪೋರ್ಟಲ್ ನಲ್ಲಿ 447 ಕೋಟಿ ರೂ. ಸ್ವೀಕೃತಿ ಇದೆ. ವ್ಯತ್ಯಾಸ 867 ಕೋಟಿ ರೂ. ಇದ್ದರೂ ಅವರಿಗೂ ಪೂರ್ತಿ ಹಣ ಬಿಡುಗಡೆ ಆಗಿದೆ. ಇನ್ನು ಬಿಹಾರ ರಾಜ್ಯಕ್ಕೆ 4109 ಕೋಟಿ ರೂ.ಅನುದಾನ ಬಿಡುಗಡೆ ಆಗಿದೆ. ಪೋರ್ಟಲ್ ನಲ್ಲಿ ಆಗಿರುವ ಸ್ವೀಕೃತಿ 1775 ಕೋಟಿ ರೂ. ಮಾತ್ರ. ವ್ಯತ್ಯಾಸ 2334 ಕೋಟಿ ರೂ. ಇದ್ದರೂ ಅವರಿಗೂ ಪೂರ್ತಿ ಅನುದಾನ ಬಿಡುಗಡೆ ಮಾಡಿದ್ದಾರೆ. ಇದು ತಾರತಮ್ಯ ಅಲ್ಲವೇ.

ತಮಗೆ ಬೇಕಾದ ರಾಜ್ಯಗಳಿಗೆ ನಿಯಮದಿಂದ ವಿನಾಯತಿ ನೀಡಿ, ರಾಜ್ಯಕ್ಕೆ ಈ ರೀತಿ ಅನ್ಯಾಯ ಮಾಡುವುದು ಸರಿಯಲ್ಲ. ರಾಜ್ಯ ಬರಪರಿಸ್ಥಿತಿಯಿಂದ ತತ್ತರಿಸುತ್ತಿರುವಾಗ ಕೇಂದ್ರ ಸರ್ಕಾರ ಹಣ ಬಿಡುಗಡೆ ಮಾಡದಿರುವುದು ಅಮಾನವೀಯ. ಇದನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್ ಗೆ ಶೀಘ್ರವೇ ಮನವಿ ಸಲ್ಲಿಸಲಾಗುವುದು ಎಂದೂ ತಿಳಿಸಿದರು.

ಈ ಸಂಬಂಧ ಇಲಾಖೆಯಿಂದ 08.12.2025, 19.01.2026, 25.03.2026, 04.04.2026, 17.04.2026 ರಂದು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. ಮಾನ್ಯ ಮುಖ್ಯಮಂತ್ರಿಯವರು ಕೂಡ 25.02.2026 ಮತ್ತು 06.04.2026 ಹಾಗೂ ಇತ್ತೀಚೆಗೆ 16.07.2026ರಂದು ಕೇಂದ್ರ ಹಣಕಾಸು ಸಚಿವರಿಗೆ ಮತ್ತು ಸಂಬಂಧಿತ ಸಚಿವರಿಗೆ ಪತ್ರ ಬರೆದು ಮನವಿ ಮಾಡಿದ್ದರೂ ಸ್ಪಂದಿಸಿಲ್ಲ. ತಾವು ಕೂಡ ಎಲ್ಲ ಸಂಸದರಿಗೆ ಪತ್ರ ಬರೆದು ಕೇಂದ್ರ ಸಚಿವರನ್ನು ಭೇಟಿ ಮಾಡಿ ಮನವಿ ಮಾಡಿದ್ದರೂ ಹಣ ಬಿಡುಗಡೆ ಮಾಡಿಲ್ಲ ಎಂದು ಈಶ್ವರ ಖಂಡ್ರೆ ಅಸಮಾಧಾನ ವ್ಯಕ್ತಪಡಿಸಿದರು.

# ಎಸ್‌ಐಆರ್ ರಾಜಕೀಯಕ್ಕೆ ಬಳಕೆ ಸರಿಯಲ್ಲ: ಡಿ.ಕೆ. ಶಿವಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು

"ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ನಡೆಸುವುದಕ್ಕೆ ನಮ್ಮ ಆಕ್ಷೇಪವಿಲ್ಲ. ಆದರೆ, ಎಸ್‌ಐಆರ್ ಅನ್ನು ರಾಜಕೀಯ ಉದ್ದೇಶಕ್ಕೆ ಬಳಸುತ್ತಿರುವುದು ಸರಿಯಲ್ಲ" ಎಂದು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹೇಳಿದರು.

ಅರಮನೆ ಮೈದಾನದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಶುಕ್ರವಾರ ಪ್ರತಿಕ್ರಿಯೆ ನೀಡಿದರು.

ಚುನಾವಣಾ ಆಯೋಗದ ವಿಚಾರವಾಗಿ ರಾಹುಲ್ ಗಾಂಧಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ಅರ್ಹರೆಲ್ಲರಿಗೂ ಮತದಾನದ ಹಕ್ಕು ಸಿಗಬೇಕು. ಇದು ಪ್ರಜಾಪ್ರಭುತ್ವದ ರಾಷ್ಟ್ರ, ಸರ್ವಾಧಿಕಾರವಲ್ಲ. ಚುನಾವಣಾ ಆಯೋಗದ ಮೂವರು ಸದಸ್ಯರ ಸಮಿತಿಯಲ್ಲೇ ಬಹುಮತದ ನಿರ್ಧಾರವಾಗುತ್ತಿಲ್ಲ ಎಂಬುದು ಬಹಿರಂಗವಾಗಿದೆ. ಈ ವಿಚಾರದಲ್ಲಿ ಯಾರಿಗೂ ತೃಪ್ತಿ ಇಲ್ಲ" ಎಂದರು.

"ರಾಹುಲ್ ಗಾಂಧಿ ಎಸ್‌ಐಆರ್ ಕುರಿತು ಹಲವು ಪ್ರಶ್ನೆಗಳನ್ನು ಎತ್ತಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೂ ಹೊಣೆಗಾರರು ಎಂದು ನಾವೂ ಹೇಳಿದ್ದೇವೆ. ಮುಖ್ಯ ಚುನಾವಣಾ ಆಯುಕ್ತ ಗ್ಯಾನೇಶ್ ಕುಮಾರ್ ರಾಜೀನಾಮೆ ನೀಡಬೇಕು ಎಂದು ವಿರೋಧ ಪಕ್ಷಗಳು ಆಗ್ರಹಿಸುತ್ತಿರುವುದು ಸಹಜ" ಎಂದು ಹೇಳಿದರು.

ಬೇರೆ ರಾಜ್ಯಗಳಿಗೆ ಕೇಂದ್ರ ಸರ್ಕಾರ ಮುಂಗಡ ಹಣ ಕೊಟ್ಟಿಲ್ಲವೇ?

ಕೇಂದ್ರದಿಂದ ಮುಂಗಡ ಹಣ ಬಿಡುಗಡೆ ಮಾಡುವಂತೆ ಪತ್ರ ಬರೆದಿರುವ ಕುರಿತು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಮಾಡಿದ್ದ ಟೀಕೆಗೆ ಪ್ರತಿಕ್ರಿಯಿಸಿದ ಅವರು, "ನಾವು ಕತ್ತೆಯನ್ನೇ ಕಾಯುತ್ತಿದ್ದೇವೆ. ಅವರು ಏನಾದರೂ ಅಂದುಕೊಳ್ಳಲಿ. ಅವರ ಜವಾಬ್ದಾರಿ ಏನು ಎಂಬುದನ್ನು ಅವರು ತಿಳಿದುಕೊಳ್ಳಲಿ" ಎಂದರು.

'ಬೇರೆ ರಾಜ್ಯಗಳಿಗೆ ಮುಂಗಡ ಹಣ ಕೊಟ್ಟಿಲ್ಲವೇ? ತಂಡ ಕಳುಹಿಸಿ ಮನವಿ ಮಾಡಲಿ. ಪ್ರಧಾನಮಂತ್ರಿಯವರ ಭೇಟಿಗೆ ಸರ್ವಪಕ್ಷ ನಿಯೋಗ ಕರೆದೊಯ್ಯಲು ನಾವು ಸಮಯ ಕೇಳಿದ್ದೇವೆ. ಸಮಯ ಸಿಕ್ಕಾಗ ಜೋಶಿ ಅವರೂ ಬರಲಿ, ಎಲ್ಲರೂ ಬರಲಿ' ಎಂದು ಹೇಳಿದರು.

# 'ರೂ 2,500 ಪರಿಹಾರ ನೀಡಿ ರೈತರನ್ನು ಅವಮಾನಿಸಲಾಗಿದೆ'

● ವಿಕ್ರಮ ವಾಹಿನಿ । ಬೆಂಗಳೂರು

ವಿಶೇಷ ಅಧಿವೇಶನದಲ್ಲಿ ರೈತರ ಬರ ಪರಿಹಾರ ಕುರಿತು ಚರ್ಚಿಸಿ ಸೂಕ್ತ ನೆರವು ಘೋಷಿಸುವ ನಿರೀಕ್ಷೆಯಿತ್ತು. ಆದರೆ ಸರ್ಕಾರ ಎಕರೆಗೆ ರೂ 2,500 ಪರಿಹಾರ ಘೋಷಿಸುವ ಮೂಲಕ ಅನ್ನದಾತರಿಗೆ ಅಪಮಾನ ಮಾಡಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದರು.

ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎನ್‌ಡಿಆರ್‌ಎಫ್ ಮಾರ್ಗಸೂಚಿಯಂತೆ ಎಕರೆಗೆ ರೂ 8 ಸಾವಿರದವರೆಗೆ ಪರಿಹಾರ ನೀಡಬೇಕಾಗುತ್ತದೆ. ರೈತರ ಸಂಕಷ್ಟದ ಸಂದರ್ಭದಲ್ಲಿ ಸರ್ಕಾರ ರೂ 2,500 ನೀಡಿ ಕೈತೊಳೆದುಕೊಂಡಿದೆ. ರೈತರು ಭಿಕ್ಷೆ ಕೇಳುತ್ತಿಲ್ಲ.

ಸರ್ಕಾರಕ್ಕೆ ಪರಿಹಾರ ನೀಡಲು ಸಾಧ್ಯವಾಗದಿದ್ದರೆ ತನ್ನ ಆರ್ಥಿಕ ಪರಿಸ್ಥಿತಿಯನ್ನು ಸ್ಪಷ್ಟಪಡಿಸಬೇಕು ಎಂದರು.

ಸರ್ಕಾರ ರೈತರಿಗೆ ಎಕರೆಗೆ ರೂ 25 ಸಾವಿರ ಪರಿಹಾರ ನೀಡಬೇಕು. ಇದಕ್ಕಾಗಿ ಸುರಂಗ ರಸ್ತೆ ಯೋಜನೆ ಸ್ಥಗಿತಗೊಳಿಸಿ ಹಣ ಬಳಸುವಂತೆಯೂ ಆಗ್ರಹಿಸಿದರು. ಹೆಚ್ಚಿನ ಪರಿಹಾರ ನೀಡದಿದ್ದರೆ ಹೋರಾಟ ನಡೆಸುವುದಾಗಿ ಎಚ್ಚರಿಸಿದರು.

**ಕೇಂದ್ರದಿಂದ ರೂ 20 ಸಾವಿರ ಕೋಟಿ ನೆರವು**

ಯುಪಿಎ ಸರ್ಕಾರದ ಅವಧಿಯಲ್ಲಿ ವಿಪತ್ತು ಪರಿಹಾರಕ್ಕೆ ಹೋಲಿಸಿದರೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಅವಧಿಯಲ್ಲಿ ರಾಜ್ಯಕ್ಕೆ ಹೆಚ್ಚಿನ ನೆರವು ದೊರೆತಿದೆ ಎಂದು ಅಶೋಕ ಹೇಳಿದರು. 2015ರಿಂದ 2025ರವರೆಗೆ ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ಮೂಲಕ ಸುಮಾರು ರೂ 20 ಸಾವಿರ ಕೋಟಿ ನೆರವು ದೊರೆತಿದೆ ಎಂದು ಅವರು ವಿವರಿಸಿದರು. ಕಡಿಮೆ ಪರಿಹಾರ ನೀಡುವ ಮಾರ್ಗಸೂಚಿಯನ್ನು ಹಿಂದಿನ ಯುಪಿಎ ಸರ್ಕಾರ ರೂಪಿಸಿತ್ತು ಎಂದು ಆರೋಪಿಸಿದರು.

ಬಿಜೆಪಿ ನಾಯಕರಿಗೆ ಭದ್ರತೆಗೆ ಆಗ್ರಹ

ಚಿಕ್ಕಬಳ್ಳಾಪುರದಲ್ಲಿ ಬಸನಗೌಡ ಪಾಟೀಲ್ ಯತ್ನಾಳ್, ಪ್ರತಾಪ್ ಸಿಂಹ ಹಾಗೂ ಸಿ.ಟಿ. ರವಿ ಅವರನ್ನು ಗುರಿಯಾಗಿಸಿಕೊಂಡು ಕೊಲೆ ಸಂಚು ರೂಪಿಸಲಾಗಿತ್ತು ಎಂಬ ಪ್ರಕರಣದಲ್ಲಿ ಒಬ್ಬ ಆರೋಪಿಯನ್ನು ಬಂಧಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಮೂವರು ಬಿಜೆಪಿ ನಾಯಕರಿಗೂ ಸರ್ಕಾರ ಸೂಕ್ತ ಭದ್ರತೆ ಒದಗಿಸಬೇಕು ಎಂದು ಆಗ್ರಹಿಸಿದರು.

**ರೂ 2 ಲಕ್ಷ ಕೋಟಿ ಬಾಕಿ: ಸರ್ಕಾರದ ವಿರುದ್ಧ ಆರೋಪ:** ರಾಜ್ಯದಲ್ಲಿ ಸುಮಾರು ರೂ 2 ಲಕ್ಷ ಕೋಟಿ ಬಿಲ್ ಬಾಕಿ ಇದೆ ಎಂದು ಆರ್ಥಿಕ ಇಲಾಖೆ ತಿಳಿಸಿದೆ. ಹಣದ ಕೊರತೆಯ ನಡುವೆಯೂ ಸರ್ಕಾರ ಹೊಸ ಘೋಷಣೆಗಳನ್ನು ಮಾಡುತ್ತಿದೆ ಎಂದು ಅಶೋಕ ಆರೋಪಿಸಿದರು. ರಾಜ್ಯವನ್ನು ಸಾಲದ ಸುಳಿಗೆ ತಳ್ಳಲಾಗುತ್ತಿದೆ ಎಂದು ದೂರಿದರು. ಬರದ ಚರ್ಚೆ ವೇಳೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಶಾಸಕರ ವೈಯಕ್ತಿಕ ಬದುಕಿನ ಕುರಿತು ನೀಡಿದ ಹೇಳಿಕೆ ಅನಗತ್ಯವಾಗಿತ್ತು. ಯಾರನ್ನು ಗುರಿಯಾಗಿಸಿಕೊಂಡು ಹೇಳಿಕೆ ನೀಡಲಾಗಿದೆ ಎಂಬುದನ್ನು ಅವರೇ ಸ್ಪಷ್ಟಪಡಿಸಬೇಕು ಎಂದು ಅಶೋಕ ಹೇಳಿದರು.



# 'ಮೊದಲು ಎಸ್‌ಡಿಆರ್‌ಎಫ್ ನಿಧಿ ಬಳಸಿ, ಬಳಿಕ ಕೇಂದ್ರಕ್ಕೆ ಕೇಳಿ'

**ರಾಜ್ಯದ ಬರ ನಿರ್ವಹಣೆಯಲ್ಲಿ ಸರ್ಕಾರಕ್ಕೆ ಗಂಭೀರತೆಯಿಲ್ಲ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಆರೋಪಿಸಿದ್ದು, ಮೊದಲು ಎಸ್‌ಡಿಆರ್‌ಎಫ್ ಹಣ ಬಳಸಿ ರೈತರಿಗೆ ನೆರವು ನೀಡಿ ಬಳಿಕ ಎನ್‌ಡಿಆರ್‌ಎಫ್ ನೆರವು ಕೋರಬೇಕು ಎಂದು ಆಗ್ರಹಿಸಿದರು. ಬರಪೀಡಿತ ತಾಲೂಕುಗಳ ಆಯ್ಕೆಯಲ್ಲಿ ಪಾರದರ್ಶಕತೆ ಇರಬೇಕು ಎಂದೂ ಒತ್ತಾಯಿಸಿದರು.**

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಬರ ಪರಿಸ್ಥಿತಿ ನಿರ್ವಹಣೆಯಲ್ಲಿ ಸರ್ಕಾರಕ್ಕೆ ಗಂಭೀರತೆಯಿಲ್ಲ. ಮೊದಲು ಲಭ್ಯವಿರುವ ರಾಜ್ಯ ವಿಪತ್ತು ಪ್ರತಿಕ್ರಿಯಾ ನಿಧಿ (ಎಸ್‌ಡಿಆರ್‌ಎಫ್) ಬಳಸಿ ರೈತರಿಗೆ ನೆರವು ನೀಡಲಿ, ಬಳಿಕ ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯಾ ನಿಧಿ (ಎನ್‌ಡಿಆರ್‌ಎಫ್) ನೆರವಿಗಾಗಿ ಕೇಂದ್ರವನ್ನು ಕೇಳಲಿ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದರು.



ಬೆಂಗಳೂರಿನಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿಂದಿನ ಯಡಿಯೂರಪ್ಪ ಮತ್ತು ಬಸವರಾಜ ಬೊಮ್ಮಾಯಿ ಸರ್ಕಾರಗಳು ಎಸ್‌ಡಿಆರ್‌ಎಫ್ ಮೂಲಕ ನೆರವು ನೀಡಿ ಬಳಿಕ ಕೇಂದ್ರದಿಂದ ಹೆಚ್ಚುವರಿ ನೆರವು ಕೋರಿದ್ದವು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹಿಂದಿನ ದಾಖಲೆಗಳನ್ನು ಪರಿಶೀಲಿಸಬೇಕು ಎಂದು ಹೇಳಿದರು.

ಪ್ರಸ್ತುತ ರಾಜ್ಯ ಸರ್ಕಾರ ತನ್ನ ಬಳಿಯಿರುವ ಹಣವನ್ನು ಸಮರ್ಪಕವಾಗಿ ಬಳಸದೆ ಕೇಂದ್ರದತ್ತ ಬೆರಳು ತೋರಿಸುತ್ತಿದೆ ಎಂದು ಜೋಶಿ ಆರೋಪಿಸಿದರು. ರಾಜ್ಯ ಸರ್ಕಾರ ಆರ್ಥಿಕ ಸಂಕಷ್ಟದಲ್ಲಿರುವುದನ್ನು ಸ್ವತಃ ಆರ್ಥಿಕ ಇಲಾಖೆಯ ಹೇಳಿಕೆಗಳು ತೋರಿಸುತ್ತಿವೆ.

**ಬರ ಪಟ್ಟಿ ವಿಚಾರದಲ್ಲೂ ಆರೋಪ:** ಶಾಸಕರು ರಾಜೀನಾಮೆ ನೀಡಲು ಮುಂದಾದಾಗ ಅವರ ಕ್ಷೇತ್ರಗಳ ತಾಲೂಕುಗಳನ್ನು ಮಾತ್ರ ಬರಪೀಡಿತ ಪಟ್ಟಿಗೆ ಸೇರಿಸಲಾಗುತ್ತಿದೆ ಎಂಬ ಆರೋಪ ಮಾಡಿರುವ ಜೋಶಿ, ಬರಪೀಡಿತ ಪ್ರದೇಶಗಳ ಆಯ್ಕೆಯಲ್ಲಿ ಪಾರದರ್ಶಕತೆ ಇರಬೇಕು ಎಂದು ಆಗ್ರಹಿಸಿದರು.

ರಾಜ್ಯ ಸರ್ಕಾರ 177 ತಾಲೂಕುಗಳನ್ನು ಬರಪೀಡಿತವೆಂದು ಘೋಷಿಸಿರುವ ಹಿನ್ನೆಲೆಯಲ್ಲಿ, ಬರ ನಿರ್ವಹಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸರ್ಕಾರ ಹೇಳಿದೆ.

**ಕೇಂದ್ರ ನೆರವಿಗೆ ಎನ್‌ಡಿಆರ್‌ಎಫ್ ಪ್ರಕ್ರಿಯೆ**

ಕರ್ನಾಟಕದ ಹಿತಕ್ಕೆ ಕೇಂದ್ರ ಸರ್ಕಾರ ಬದ್ಧವಾಗಿದೆ. ಬರ ಪರಿಸ್ಥಿತಿಯ ಕುರಿತು ಕೇಂದ್ರದ ತಂಡದ ಅಧ್ಯಯನ ಹಾಗೂ ನಿಯಮಾನುಸಾರ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಎನ್‌ಡಿಆರ್‌ಎಫ್ ನೆರವಿನ ಬಗ್ಗೆ ತೀರ್ಮಾನಿಸಲಾಗುವುದು ಎಂದು ಪ್ರಲ್ಹಾದ ಜೋಶಿ ಹೇಳಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಇತ್ತೀಚೆಗೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದು, ಮಧ್ಯಂತರ ಬರ ಪರಿಹಾರ ಹಾಗೂ ಎಸ್‌ಡಿಆರ್‌ಎಫ್‌ನ ಕೇಂದ್ರದ ಪಾಲಿನ ಮುಂದಿನ ಕಂತನ್ನು ಮುಂಗಡವಾಗಿ ಬಿಡುಗಡೆ ಮಾಡುವಂತೆ ಮನವಿ ಮಾಡಿದ್ದರು.

**ಕಸ್ತೂರಿರಂಗನ್ ವರದಿ: ಕೇಂದ್ರದ ಬದ್ಧತೆ**

ಕಸ್ತೂರಿರಂಗನ್ ವರದಿ ವಿಚಾರದಲ್ಲಿ ಈಗ ಕೇಂದ್ರ ಸರ್ಕಾರದ ಮೇಲೆ ಆರೋಪ ಮಾಡಲಾಗುತ್ತಿದೆ. ಕರ್ನಾಟಕ ಮತ್ತು ರಾಜ್ಯದ ಜನರ ಹಿತಕ್ಕೆ ಕೇಂದ್ರ ಸರ್ಕಾರ ಸದಾ ಬದ್ಧವಾಗಿದ್ದು, ಪರಿಸರ ಹಾಗೂ ಜನರ ಹಿತದೃಷ್ಟಿಯಿಂದ ತಜ್ಞರ ಸಲಹೆ ಪಡೆದು ಸೂಕ್ತ ನಿರ್ಧಾರ ಕೈಗೊಳ್ಳಲಿದೆ ಎಂದು ಜೋಶಿ ಹೇಳಿದರು.

ಭ್ರಷ್ಟಾಚಾರದ ಆರೋಪ

ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಭ್ರಷ್ಟಾಚಾರ ಹೆಚ್ಚಾಗಿದೆ ಎಂದು ಆರೋಪಿಸಿದ ಜೋಶಿ, ಪ್ರಮುಖ ಹುದ್ದೆಗಳು ಹರಾಜಾಗುತ್ತಿವೆ ಎಂದು ದೂರಿದರು. ಸರ್ಕಾರಿ ಅಧಿಕಾರಿಗಳು ಲಂಚ ಪಡೆದಿರುವ ಆರೋಪಗಳ ಕುರಿತು ತನಿಖೆ ನಡೆಯಬೇಕಿದೆ ಎಂದರು. ಗುತ್ತಿಗೆದಾರರಿಗೆ ಬಿಲ್ ಪಾವತಿಗೂ ಮುನ್ನ ಹಣ ನೀಡಬೇಕಾದ ಪರಿಸ್ಥಿತಿ ಇದೆ ಎಂದು ಆರೋಪಿಸಿದರು.

**ರಾಹುಲ್ ಗಾಂಧಿ ವಿರುದ್ಧ ವಾಗ್ದಾಳಿ:** ಚುನಾವಣಾ ಸೋಲಿಗೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಹೊಣೆ ಮಾಡುವುದು ಸರಿಯಲ್ಲ ಎಂದು ಹೇಳಿದ ಜೋಶಿ, ವಿವಿಧ ರಾಜ್ಯಗಳಲ್ಲಿ ಕಾಂಗ್ರೆಸ್‌ನ ಚುನಾವಣಾ ಫಲಿತಾಂಶಗಳ ಕುರಿತು ರಾಹುಲ್ ಗಾಂಧಿ ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಟೀಕಿಸಿದರು. ಮೋದಿ ವಿರುದ್ಧದ ಆರೋಪಗಳ ಬದಲಿಗೆ ಕಾಂಗ್ರೆಸ್ ತನ್ನ ರಾಜಕೀಯ ಪರಿಸ್ಥಿತಿಯನ್ನು ಪರಿಶೀಲಿಸಬೇಕು ಎಂದು ಹೇಳಿದರು.

# ಸೌಜನ್ಯ ಪ್ರಕರಣ: ಎಸ್‌ಐಟಿ ಪುನರ್‌ರಚನೆಗೆ ಆಗ್ರಹ

● ವಿಕ್ರಮ ವಾಹಿನಿ । ಬೆಂಗಳೂರು

ಧರ್ಮಸ್ಥಳದ ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಮರುತನಿಖೆಗಾಗಿ ರಚಿಸಲಾಗಿರುವ ವಿಶೇಷ ತನಿಖಾ ತಂಡ (ಎಸ್‌ಐಟಿ)ಯನ್ನು ಪುನರ್‌ರಚಿಸುವಂತೆ 'ಕೊಂದವರು ಯಾರು?' ಆಂದೋಲನ ರಾಜ್ಯ ಸರ್ಕಾರವನ್ನು ಒತ್ತಾಯಿಸಿದೆ.

ಸುಪ್ರೀಂ ಕೋರ್ಟ್‌ನ ನಿರ್ದೇಶನದಂತೆ ರಾಜ್ಯ ಸರ್ಕಾರ ಐಜಿಪಿ ಎನ್. ಶಶಿಕುಮಾರ್ ನೇತೃತ್ವದಲ್ಲಿ ಎಸ್‌ಐಟಿ ರಚಿಸಿದ್ದು, ಉನ್ನತ ಶ್ರೇಣಿಯ ಅಧಿಕಾರಿಯ ನೇತೃತ್ವದಲ್ಲೇ ತನಿಖೆ ನಡೆಯಬೇಕು ಎಂಬ ನ್ಯಾಯಾಲಯದ ಆಶಯಕ್ಕೆ ಇದು ಪೂರಕವಾಗಿಲ್ಲ ಎಂದು ಆಂದೋಲನದ ಮುಖಂಡರು ಬಹಿರಂಗ ಪತ್ರದಲ್ಲಿ ತಿಳಿಸಿದ್ದಾರೆ.

ಪ್ರಕರಣದ ಹಿಂದಿನ ತನಿಖೆಯಲ್ಲಿನ ಲೋಪಗಳು ಹಾಗೂ ಪ್ರಕರಣದ ಗಂಭೀರತೆಯನ್ನು ಗಮನಿಸಿ, ಡಿಜಿ ಅಥವಾ ಎಡಿಜಿಪಿ ದರ್ಜೆಯ ಅಧಿಕಾರಿಯನ್ನು ಎಸ್‌ಐಟಿ ಮುಖ್ಯಸ್ಥರನ್ನಾಗಿ ನೇಮಿಸಬೇಕು. ವಿಧಿವಿಜ್ಞಾನ ಸೇರಿದಂತೆ ತಾಂತ್ರಿಕ ಪರಿಣತಿ ಹೊಂದಿರುವ ಹಾಗೂ ದಕ್ಷ ಅಧಿಕಾರಿಗಳನ್ನು ತಂಡಕ್ಕೆ ಸೇರಿಸಬೇಕು ಎಂದು ಮನವಿ ಮಾಡಿದ್ದಾರೆ.

ಎಸ್‌ಐಟಿಗೆ ಸೇರ್ಪಡೆಗೊಂಡಿರುವ ಕೆಲವು ಅಧಿಕಾರಿಗಳ ವಿರುದ್ಧ ವಿವಿಧ ಆರೋಪಗಳ ಕುರಿತು ಮಾಧ್ಯಮಗಳಲ್ಲಿ ವರದಿಯಾಗಿದ್ದು, ಇಂತಹ ವಿವಾದಗಳಿಗೆ ಒಳಗಾದ ಅಧಿಕಾರಿಗಳನ್ನು ತಂಡದಿಂದ ಕೈಬಿಡಬೇಕು ಎಂದು 'ಕೊಂದವರು ಯಾರು?' ಆಂದೋಲನ ಆಗ್ರಹಿಸಿದೆ. ಈ ಆರೋಪಗಳು ಸಂಬಂಧಿಸಿದವರ ವಿರುದ್ಧ ಸಾಬೀತಾಗಿವೆ ಎಂಬ ನಿರ್ಣಯವನ್ನು ಆಂದೋಲನದ ಹೇಳಿಕೆ ಸ್ವತಃ ನೀಡುವುದಿಲ್ಲ. ಸೌಜನ್ಯ ಕುಟುಂಬ ಸೇರಿದಂತೆ ನ್ಯಾಯಕ್ಕಾಗಿ ಹೋರಾಟ ನಡೆಸುತ್ತಿರುವವರ ಆಶಯದಂತೆ, ಯಾವುದೇ ಸ್ಥಳೀಯ ಪ್ರಭಾವ ಅಥವಾ ಹಿಂದಿನ ತನಿಖಾ ಲೋಪಗಳಿಗೆ ಒಳಗಾಗದ ಅಧಿಕಾರಿಗಳನ್ನು ನೇಮಿಸಿ ಪಾರದರ್ಶಕ ಮರುತನಿಖೆ ನಡೆಸಬೇಕು ಎಂದು ಪತ್ರದಲ್ಲಿ ಒತ್ತಾಯಿಸಲಾಗಿದೆ.

ಎಸ್‌ಐಟಿ ಪುನರ್‌ರಚನೆಗೆ ಆಗ್ರಹಿಸಿ 'ಕೊಂದವರು ಯಾರು?' ಆಂದೋಲನದ ವತಿಯಿಂದ ಶುಕ್ರವಾರ ಸಂಜೆ 4.30ಕ್ಕೆ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ಪ್ರಕರಣದ ತನಿಖೆಯಲ್ಲಿ ಯಾವುದೇ ರೀತಿಯ ಪೂರ್ವಾಗ್ರಹಕ್ಕೆ ಅವಕಾಶ ನೀಡದೆ, ಸಾಕ್ಷ್ಯಾಧಾರಗಳ ವೈಜ್ಞಾನಿಕ ಪರಿಶೀಲನೆ, ಸಾಕ್ಷಿಗಳ ಹೇಳಿಕೆಗಳ ಮರುಪರಿಶೀಲನೆ ಹಾಗೂ ಹಿಂದಿನ ತನಿಖೆಯಲ್ಲಿನ ಲೋಪಗಳ ಸಮಗ್ರ ಪರಿಶೀಲನೆ ನಡೆಸಬೇಕು. ಸೌಜನ್ಯ ಕುಟುಂಬಕ್ಕೆ ನ್ಯಾಯ ದೊರಕುವ ನಿಟ್ಟಿನಲ್ಲಿ ತನಿಖೆ ನಿಷ್ಪಕ್ಷಪಾತವಾಗಿ ಹಾಗೂ ಕಾಲಮಿತಿಯಲ್ಲಿ ಪೂರ್ಣಗೊಳ್ಳಬೇಕು ಎಂದು ಆಂದೋಲನ ಒತ್ತಾಯಿಸಿದೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481

ವಿಕ್ರಮ ವಾಹಿನಿ
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

## ಡಿಕೆಶಿ ವ್ಯಕ್ತಿತ್ವ ವಜ್ರದಂತೆ ಕಠಿಣ, ಹೃದಯ ಮೃದು: ನೊಣವಿನಕೆರೆ ಶ್ರೀ

● ವಿಕ್ರಮ ವಾಹಿನಿ । ತುಮಕೂರು

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ವ್ಯಕ್ತಿತ್ವ ವಜ್ರದಂತೆ ಕಠಿಣವಾಗಿದ್ದರೂ, ಹೃದಯ ಮೃದು ಹಾಗೂ ಮಾತೃ ವಾತ್ಸಲ್ಯ ಹೊಂದಿರುವ ವ್ಯಕ್ತಿ ಎಂದು ನೊಣವಿನಕೆರೆ ಶಿವಯೋಗಿಶ್ವರ್ ಶ್ರೀಗಳು ಹೇಳಿದರು. ಶುಕ್ರವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಡಿ.ಕೆ. ಶಿವಕುಮಾರ್ ಅವರು ಕಷ್ಟದ ಸಂದರ್ಭಗಳಲ್ಲಿಯೂ ಮಠದ ಆಶೀರ್ವಾದ ಪಡೆದಿದ್ದು, ಮಠದ ಮಗನಂತೆ ಬೆಳೆದಿದ್ದಾರೆ. ಜನರನ್ನು ತಾಯಿ ವಾತ್ಸಲ್ಯದಿಂದ ಕಾಣುತ್ತಿರುವ ಅವರು, ಮುಂದಿನ ದಿನಗಳಲ್ಲಿ ಇನ್ನಷ್ಟು ಉನ್ನತ ಸ್ಥಾನಕ್ಕೇರುವ ಸಾಧ್ಯತೆ ಇದೆ



ಎಂದು ಶ್ರೀಗಳು ಹೇಳಿದರು. ಮಠವು ಎಂದಿಗೂ ರಾಜಕೀಯ ವಿಚಾರದಲ್ಲಿ ಯಾರಿಗೂ ಸಲಹೆ ನೀಡುವುದಿಲ್ಲ. ರಾಜಕೀಯದಲ್ಲಿ ಧರ್ಮವನ್ನು ಬೆರೆಸದೆ ಮಾನವ ಸೇವೆಗೆ ಆದ್ಯತೆ ನೀಡುವಂತೆ ಮಾತ್ರ ಸಲಹೆ ನೀಡುತ್ತೇವೆ. ಡಿ.ಕೆ. ಶಿವಕುಮಾರ್ ಸರಳ, ಸಜ್ಜನಿಕೆಯ ಹಾಗೂ ಮಾತೃ ಹೃದಯದ ವ್ಯಕ್ತಿ ಎಂದು ಅವರು ತಿಳಿಸಿದರು.

## 'ಭೂಮಿ ಬಿಡಿ, ಇಲ್ಲವೇ ದಯಾಮರಣಕ್ಕೆ ಅವಕಾಶ ನೀಡಿ'

● ವಿಕ್ರಮ ವಾಹಿನಿ । ರಾಮನಗರ

ಬಿಡದಿ ಟೌನ್‌ಶಿಪ್ ಯೋಜನೆಯನ್ನು ವಿರೋಧಿಸಿ ರಾಮನಗರ ತಾಲೂಕಿನ ಬೈರಮಂಗಲ ಗ್ರಾಮದಲ್ಲಿ ಕಳೆದ ಐದು ದಿನಗಳಿಂದ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದ ರೈತರನ್ನು ಶುಕ್ರವಾರ ಪೊಲೀಸರು ವಶಕ್ಕೆ ಪಡೆದು ಚನ್ನಪಟ್ಟಣದ ಪೊಲೀಸ್ ಭವನಕ್ಕೆ ಸ್ಥಳಾಂತರಿಸಿದರು. ಆದರೆ, ಅಲ್ಲಿಯೂ ಹೋರಾಟ ಮುಂದುವರಿಸಿರುವ ರೈತರು, ತಮ್ಮ ಬೇಡಿಕೆ ಈಡೇರುವವರೆಗೂ ಉಪವಾಸ ಸತ್ಯಾಗ್ರಹ ಕೈಬಿಡುವುದಿಲ್ಲ ಎಂದು ಪಟ್ಟು ಹಿಡಿದರು.

ಟೌನ್‌ಶಿಪ್ ಯೋಜನೆಗಾಗಿ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಪ್ರಸ್ತಾವಕ್ಕೆ ವಿರೋಧ ವ್ಯಕ್ತಪಡಿಸಿರುವ ರೈತರು, ತಮ್ಮ ಜೀವನಾಧಾರವಾಗಿರುವ ಭೂಮಿಯನ್ನು ಯಾವುದೇ ಕಾರಣಕ್ಕೂ ಬಿಟ್ಟುಕೊಡುವುದಿಲ್ಲ ಎಂದು ಸ್ಪಷ್ಟಪಡಿಸಿದರು. 'ಭೂಮಿ ಬಿಡಿ, ಇಲ್ಲವೇ ದಯಾಮರಣಕ್ಕೆ ಅವಕಾಶ ನೀಡಿ' ಎಂದು ಘೋಷಣೆ ಕೂಗಿದ ಅವರು, ಕೈಯಲ್ಲಿ ದಯಾಮರಣ ಕೋರಿ ಅರ್ಜಿಗಳನ್ನು ಹಿಡಿದು ಪ್ರತಿಭಟನೆ ನಡೆಸಿದರು.

ಜಡ್ಜ್ ಮುಂದೆ ಹಾಜರುಪಡಿಸಿ

ಪೊಲೀಸ್ ಭವನಕ್ಕೆ ಸ್ಥಳಾಂತರಿಸಿದ ಬಳಿಕವೂ ರೈತರು ಉಪವಾಸ ಮುಂದುವರಿಸಿದ್ದು, ತಮ್ಮನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿದ ಸಂದರ್ಭದಲ್ಲಿ ದಯಾಮರಣಕ್ಕೆ ಅವಕಾಶ ನೀಡುವಂತೆ ಮನವಿ ಸಲ್ಲಿಸುವುದಾಗಿ ತಿಳಿಸಿದ್ದಾರೆ. ಟೌನ್‌ಶಿಪ್ ಯೋಜನೆಯಿಂದ ಕೃಷಿ ಭೂಮಿ ಕಳೆದುಕೊಂಡು ಜೀವನ ನಡೆಸುವುದು ಕಷ್ಟವಾಗಲಿದೆ. ಹೀಗಾಗಿ ಸರ್ಕಾರ ಕೂಡಲೇ ಯೋಜನೆಯನ್ನು ಕೈಬಿಡಬೇಕು ಎಂದು ಆಗ್ರಹಿಸಿದರು.

ರೈತರ ಪ್ರತಿಭಟನೆಯ ಹಿನ್ನೆಲೆಯಲ್ಲಿ ಪೊಲೀಸ್ ಭವನದ ಸುತ್ತಮುತ್ತ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ. ಯೋಜನೆ ಕುರಿತು ಸರ್ಕಾರ ರೈತರೊಂದಿಗೆ ಮಾತುಕತೆ ನಡೆಸಿ, ಅವರ ಆತಂಕಗಳನ್ನು ಪರಿಹರಿಸಬೇಕು ಎಂಬ ಒತ್ತಾಯವೂ ಕೇಳಿಬಂದಿದೆ.

## ಮಾರ್ಫ್ ಚಿತ್ರ ತೆರವಿಗೆ ಮೆಟಾಗೆ ಹೈಕೋರ್ಟ್ ಸೂಚನೆ

● ವಿಕ್ರಮ ವಾಹಿನಿ । ನವದೆಹಲಿ

ಜಂತರ್ ಮಂತರ್‌ನಲ್ಲಿ ನಡೆದ ಪ್ರತಿಭಟನೆಯ ವೇಳೆ ಮಹಿಳೆಯೊಬ್ಬರ ಚಿತ್ರವನ್ನು ಕೃತಕ ಬುದ್ಧಿಮತ್ತೆ ಮತ್ತು ಫೇಸ್‌ಸ್ವಾಪ್ ತಂತ್ರಜ್ಞಾನ ಬಳಸಿ ತಿರುಚಿ ಸಾಮಾಜಿಕ ಜಾಲತಾಣಗಳಲ್ಲಿ ಹರಡಿದ ಆರೋಪಕ್ಕೆ ಸಂಬಂಧಿಸಿದಂತೆ ದೆಹಲಿ ಹೈಕೋರ್ಟ್ ಮಹತ್ವದ ನಿರ್ದೇಶನ ನೀಡಿದೆ.

ಮಹಿಳೆಗೆ ಸಂಬಂಧಿಸಿದ ಆಕ್ಷೇಪಾರ್ಹ ಚಿತ್ರಗಳು ಹಾಗೂ ಅವುಗಳ ಲಿಂಕ್‌ಗಳನ್ನು ತನ್ನ ವೇದಿಕೆಗಳಿಂದ 24 ಗಂಟೆಗಳೊಳಗೆ ತೆಗೆದುಹಾಕುವಂತೆ ಸಾಮಾಜಿಕ ಜಾಲತಾಣ ಸಂಸ್ಥೆ ಮೆಟಾಗೆ ನ್ಯಾಯಾಲಯ ಸೂಚಿಸಿದೆ. ಮಹಿಳೆಗೆ ಪೊಲೀಸ್ ರಕ್ಷಣೆ ನೀಡುವಂತೆ ಆದೇಶಿಸಿದ ನ್ಯಾಯಾಲಯ, ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿ ಪೊಲೀಸರಿಗೆ ನೋಟಿಸ್ ಜಾರಿ ಮಾಡಿ ಎರಡು ವಾರಗಳಲ್ಲಿ ಸ್ಥಿತಿಗತಿ ವರದಿ ಸಲ್ಲಿಸುವಂತೆ ಸೂಚಿಸಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ 'ಕಾಕ್ರೋಚ್ ಜನತಾ ಪಾರ್ಟಿ' (ಸಿಜೆಪಿ) ನಾಯಕರಾದ ಸೌರವ್ ದಾಸ್, ಅಭಿಜಿತ್ ಡಿಪ್ಕೆ, ಅಶುತೋಷ್ ರಂಕಾ ಹಾಗೂ ರತ್ನಾ ಸಿಂಗ್ ಅವರಿಗೆ ನ್ಯಾಯಾಲಯ ನೋಟಿಸ್ ಜಾರಿ ಮಾಡಿದೆ.

ಮಹಿಳೆಯ ಖಾಸಗಿತನ, ಗೌರವ ಮತ್ತು ಸುರಕ್ಷತೆಯನ್ನು ಪರಿಗಣಿಸಿ ಆಕ್ಷೇಪಾರ್ಹ ವಿಷಯಗಳ ಮತ್ತಷ್ಟು ಪ್ರಸರಣ ತಡೆಯುವುದು ಅಗತ್ಯ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ಪ್ರಕರಣದ ತನಿಖೆ ಮುಂದುವರಿದಿರುವ ಹಿನ್ನೆಲೆಯಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಲಭ್ಯವಿರುವ ಸಂಬಂಧಿತ ವಿಷಯಗಳ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಪೊಲೀಸರಿಗೆ ಸೂಚಿಸಿದೆ.

## ಬಿಡದಿ ಭೂಸ್ವಾಧೀನ ವಿರೋಧಿಸಿ ರೈತರ ಅಹೋರಾತ್ರಿ ಉಪವಾಸ

● ವಿಕ್ರಮ ವಾಹಿನಿ । ಬೈರಮಂಗಲ

ಬಿಡದಿ ಭೂಸ್ವಾಧೀನ ವಿರೋಧಿಸಿ ಬೈರಮಂಗಲದಲ್ಲಿ ರೈತರು ನಡೆಸುತ್ತಿರುವ ಅಹೋರಾತ್ರಿ ಉಪವಾಸ ಸತ್ಯಾಗ್ರಹ ಶುಕ್ರವಾರ ಎರಡನೇ ದಿನಕ್ಕೆ ಕಾಲಿಟ್ಟಿತು.

ಪ್ರತಿಭಟನಾ ಸ್ಥಳಕ್ಕೆ ಶುಕ್ರವಾರ ಬೆಳಿಗ್ಗೆ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಭೇಟಿ ನೀಡಿ, ಉಪವಾಸ ನಿರತ ರೈತರ ಆರೋಗ್ಯ ವಿಚಾರಿಸಿದರು. ರೈತರೊಂದಿಗೆ ನೆಲದ ಮೇಲೆ ಕುಳಿತು ಅವರ ಸಮಸ್ಯೆಗಳನ್ನು ಆಲಿಸಿದ ಅವರು, ಹೋರಾಟಕ್ಕೆ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದರು.

ಇದೇ ವೇಳೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ದೂರವಾಣಿ ಮೂಲಕ ಪ್ರತಿಭಟನಾ ನಿರತ ರೈತರೊಂದಿಗೆ ಮಾತನಾಡಿ ಧೈರ್ಯ ತುಂಬಿದರು. ರೈತರ ಹೋರಾಟಕ್ಕೆ ತಮ್ಮ ಬೆಂಬಲವಿದ್ದು, ನ್ಯಾಯಯುತ ಬೇಡಿಕೆಗಳಿಗಾಗಿ ನಡೆಯುತ್ತಿರುವ ಹೋರಾಟದಲ್ಲಿ ಜೊತೆಗಿರುವುದಾಗಿ ಭರವಸೆ ನೀಡಿದರು. ಫಲವತ್ತಾದ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಸರ್ಕಾರದ ಕ್ರಮವನ್ನು ವಿರೋಧಿಸಿದ ರೈತರು, ಭೂಸ್ವಾಧೀನ ಪ್ರಕ್ರಿಯೆ ಕೈಬಿಡುವಂತೆ ಆಗ್ರಹಿಸಿದರು.

## ಮಾದಾರ ಮಹಾಸಭೆಗೆ 11 ಎಕರೆ ಜಮೀನು ಮಂಜೂರು: ಮುನಿಯಪ್ಪ

● ವಿಕ್ರಮ ವಾಹಿನಿ । ಬೆಂಗಳೂರು

ಸಮುದಾಯದ ಶೈಕ್ಷಣಿಕ ಹಾಗೂ ಸಾಮಾಜಿಕ ಅಭಿವೃದ್ಧಿಗಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮಾದಾರ ಮಹಾಸಭೆಗೆ 11 ಎಕರೆ ಜಮೀನು ಒದಗಿಸಲಾಗಿದೆ ಎಂದು ಸಮಾಜ ಕಲ್ಯಾಣ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದರು.

ಅರಮನೆ ಮೈದಾನದ ತ್ರಿಪುರವಾಸಿನಿಯಲ್ಲಿ ನಗರಾಭಿವೃದ್ಧಿ ಇಲಾಖೆ ಹಾಗೂ ಪೌರಾಡಳಿತ ನಿರ್ದೇಶನಾಲಯದ ವತಿಯಿಂದ ಆಯೋಜಿಸಿದ್ದ ಪೌರಕಾರ್ಮಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಗರದ ಸ್ವಚ್ಛತೆ ಕಾಪಾಡುವಲ್ಲಿ ಪೌರಕಾರ್ಮಿಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಅವರ ಸೇವೆ ಸಮಾಜಕ್ಕೆ ಅಗತ್ಯವಾದದ್ದು. ಪೌರಕಾರ್ಮಿಕರ ಕಲ್ಯಾಣ ಹಾಗೂ ಅವರ ಮಕ್ಕಳ ಭವಿಷ್ಯಕ್ಕೆ ಸರ್ಕಾರ ಹೆಚ್ಚಿನ ಆದ್ಯತೆ ನೀಡಲಿದೆ ಎಂದರು.

ಪೌರಕಾರ್ಮಿಕರ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಿ, ಅವರು ವೈದ್ಯರು, ಎಂಜಿನಿಯರ್‌ಗಳು, ಐಎಎಸ್ ಮತ್ತು ಕೆಎಎಸ್ ಅಧಿಕಾರಿಗಳಾಗಿ ಬೆಳೆಯಲು ಅಗತ್ಯ ಅವಕಾಶಗಳನ್ನು ಕಲ್ಪಿಸಲಾಗುವುದು. ಡಾ. ಬಿ.ಆರ್. ಅಂಬೇಡ್ಕರ್ ಅವರ ಆಶಯದಂತೆ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದ್ದು, ವಿವಿಧೆಡೆ ಹೊಸ ವಸತಿ ಶಾಲೆಗಳನ್ನು ಆರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಪೌರಕಾರ್ಮಿಕರ ಹಲವು ವರ್ಷಗಳ ಹೋರಾಟದ ಫಲವಾಗಿ ಸಾವಿರಾರು ಕಾರ್ಮಿಕರನ್ನು ಖಾಯಂಗೊಳಿಸುವ ಕಾರ್ಯವನ್ನು ಸರ್ಕಾರ ಕೈಗೊಂಡಿದೆ. ಉಳಿದ ಲೋಡರ್‌ಗಳು, ಕ್ಲೀನರ್‌ಗಳು, ಚಾಲಕರು ಸೇರಿದಂತೆ ಸಂಬಂಧಿತ ಸಿಬ್ಬಂದಿಯ ಖಾಯಂ ನೇಮಕಾತಿ ಹಾಗೂ ಇತರ ಬೇಡಿಕೆಗಳ ಕುರಿತು ಸರ್ಕಾರದ ಗಮನಕ್ಕೆ ಮನವಿ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದ್ದು, ಶಿಕ್ಷಣ, ವಸತಿ ಮತ್ತು ಉದ್ಯೋಗಾವಕಾಶಗಳ ಮೂಲಕ ಸಾಮಾಜಿಕ ಸಮಾನತೆ ಸಾಧಿಸಲು ಹಲವು ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದೆ. ಮಾದಾರ ಮಹಾಸಭೆಗೆ ನೀಡಿರುವ 11 ಎಕರೆ ಜಮೀನನ್ನು ಶೈಕ್ಷಣಿಕ ಹಾಗೂ ಸಾಮಾಜಿಕ ಉದ್ದೇಶಗಳಿಗೆ ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಎಂದು ಸಚಿವರು ಹೇಳಿದರು.

ಪ್ರತಿಯೊಬ್ಬ ಮಗುವಿಗೂ ಉತ್ತಮ ಶಿಕ್ಷಣ ಹಾಗೂ ಯಾವುದೇ ಭೇದಭಾವವಿಲ್ಲದೆ ಸಮಾನ ಅವಕಾಶಗಳು ದೊರೆಯಬೇಕು ಎಂಬುದು ಸರ್ಕಾರದ ಆಶಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸಚಿವರಾದ ಎಚ್.ಸಿ. ಬಾಲಕೃಷ್ಣ, ಯತೀಂದ್ರ ಸಿದ್ದರಾಮಯ್ಯ, ಬಸವಂತಪ್ಪ, ಮಾಜಿ ಸಚಿವ ಎಚ್. ಆಂಜನೇಯ, ಶಾಸಕರು, ಅಧ್ಯಕ್ಷ ಅಶೋಕ ಸಾಲಪ್ಪ, ಮಾಜಿ ಮೇಯರ್ ನಾರಾಯಣ್ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.



ಸಿಎಂ ಡಿ ಕೆ ಶಿವಕುಮಾರ್ ಅವರು ಬೆಂಗಳೂರು ಅರಮನೆ ಮೈದಾನದಲ್ಲಿ ಪೌರಕಾರ್ಮಿಕರ ಜತೆ ಶುಕ್ರವಾರ ಊಟ ಮಾಡಿದರು. ಸಚಿವರಾದ ಕೆ ಎಚ್ ಮುನಿಯಪ್ಪ, ಯತೀಂದ್ರ ಸಿದ್ದರಾಮಯ್ಯ, ಎಚ್ ಸಿ ಬಾಲಕೃಷ್ಣ, ಬಸವಂತಪ್ಪ ಜತೆಗಿದ್ದರು.

## ಬಡವರ ಮತದಾನದ ಹಕ್ಕು ಕಸಿಯಲಾಗುತ್ತಿದೆ: ಬಿ.ಕೆ.ಹರಿಪ್ರಸಾದ್

**ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅಲ್ಪಸಂಖ್ಯಾತರು, ದಲಿತರು ಹಾಗೂ ಬಡವರ ಮತಗಳನ್ನು ಅಳಿಸಲಾಗುತ್ತಿದೆ ಎಂದು ಆರೋಪಿಸಿದ ಬಿ.ಕೆ.ಹರಿಪ್ರಸಾದ್, ಚುನಾವಣಾ ಆಯೋಗದ ಕ್ರಮಗಳ ವಿರುದ್ಧ ಸಮಗ್ರ ಸ್ವಾಯತ್ತ ಪರಿಶೀಲನೆಗೆ ಆಗ್ರಹಿಸಿದರು.**



● ವಿಕ್ರಮ ವಾಹಿನಿ । ಬೆಂಗಳೂರು

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಅಲ್ಪಸಂಖ್ಯಾತರು, ದಲಿತರು ಹಾಗೂ ಬಡವರ ಮತಗಳು ಹೆಚ್ಚಿನ ಸಂಖ್ಯೆಯಲ್ಲಿ ಅಳಿಸಲಾಗಿದೆ ಎಂದು ಕೆಪಿಸಿಸಿ ರಾಜ್ಯಾಧ್ಯಕ್ಷ ಬಿ.ಕೆ.ಹರಿಪ್ರಸಾದ್ ಆರೋಪಿಸಿದರು.

ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಬಬಲೇಶ್ವರ, ಹುಬ್ಬಳ್ಳಿ–ಧಾರವಾಡ ಸೇರಿದಂತೆ ಹಲವು ಪ್ರದೇಶಗಳಲ್ಲಿ ಮತಗಳನ್ನು ಅಳಿಸುವ ಪ್ರಯತ್ನ ನಡೆದಿದೆ. ತಪ್ಪು ಮತದಾರರ ಪಟ್ಟಿಯಲ್ಲಿ ಅಲ್ಲ, ಚುನಾವಣಾ ಆಯೋಗ ನಡೆಸುತ್ತಿರುವ ಎಸ್‌ಐಆರ್ ಪ್ರಕ್ರಿಯೆಯಲ್ಲಿದೆ ಎಂದು ದೂರಿದರು.

ತಮ್ಮ ಬಳಿ ಅಳಿಸಲಾಗಿರುವ ಸುಮಾರು 65 ಸಾವಿರ ಮತಗಳಿಗೆ ಸಂಬಂಧಿಸಿದ ಅರ್ಜಿಗಳಿದ್ದು, ಅವುಗಳಲ್ಲಿ ಮತದಾರರ ಸಹಿ ಇಲ್ಲದಿರುವುದು ಸೇರಿದಂತೆ ಹಲವು ಲೋಪಗಳು ಕಂಡುಬಂದಿವೆ ಎಂದು ಹೇಳಿದರು. ಬೆಳಗಾವಿಯ ಬಿಜೆಪಿ ಶಾಸಕ ಅಭಯ್ ಪಾಟೀಲ್ ಅವರು 2,500 ಮತದಾರರ ಮತಗಳನ್ನು ತೆಗೆದುಹಾಕುವಂತೆ ಬರೆದಿದ್ದಾರೆ ಎನ್ನಲಾದ ಪತ್ರವನ್ನೂ ಗುರುವಾರ ಬಿಡುಗಡೆ ಮಾಡಿರುವುದಾಗಿ ತಿಳಿಸಿದರು.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಕಳೆದ 10 ತಿಂಗಳಲ್ಲಿ ಇತರ ಇಬ್ಬರು ಚುನಾವಣಾ ಆಯುಕ್ತರ ಭಿನ್ನಮತದ ನಡುವೆಯೂ 14 ಬಾರಿ ಏಕಪಕ್ಷೀಯ ನಿರ್ಧಾರ ಕೈಗೊಂಡಿದ್ದಾರೆ ಎಂದು ಹರಿಪ್ರಸಾದ್ ಆರೋಪಿಸಿದರು. ಇಬ್ಬರು ಆಯುಕ್ತರ ವಿರೋಧದ ನಡುವೆಯೂ ಫಾರಂ–6ರಲ್ಲಿ ಬದಲಾವಣೆ ಮಾಡಲಾಗಿದೆ ಎಂದರು.

ಬಿಹಾರದಲ್ಲಿ 63 ಲಕ್ಷ, ಪಶ್ಚಿಮ ಬಂಗಾಳದಲ್ಲಿ 91 ಲಕ್ಷ ಹಾಗೂ ಕರ್ನಾಟಕದಲ್ಲಿ 1.07 ಕೋಟಿ ಮತಗಳನ್ನು ಅಳಿಸಲಾಗಿದೆ ಎಂದು ಅವರು ಆರೋಪಿಸಿದರು. ಈ ಕುರಿತು ಸಮಗ್ರ ಹಾಗೂ ಸ್ವಾಯತ್ತ ಪರಿಶೀಲನೆ ನಡೆಸಬೇಕು ಎಂದು ಒತ್ತಾಯಿಸಿದರು.

ಚುನಾವಣಾ ಆಯೋಗದ ವಿರುದ್ಧದ ಆರೋಪಗಳಿಗೆ ಆಯೋಗವೇ ಉತ್ತರಿಸಬೇಕು. ಆದರೆ ಕೇಂದ್ರ ಬಿಜೆಪಿ ನಾಯಕರು ಆಯೋಗದ ಪರವಾಗಿ ಸಮರ್ಥನೆ ನೀಡುತ್ತಿದ್ದಾರೆ ಎಂದು ಟೀಕಿಸಿದರು.

ಮುಖ್ಯ ಚುನಾವಣಾ ಆಯುಕ್ತರು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ ಅವರು, ಎಸ್‌ಐಆರ್ ವಿರುದ್ಧ ಸೆ.26ರಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಪ್ರತಿಭಟನೆ ನಡೆಸಲಾಗುವುದು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನಂಬಿಕೆ ಇರುವ ಎಲ್ಲ ಪಕ್ಷಗಳಿಗೂ ಪ್ರತಿಭಟನೆಯಲ್ಲಿ ಭಾಗವಹಿಸಲು ಆಹ್ವಾನ ನೀಡಲಾಗಿದೆ ಎಂದು ತಿಳಿಸಿದರು.

## ಬಿಎನ್‌ಎಸ್‌ಎಸ್ ಸೆಕ್ಷನ್ 35ರ ಕಟ್ಟುನಿಟ್ಟಿನ ಪಾಲನೆಗೆ ರಾಜ್ಯ ಪೊಲೀಸರಿಗೆ ಸೂಚನೆ

● ವಿಕ್ರಮ ವಾಹಿನಿ । ಬೆಂಗಳೂರು

ಏಳು ವರ್ಷಗಳವರೆಗೆ ಶಿಕ್ಷೆ ವಿಧಿಸಬಹುದಾದ ಅಪರಾಧಗಳಲ್ಲಿ ಬಂಧನಕ್ಕಿಂತ ಮೊದಲು ಬಿಎನ್‌ಎಸ್‌ಎಸ್ (ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ) ಸೆಕ್ಷನ್ 35(3)ರಡಿ ನೋಟಿಸ್ ಜಾರಿ ಮಾಡುವ ನಿಯಮವನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ರಾಜ್ಯದ ಎಲ್ಲ ಪೊಲೀಸ್ ಠಾಣೆಗಳಿಗೆ ಸೂಚಿಸಲಾಗಿದೆ ಎಂದು ಸರ್ಕಾರಿ ವಕೀಲರು ಕರ್ನಾಟಕ ಹೈಕೋರ್ಟ್‌ಗೆ ತಿಳಿಸಿದ್ದಾರೆ.

ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಪೀಠವು ವಿಚಾರಣೆ ನಡೆಸಿದ ಮೋಹನ ಗೌಡ ಅವರ ಪ್ರಕರಣದಲ್ಲಿ ಈ ಮಾಹಿತಿ ನೀಡಲಾಗಿದೆ. ನ್ಯಾಯಾಲಯದ ಹಿಂದಿನ ನಿರ್ದೇಶನದ ಹಿನ್ನೆಲೆಯಲ್ಲಿ ರಾಜ್ಯ ಪೊಲೀಸ್ ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾನಿರೀಕ್ಷಕರು (ಡಿಜಿ–ಐಜಿಪಿ) ಸೆ.19ರಂದು ಎಲ್‌ಆ್ಯಂಡ್‌ಓ/ಎಂಐಎಸ್‌ಸಿ/178/2026 ಸಂಖ್ಯೆಯ ಸುತ್ತೋಲೆ ಹೊರಡಿಸಿ ರಾಜ್ಯದ ಎಲ್ಲ ಪೊಲೀಸ್ ಠಾಣೆಗಳು, ಉಪವಿಭಾಗಗಳು ಹಾಗೂ ತನಿಖಾ ದಳಗಳಿಗೆ ರವಾನಿಸಿದ್ದಾರೆ ಎಂದು ಸರ್ಕಾರಿ ವಕೀಲರು ತಿಳಿಸಿದರು.

ಏಳು ವರ್ಷಗಳವರೆಗೆ ಶಿಕ್ಷೆ ವಿಧಿಸಬಹುದಾದ ಅಪರಾಧಗಳಲ್ಲಿ ಸೆಕ್ಷನ್ 35(3)ರಡಿ ನೋಟಿಸ್ ನೀಡುವುದು ನಿಯಮವಾಗಿದ್ದು, ಬಂಧನವು ಅಪವಾದವಾಗಿರಬೇಕು. ಬಂಧನ ಅಗತ್ಯವೆಂದು ಕಂಡುಬಂದಲ್ಲಿ ಅದಕ್ಕೆ ಕಾರಣಗಳನ್ನು ದಾಖಲಿಸುವುದು ಕಡ್ಡಾಯ ಎಂದು ಸುತ್ತೋಲೆಯಲ್ಲಿ ಸೂಚಿಸಲಾಗಿದೆ. ಸುಪ್ರೀಂ ಕೋರ್ಟ್‌ನ ಸತೇಂದರ್ ಕುಮಾರ್ ಆಂಟಿಲ್ ಪ್ರಕರಣ ಸೇರಿದಂತೆ ಸಂಬಂಧಿತ ತೀರ್ಪುಗಳ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆಯೂ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಸುಪ್ರೀಂ ಕೋರ್ಟ್ ಕೂಡ ಸೆಕ್ಷನ್ 35ರಡಿ ನೋಟಿಸ್ ನೀಡಿರುವ ಪ್ರಕರಣಗಳಲ್ಲಿ ಬಂಧನವನ್ನು ವಾಡಿಕೆಯ ಕ್ರಮವಾಗಿ ಕೈಗೊಳ್ಳಬಾರದು ಎಂದು ಸ್ಪಷ್ಟಪಡಿಸಿದೆ.

ಪೊಲೀಸರು ನೋಟಿಸ್ ಜಾರಿ ಮಾಡಿದ ಬಳಿಕ ಸಂಬಂಧಪಟ್ಟ ವ್ಯಕ್ತಿಯು ತನಿಖೆಗೆ ಸಹಕರಿಸುತ್ತಿದ್ದರೆ, ಕೇವಲ ವಿಚಾರಣೆಗಾಗಿ ಅವರನ್ನು ಬಂಧಿಸುವ ಅಗತ್ಯವಿಲ್ಲ ಎಂದು ಸುತ್ತೋಲೆಯಲ್ಲಿ ಸ್ಪಷ್ಟಪಡಿಸಲಾಗಿದೆ.

ನೋಟಿಸ್ ಜಾರಿ, ಬಂಧನ ಹಾಗೂ ತನಿಖಾ ಪ್ರಕ್ರಿಯೆಗಳಲ್ಲಿ ಕಾನೂನುಬದ್ಧ ನಿಯಮಗಳನ್ನು ಉಲ್ಲಂಘಿಸದಂತೆ ಎಲ್ಲ ಹಂತಗಳಲ್ಲೂ ಎಚ್ಚರಿಕೆ ವಹಿಸಬೇಕು ಎಂದು ಪೊಲೀಸ್ ಅಧಿಕಾರಿಗಳಿಗೆ ನಿರ್ದೇಶಿಸಲಾಗಿದೆ. ಸೆಕ್ಷನ್ 35ರ ನಿಯಮಗಳನ್ನು ಪಾಲಿಸುವ ಮೂಲಕ ಅನಗತ್ಯ ಬಂಧನಗಳನ್ನು ತಪ್ಪಿಸಿ, ನಾಗರಿಕರ ಹಕ್ಕುಗಳನ್ನು ರಕ್ಷಿಸುವುದರೊಂದಿಗೆ ತನಿಖೆಯ ಅಗತ್ಯತೆಗಳನ್ನೂ ಸಮತೋಲನಗೊಳಿಸುವಂತೆ ಸೂಚಿಸಲಾಗಿದೆ.

## ಕೃಷಿ ಮತ್ತು ತೋಟಗಾರಿಕಾ ನಷ್ಟವನ್ನು ತಗ್ಗಿಸಲು ಮತ್ತು ರೈತರ ಆದಾಯವನ್ನು ರಕ್ಷಿಸಲು ರಾಜ್ಯದ ದಿಟ್ಟ ಹೆಜ್ಜೆ

**ಕೃಷಿ ಹಾಗೂ ತೋಟಗಾರಿಕಾ ಉತ್ಪನ್ನಗಳ ಕಟಾವಿನ ನಂತರದ ನಷ್ಟ ತಗ್ಗಿಸಿ ರೈತರ ಆದಾಯ ರಕ್ಷಿಸುವ ಉದ್ದೇಶದಿಂದ ರಾಜ್ಯ ಸರ್ಕಾರ 'ಸಂಪೂರ್ಣ ಗ್ರ್ಯಾಂಡ್ ಚಾಲೆಂಜ್ 2026' ಹಮ್ಮಿಕೊಂಡಿದ್ದು, 210 ಅರ್ಜಿಗಳ ಪೈಕಿ ಆರು ನವೀನ ಪರಿಹಾರಗಳನ್ನು ಆಯ್ಕೆ ಮಾಡಿದೆ. ಆಯ್ಕೆಯಾದ ಪರಿಹಾರಗಳಿಗೆ ಸರ್ಕಾರಿ ಬೆಂಬಲ, ಮಾರುಕಟ್ಟೆ ಸಂಪರ್ಕ ಹಾಗೂ ಹೂಡಿಕೆ ಅವಕಾಶ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.**

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ರೈತರ ಬೆಳೆಗಳ ಕಟಾವಿನ ನಂತರದ ನಷ್ಟ ಮತ್ತು ಆಹಾರ ಸಂರಕ್ಷಣೆಯ ಮೂಲಕ ವ್ಯರ್ಥವನ್ನು ತಡೆಯಲು ಹಾಗೂ ರೈತರ ಆದಾಯವನ್ನು ಹೆಚ್ಚಿಸಲು ಮಾದರಿ ಪರಿಹಾರಗಳನ್ನು ಗುರುತಿಸುವ ಗುರಿಯೊಂದಿಗೆ ಕನಾಟಕ ಸರ್ಕಾರ 'ಸಂಪೂರ್ಣ ಗ್ರ್ಯಾಂಡ್ ಚಾಲೆಂಜ್ 2026' ನ್ನು ಹಮ್ಮಿಕೊಂಡಿದೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ. ಶಾಲಿನಿ ರಜನೀಶ್ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಸಂಪೂರ್ಣ ಗ್ರ್ಯಾಂಡ್ ಚಾಲೆಂಜ್ 2026' ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಕರ್ನಾಟಕ ಸರ್ಕಾರದ ನಾವೀನ್ಯತಾ ಉಪಕ್ರಮವಾದ 'ಸಂಪೂರ್ಣ ಗ್ರ್ಯಾಂಡ್ ಚಾಲೆಂಜ್ 2026' ಮೂಲಕ ಆರು ನಾವೀನ್ಯತಾ ಪರಿಹಾರಗಳನ್ನು ಅಂತಿಮಗೊಳಿಸಲಾಗಿದ್ದು, ಇವು ಮುಂದಿನ ಹಂತದಲ್ಲಿ ಸರ್ಕಾರಿ, ಮಾರುಕಟ್ಟೆ ಮತ್ತು ಹೂಡಿಕೆ ಸಂಪರ್ಕಗಳನ್ನು ಪಡೆದುಕೊಳ್ಳಲಿವೆ ಎಂದು ಹೇಳಿದರು.

ಉನ್ನತ ಮಟ್ಟದ ಸ್ಟೀರಿಂಗ್ ಸಮಿತಿಯ ಈ ಸಭೆಯಲ್ಲಿ ಭಾರತದಾದ್ಯಂತದ ಆಹಾರ ಮತ್ತು ಪಾನೀಯ, ಅಗ್ರಿಟೆಕ್, ಕೃಷಿ–ವ್ಯಾಪಾರ, ಪರಿಸರ ವಿಜ್ಞಾನ ಮತ್ತು ಲೋಕೋಪಕಾರಿ ಕ್ಷೇತ್ರಗಳ ಹಿರಿಯ ಮಾರುಕಟ್ಟೆ ನಾಯಕರು ಭಾಗವಹಿಸಿದ್ದರು.

'ಸಂಪೂರ್ಣ 2026' ವೇದಿಕೆಯ ಭಾಗವಾಗಿ ಕರ್ನಾಟಕ ಸರ್ಕಾರದ ದೂರದೃಷ್ಟಿ ಮತ್ತು ಮಾರ್ಗದರ್ಶನದಲ್ಲಿ ಈ ಉಪಕ್ರಮವನ್ನು ನಡೆಸಲಾಗುತ್ತಿದೆ. ನಾವೀನ್ಯಕಾರರು, ಉದ್ಯಮಿಗಳು, ಸಂಶೋಧಕರು, ಹೂಡಿಕೆದಾರರು ಮತ್ತು ಸರ್ಕಾರಿ ಸಂಸ್ಥೆಗಳನ್ನು ಒಂದೆಡೆ ಸೇರಿಸಿ ಆಹಾರ ನಷ್ಟದ ಸಮಸ್ಯೆಯನ್ನು ಬೃಹತ್ ಮಟ್ಟದಲ್ಲಿ ಪರಿಹರಿಸುವುದು ಇದರ ಆಶಯವಾಗಿದೆ. ಕರ್ನಾಟಕ ಸರ್ಕಾರದ ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ಶ್ರೀ ಆರ್. ಗಿರೀಶ್ ಐ.ಎ.ಎಸ್. ಅವರ ಬೆಂಬಲದೊಂದಿಗೆ ಈ ವೇದಿಕೆಯನ್ನು ರೂಪಿಸಲಾಗಿದೆ.



ಕರ್ನಾಟಕದ ಕೃಷಿ ಮತ್ತು ತೋಟಗಾರಿಕೆ ಮೌಲ್ಯ ಸರಪಳಿಯಲ್ಲಿ ಆಹಾರ ನಷ್ಟ ಮತ್ತು ಕಟಾವಿನ ನಂತರದ ಅಡಚಣೆಗಳನ್ನು ತಡೆಯಬಲ್ಲ ತಂತ್ರಜ್ಞಾನ ಆಧಾರಿತ ಹಾಗೂ ತಂತ್ರಜ್ಞಾನೇತರ ಪರಿಹಾರಗಳನ್ನು ಗುರುತಿಸಲು 'ಸಂಪೂರ್ಣ ಗ್ರ್ಯಾಂಡ್ ಚಾಲೆಂಜ್' ಅನ್ನು ವಿನ್ಯಾಸಗೊಳಿಸಲಾಗಿದೆ. ಆಹಾರ ನಷ್ಟವನ್ನು ಕೇವಲ ವ್ಯರ್ಥದ ಸಮಸ್ಯೆಯಾಗಿ ನೋಡದೆ, ರೈತ ಸಮುದಾಯದ ನೇರ ಆರ್ಥಿಕ ಸವಾಲಾಗಿ ಪರಿಗಣಿಸಿ ಇದಕ್ಕೆ ಪರಿಹಾರ ಕಂಡುಕೊಳ್ಳುವುದು ಸಂಪೂರ್ಣ ವೇದಿಕೆಯ ಮುಖ್ಯ ಉದ್ದೇಶವಾಗಿದೆ. ಈ ನಷ್ಟವನ್ನು ಕಡಿಮೆ ಮಾಡುವ ಮೂಲಕ ರೈತರ ಉತ್ಪನ್ನಗಳ ಮೌಲ್ಯವನ್ನು ಕಾಪಾಡಿಕೊಳ್ಳಬಹುದು, ರೈತರ ಆದಾಯವನ್ನು ಬಲಪಡಿಸಬಹುದು ಮತ್ತು ಕೃಷಿ–ತೋಟಗಾರಿಕಾ ಆರ್ಥಿಕ ಲಾಭವನ್ನು ಹೆಚ್ಚಿಸಬಹುದಾಗಿದೆ.

ಥಿಂಕ್ ಥ್ರೂ ಕನ್ಸಲ್ಟಿಂಗ್ ಸಂಸ್ಥಾಪಕಿ ಹಾಗೂ ಎಬಿಡಬ್ಲ್ಯುಸಿಐ ಪ್ರಧಾನ ಕಾರ್ಯದರ್ಶಿ ಡಾ. ಪರುಲ್ ಸೋನಿ ಮತ್ತು ಗೇನ್ ಭಾರತದ ದೇಶಿ ನಿರ್ದೇಶಕಿ ಡಾ. ಭುವನೇಶ್ವರಿ ಬಾಲಸುಬ್ರಮಣಿಯನ್ ಅವರು ಈ ಕಾರ್ಯಕ್ರಮದ ರೂಪುರೇಷೆಗಳನ್ನು ಸಿದ್ಧಪಡಿಸಿದ್ದಾರೆ. ಆವಿಷ್ಕಾರಗಳನ್ನು ಗುರುತಿಸುವುದರ ಜೊತೆಗೆ ಅವುಗಳನ್ನು ಸರ್ಕಾರದ ಯೋಜನೆಗಳಲ್ಲಿ ಅಳವಡಿಕೆ, ಮಾರುಕಟ್ಟೆ ಪ್ರವೇಶ ಮತ್ತು ಹೂಡಿಕೆ ಅವಕಾಶಗಳತ್ತ ಕೊಂಡೊಯ್ಯಲು ಈ ಕಾರ್ಯಕ್ರಮವು ಒಂದು ವ್ಯವಸ್ಥಿತ ಮಾರ್ಗವನ್ನು ಒದಗಿಸುತ್ತದೆ.

ಕೃಷಿ–ಉದ್ಯಮಗಳು, ಎಫ್.ಪಿ.ಓ ಸಂಬಂಧಿತ ಉದ್ಯಮಗಳು, ಶೈಕ್ಷಣಿಕ ಮತ್ತು ಸಂಶೋಧನಾ ಸಂಸ್ಥೆಗಳು, ಇನ್ಕ್ಯುಬೇಟರ್ಗಳು ಮತ್ತು ಸರ್ಕಾರಿ ಸಂಸ್ಥೆಗಳನ್ನು ಒಳಗೊಂಡ ವ್ಯಾಪಕ ಸಂಪರ್ಕ ಅಭಿಯಾನದ ಮೂಲಕ ಈ ಗ್ರ್ಯಾಂಡ್ ಚಾಲೆಂಜ್ ಗೆ ಒಟ್ಟು 210 ಅರ್ಜಿಗಳು ಸಲ್ಲಿಕೆಯಾಗಿದ್ದವು. ಈ ಪ್ರಚಾರ ಅಭಿಯಾನವು ಸರಿಸುಮಾರು 1,062 ಹಾಗೂ 442 ಸಾಂಸ್ಥಿಕ ಸಂಸ್ಥೆಗಳನ್ನು ತಲುಪಿದ್ದು, 10 ವೆಬಿನಾರ್ ಗಳ ಮೂಲಕ 1,162 ನೋಂದಣಿಗಳು ಮತ್ತು 1,047 ಭಾಗವಹಿಸುವಿಕೆ ದಾಖಲಾಗಿದೆ.

'ಸಂಪೂರ್ಣ ಗ್ರ್ಯಾಂಡ್ ಚಾಲೆಂಜ್ 2026' ಕಾರ್ಯಕ್ರಮದ ಸಮಾರೋಪ ಸಮಾರಂಭವು ಅಕ್ಟೋಬರ್ 15 ರಿಂದ 18 ರವರೆಗೆ ಬೆಂಗಳೂರಿನ ಜಿ.ಕೆ.ವಿ.ಕೆ ಕ್ಯಾಂಪಸ್ ನಲ್ಲಿ ನಡೆಯಲಿರುವ 'ಕೃಷಿಮೇಳ 2026'ರಲ್ಲಿ ಜರುಗಲಿದೆ. ಇಲ್ಲಿ ಆಯ್ಕೆಯಾದ ಪರಿಹಾರಗಳನ್ನು ಗೌರವಿಸಲಾಗುವುದು ಮತ್ತು ಸರ್ಕಾರಿ, ಮಾರುಕಟ್ಟೆ ಹಾಗೂ ಬಂಡವಾಳ ಕ್ಷೇತ್ರದ ಪ್ರಮುಖರೊಂದಿಗೆ ಸಂಪರ್ಕ ಕಲ್ಪಿಸಲಾಗುತ್ತದೆ.

ಸಂಪೂರ್ಣ 2026ರ ಕುರಿತು: ಸಂಪೂರ್ಣ 2026 ಎಂಬುದು ಕರ್ನಾಟಕ ಸರ್ಕಾರದ ಬೆಂಬಲದೊಂದಿಗೆ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯ ಆಶ್ರಯದಲ್ಲಿ, GAIN ನ್ಯೂಟ್ರಿಷನ್ ಕನೆಕ್ಟ್, ಥಿಂಕ್ ಥ್ರೂ ಕನ್ಸಲ್ಟಿಂಗ್ ಮತ್ತು ಂಃಘಅಖ ಸಹಯೋಗದೊಂದಿಗೆ ರೂಪುಗೊಂಡ ಬಹು–ಕ್ಷೇತ್ರದ ವೇದಿಕೆಯಾಗಿದೆ. ಇದು ಕೃಷಿ ಮತ್ತು ತೋಟಗಾರಿಕಾ ಮೌಲ್ಯ ಸರಪಳಿಯಲ್ಲಿ ನಾವೀನ್ಯತಾ ಪರಿಹಾರಗಳನ್ನು ವೇಗವಾಗಿ ಗುರುತಿಸಲು, ಅಳವಡಿಸಿಕೊಳ್ಳಲು ಮತ್ತು ವಿಸ್ತರಿಸಲು ಸಹಾಯ ಮಾಡುತ್ತದೆ.

ಕೃಷಿ ಮತ್ತು ತೋಟಗಾರಿಕಾ ಆಹಾರ ನಷ್ಟವನ್ನು ಕಡಿಮೆ ಮಾಡುವ, ರೈತರ ಆದಾಯವನ್ನು ರಕ್ಷಿಸುವ ಹಾಗೂ ಹವಾಮಾನ–ಸ್ಥಿತಿಸ್ಥಾಪಕ ಆಹಾರ ವ್ಯವಸ್ಥೆಗಳಿಗೆ ಕೊಡುಗೆ ನೀಡುವ ಪರಿಹಾರಗಳ ಮೇಲೆ 'ಸಂಪೂರ್ಣ' ವೇದಿಕೆಯು ಗಮನ ಕೇಂದ್ರೀಕರಿಸುತ್ತದೆ. 'ಸಂಪೂರ್ಣ ಗ್ರ್ಯಾಂಡ್ ಚಾಲೆಂಜ್' ನಂತಹ ಉಪಕ್ರಮಗಳ ಮೂಲಕ, ಕಟಾವಿನ ನಂತರದ ಅಡಚಣೆಗಳಿಂದ ರೈತ ಸಮುದಾಯದ ಆದಾಯ ನಷ್ಟವಾಗುವುದನ್ನು ತಡೆಗಟ್ಟಿ, ಹೆಚ್ಚಿನ ಮೌಲ್ಯವನ್ನು ಉಳಿಸಿಕೊಳ್ಳಲು ಈ ವೇದಿಕೆ ಸಹಾಯ ಮಾಡುತ್ತದೆ.

ಈ ಉಪಕ್ರಮಕ್ಕೆ ಎಂಎಂ ಆ್ಯಕ್ಟಿವ್ ಸೈ–ಟೆಕ್ ಕಮ್ಯುನಿಕೇಷನ್ಸ್ ಮತ್ತು ಕೃಷಿ ಕಲ್ಪ ಫೌಂಡೇಶನ್ ಸಹಯೋಗಿ ಪಾಲುದಾರರಾಗಿ ಬೆಂಬಲ ನೀಡುತ್ತಿವೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 173,